28 August 2026 Friday SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

info.varthaman@gmail.com

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN Volume: 69 Issue: 263 Pages: 06 KA/SK/MYS/1098/2023-2025 R.N.I. No.3577/1957 www.varthaman.in Price-3

ಭಾವನಾಂತರಂಗ

ಅವರವರ ಯೋಗ್ಯತೆಗೆ ತಕ್ಕಂತೆ ಎಲ್ಲರೂ ಸುಖಿಗಳೇ! ಆದರೆ ಇನ್ನೊಬ್ಬರಿಗೆ ತಮ್ಮನ್ನು ಹೋಲಿಸಿಕೊಂಡು ದುಃಖಿಗಳಾಗುತ್ತಾರೆ ಅಷ್ಟೇ!

-ಸ್ನೇಹಾ ಆನಂದ್

ಇಂದು ಅರಮನೆಗೆ ದಸರಾ ಗಜಪಡೆ ಪ್ರವೇಶ ಪುಟ ಸಂ. 2

ಮೈಸೂರಿನಲ್ಲೂ ಭೂಸ್ವಾಧೀನ ಪ್ರಕ್ರಿಯೆ: ರೈತರ ಆಕ್ರೋಶ ಪುಟ ಸಂ. 3

ಗ್ರಾಪಂ ಮಟ್ಟದಲ್ಲೂ ಗ್ಯಾರಂಟಿ ಅರಿವು ಮೂಡಿಸುವಂತೆ ಸೂಚನೆ ಪುಟ ಸಂ. 4

ಯಾವುದೇ ಫೈಲ್ ನನ್ನ ಬಳಿ ಬರದೇ ಹೋಗುವುದಿಲ್ಲ: ಖರ್ಗೆ

ಬೆಂಗಳೂರು: ಸಚಿವ ಸಂಪುಟಕ್ಕೆ ಯಾರನ್ನೇ ಸೇರಿಸಬೇಕಿದ್ದರೂ ಅಥವಾ ತೆಗೆಯಬೇಕಾದ್ದರೂ ನನ್ನ ಬಳಿಯೇ ಬರಬೇಕು. ಯಾವುದೇ ಫೈಲ್ ನನ್ನ ಬಳಿ ಬರದೇ ಹೋಗುವುದಿಲ್ಲ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ತಿಳಿಸಿದರು.



ಸಚಿವ ಸಂಪುಟ ಬದಲಾವಣೆ ವಿಚಾರವಾಗಿ ಸಿಎಂ ಡಿಕೆಶಿ ದೇಹಲಿ ಭೇಟಿ ಸಂಬಂಧ ಕಲಬುರಗಿ ವಿಮಾನ ನಿಲ್ದಾಣದಲ್ಲಿ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದರು. ನಿಮಗೇನಾದರೂ ಗೊತ್ತಿದ್ದರೆ ಹೇಳಿ, ನನಗೇನು ಗೊತ್ತಿಲ್ಲ. ನಾನು ಕಲಬುರಗಿಯಲ್ಲಿ ಇದ್ದೇನೆ. ಏನಾದರೂ ಆಗಬೇಕಿದ್ದರೆ ನನ್ನ ಬಳಿಯೇ ಬರಬೇಕು ತಾನೆ ಎಂದು ಪ್ರಶ್ನಿಸಿದರು.

ಯಾರನ್ನ ತೆಗೆಯಬೇಕಾದ್ರೂ ನನ್ನ ಬಳಿಯೇ ಬರಬೇಕು. ಹಾಗೇ ನನ್ನ ಬಳಿ ಫೈಲ್ ಬಂದಾಗ ನಿಮಗೆ ತಿಳಿಸುತ್ತೇನೆ ಎಂದು ಹೇಳಿದರು.

ನೇಪಾಳ ಪ್ರವಾಹದಲ್ಲಿ ಕರ್ನಾಟಕ ಮಾತ್ರ ವಲ್ಲ, ದೇಶದ ಸಾಕಷ್ಟು ಜನ ಸಿಲುಕಿದ್ದಾರೆ. ನೂರಾರು ಜನ ಕೊಚ್ಚಿಹೋಗಿದ್ದಾರೆ. ಅವರೆಲ್ಲರಿಗೂ ನಾನು ಶ್ರದ್ಧಾಂಜಲಿ ಅರ್ಪಿಸುತ್ತೇನೆ. ಜೊತೆಗೆ ಪ್ರಧಾನಿಗೆ ಪತ್ರ ಬರೆದಿದ್ದೇನೆ. ದೇಶದ ಎಷ್ಟು ಜನ ಪ್ರಾಣ ಕಳೆದುಕೊಂಡಿದ್ದಾರೆ ಅವರಿಗೆ ಪರಹಾರ ಕೊಡಬೇಕು. ನೇಪಾಳದ ಜೊತೆಗೆ ನಿಲ್ಲುವಂತೆ ಕೂಡ ಪತ್ರ ಬರೆದಿದ್ದೇನೆ ಎಂದು ತಿಳಿಸಿದರು.

ಶ್ರೀಕಂಠೇಶ್ವರ ದೇವಾಲಯದಲ್ಲಿ 4ರಿಂದ 5 ಕೋಟಿ ಅವ್ಯವಹಾರ

ಸಮಗ್ರ ತನಿಖೆಗೆ ವ್ಯವಸ್ಥಾಪನ ಸಮಿತಿ ಸೂಚನೆ

ಮೈಸೂರು: ದಕ್ಷಿಣ ಕಾಶಿ ಎಂದೇ ಹೆಸರಾದ ನಂಜನಗೂಡಿನ ಶ್ರೀಕಂಠೇಶ್ವರ ಸ್ವಾಮಿ ದೇವಾಲಯದ 2024–25ನೇ ಸಾಲಿನ ಲೆಕ್ಕಪತ್ರದಲ್ಲಿ ಕೋಟ್ಯಂತರ ರೂಪಾಯಿ ಅಕ್ರಮ ನಡೆದಿರುವುದು ಬೆಳಕಿಗೆ ಬಂದಿದೆ.

ಶಾಸಕ ದರ್ಶನ್ ಧ್ರುವನಾರಾಯಣ್ ನೇತೃತ್ವದಲ್ಲಿ ನಡೆದ ದೇವಾಲಯದ ವ್ಯವಸ್ಥಾಪನಾ ಸಮಿತಿ ಸಭೆಯಲ್ಲಿ ವಾರ್ಷಿಕ ಆಯವ್ಯಯ ಪರಿಶೀಲನೆ ನಡೆಸಿದಾಗ, 2024–25ನೇ ಸಾಲಿನ ಲೆಕ್ಕಪತ್ರದಲ್ಲಿ ಸುಮಾರು 4 ರಿಂದ 5 ಕೋಟಿ ರೂಪಾಯಿ ಅಕ್ರಮ ನಡೆದಿರುವ ಶಂಕೆ ವ್ಯಕ್ತವಾಗಿದೆ. ಈ ಹಿನ್ನೆಲೆಯಲ್ಲಿ ದೇವಾಲಯದ ವ್ಯವಸ್ಥಾಪನ ಸಮಿತಿ ಸಭೆಯಲ್ಲಿ ಸಮಗ್ರ ತನಿಖೆಗೆ ಆದೇಶಿಸಲಾಗಿದೆ.

ದೇವಾಲಯಕ್ಕೆ ಒಟ್ಟು 25.86 ಕೋಟಿ ರೂ. ಆದಾಯ ಬಂದಿದೆ. ಅದರಲ್ಲಿ 25.68 ಕೋಟಿ ರೂ. ಖರ್ಚು ತೋರಿಸಲಾಗಿದೆ. ಇದರಲ್ಲಿ 4 ರಿಂದ 5 ಕೋಟಿ ರೂ. ದುರುಪಯೋಗ ಆಗಿರುವ ಬಗ್ಗೆ ಸಂಶಯ ಮೂಡಿದೆ. ಈ ಬಗ್ಗೆ ಶಾಸಕ ದರ್ಶನ್

ಪುಟ 2ಕ್ಕೆ

ನೇಪಾಳ ಪ್ರವಾಹ: 288 ಭಾರತೀಯರು ನಾಪತ್ತೆ

ನವದೆಹಲಿ: ನೇಪಾಳದಲ್ಲಿ ಉಂಟಾಗಿರುವ ರಣಭೀಕರ ಪ್ರವಾಹದಿಂದ 288 ಭಾರತೀಯ ಪ್ರಜೆಗಳು ನಾಪತ್ತೆಯಾಗಿದ್ದಾರೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ಗುರುವಾರ ಮಾಹಿತಿ ನೀಡಿದೆ.

ಈ ದುರಂತದಲ್ಲಿ 270 ಮಂದಿ ಮೃತಪಟ್ಟಿದ್ದಾರೆ. ಸಾವಿರಾರು ಜನ ನಾಪತ್ತೆಯಾಗಿದ್ದಾರೆ. ಭಾರತೀಯರ ಪತ್ತೆಗೆ ಕಠ್ಮಂಡುವಿನ ಭಾರತೀಯ ರಾಯಭಾರ ಕಚೇರಿ ನೇಪಾಳ ಅಧಿಕಾರಿಗಳ ಜೊತೆ ನಿರಂತರ ಸಂಪರ್ಕದಲ್ಲಿದೆ ಎಂದು ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ತಿಳಿಸಿದರು.

ಇನ್ನೂ 288 ಭಾರತೀಯ ಪ್ರಜೆಗಳು ಸಂಪರ್ಕಕ್ಕೆ ಸಿಗುತ್ತಿಲ್ಲ. ಇವರಲ್ಲಿ ತ್ರಿಶೂಲಿ–1 ಜಲವಿದ್ಯುತ್ ಯೋಜನೆಯಲ್ಲಿ ಕೆಲಸ ಮಾಡುತ್ತಿರುವ 73 ಮಂದಿ ಸೇರಿದ್ದಾರೆ ಎಂದು ವಿವರಿಸಿದರು.

ಪುಟ 2ಕ್ಕೆ

ವಿಪಕ್ಷಗಳ ಒತ್ತಡಕ್ಕೆ ಮಣಿಯಲ್ಲ

ನಾಗೇಂದ್ರ ವಿರುದ್ಧ ಸಾಕ್ಷ್ಯಗಳಿಲ್ಲ । ಸಿಎಂ ಡಿಕೆಶಿ ತಿರುಗೇಟು

ನವದೆಹಲಿ: ವಾಲ್ಮೀಕಿ ಅಭಿವೃದ್ಧಿ ನಿಗಮದ ಪ್ರಕರಣಕ್ಕೆ ಸಂಬಂಧಿಸಿದಂತೆ ಸಚಿವ ಬಿ.ನಾಗೇಂದ್ರ ವಿರುದ್ಧ ಯಾವುದೇ ಸಾಕ್ಷ್ಯಗಳಿಲ್ಲ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸ್ಪಷ್ಟಪಡಿಸಿದರು. ಅಲ್ಲದೆ, ವಿಪಕ್ಷಗಳ ಒತ್ತಡಕ್ಕೆ ಮಣಿಯುವ ಸಮಯ ಬಂದಿಲ್ಲ ಎಂದು ತಿರುಗೇಟು ನೀಡಿದರು.

ನವದೆಹಲಿಯಲ್ಲಿ ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ಸೇರಿದಂತೆ ಹೈಕಮಾಂಡ್ ನಾಯಕರನ್ನು ಭೇಟಿಯಾದ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದರು. ಹಲವು ಕೇಂದ್ರ ಸಚಿವರ ಮೇಲೆ ಕೇಸ್‌ಗಳು ಇಲ್ಲವೇ? ಲೋಕಸಭಾ ಚುನಾವಣೆಯಲ್ಲಿ ನಾವು ಎಸ್‌ಟಿ ಮೀಸಲು ಕ್ಷೇತ್ರಗಳಲ್ಲಿ ಹೆಚ್ಚು ಗೆದ್ದಿರುವುದನ್ನು ಸಹಿಸದೆ ಬಿಜೆಪಿ ಈ ರೀತಿ ರಾಜಕೀಯ ಮಾಡುತ್ತಿದೆ ಎಂದು ಕಿಡಿಕಾರಿದರು.

ನಾಗೇಂದ್ರ ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾದ ಪಕ್ಷ ನಿಷ್ಠ ನಾಯಕ ಮತ್ತು ಪಕ್ಷದ ಆಸ್ತಿಯಾಗಿದ್ದಾರೆ. ಪಕ್ಷದ ಹಿತಕ್ಕಾಗಿ ಅವರು ಯಾವುದೇ ತ್ಯಾಗಕ್ಕೂ ಸಿದ್ಧರಿದ್ದಾರೆ. ಹೈಕಮಾಂಡ್ ಮುಂದೆ ವಾಸ್ತವಾಂಶಗಳನ್ನು ಮಂಡಿಸಿದ್ದೇನೆ. ಅಂತಿಮ ನಿರ್ಧಾರವನ್ನು ವರಿಷ್ಠರೇ ತೆಗೆದುಕೊಳ್ಳಲಿದ್ದಾರೆ ಎಂದರು.

ಬಿಜೆಪಿ ಪಾದಯಾತ್ರೆಗೆ ಸಂಬಂಧಿಸಿದಂತೆ ಮಾತನಾಡಿ, ಪಾದಯಾತ್ರೆ ಮಾಡುವವರನ್ನು ತಡೆಯಲು ಸಾಧ್ಯವಿಲ್ಲ. ವಿಧಾನಸಭೆಯಲ್ಲಿ ಚರ್ಚೆ ಮಾಡಲು ಅವರು ಸಿದ್ಧವಿರಲಿಲ್ಲ. ಭೋವಿ ನಿಗಮದ ಹಗರಣ ಸೇರಿದಂತೆ ಅವರ

ಪುಟ 2ಕ್ಕೆ

ನಾಗೇಂದ್ರ ದೆಹಲಿಗೆ ದೌಡು

ನವದೆಹಲಿ: ಮಹತ್ವದ ಬೆಳವಣಿಗೆಯಲ್ಲಿ ಸಚಿವ ಬಿ.ನಾಗೇಂದ್ರ ಅವರು ರಾತ್ರೋರಾತ್ರಿ ರಾಷ್ಟ್ರ ರಾಜಧಾನಿ ದೆಹಲಿಗೆ ಆಗಮಿಸಿದ್ದಾರೆ. ಕಾಂಗ್ರೆಸ್ ಹೈಕಮಾಂಡ್‌ನ ಪ್ರಮುಖ ನಾಯಕರನ್ನು ಭೇಟಿಯಾಗಲಿದ್ದಾರೆ.

ರಾಜ್ಯ ರಾಜಕೀಯದಲ್ಲಿ ನಡೆಯುತ್ತಿರುವ ಸರಣಿ ಬೆಳವಣಿಗೆಗಳು, ವಾಲ್ಮೀಕಿ ಅಭಿವೃದ್ಧಿ ನಿಗಮದ ಪ್ರಕರಣಕ್ಕೆ ಸಂಬಂಧಿಸಿದ ವಿವಾದಗಳು ಹಾಗೂ ವಿರೋಧ ಪಕ್ಷಗಳ ತೀವ್ರ ಪ್ರತಿಭಟನೆಗಳ ಹಿನ್ನೆಲೆಯಲ್ಲಿ ಅವರ ದಿಢೀರ್ ದೆಹಲಿ ಭೇಟಿ ತೀವ್ರ ಕುತೂಹಲಕ್ಕೆ ಕಾರಣವಾಗಿದೆ.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ಕಾಂಗ್ರೆಸ್ ಹಿರಿಯ ವರಿಷ್ಠರನ್ನು ಭೇಟಿ ಮಾಡಿ ತಮ್ಮ ಮೇಲಿನ ಆರೋಪಗಳು ಮತ್ತು ರಾಜ್ಯದ ಪ್ರಸ್ತುತ ರಾಜಕೀಯ ಪರಿಸ್ಥಿತಿಯ ಕುರಿತು ಚರ್ಚೆ ನಡೆಸುವ ಸಾಧ್ಯತೆಯಿದೆ.

ರಾಹುಲ್ ಜೊತೆ ರಾಜ್ಯ ರಾಜಕೀಯ ಚರ್ಚೆ: ಡಿಕೆಶಿ

ನವದೆಹಲಿ: ಎಐಸಿಸಿ ನಾಯಕ ರಾಹುಲ್ ಗಾಂಧಿ ಅವರನ್ನು ಭೇಟಿ ಮಾಡಿದ್ದೇನೆ. ರಾಜ್ಯದ ರಾಜಕೀಯ ಬೆಳವಣಿಗೆಗಳ ಕುರಿತು ಚರ್ಚೆ ಸಲಾಗಿದೆ. ಶೀಘ್ರದಲ್ಲೇ ರಾಹುಲ್ ಗಾಂಧಿ ಕರ್ನಾಟಕಕ್ಕೆ ಆಗಮಿಸಲಿದ್ದಾರೆ. ಬೆಂಗಳೂರಿನಲ್ಲಿ ನಡೆಯಲಿರುವ ಗಿಗ್ ವರ್ಕರ್ಸ್ ಸಮಾವೇಶದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಸಿಎಂ ಡಿ.ಕೆ.ಶಿವಕುಮಾರ್ ಮಾಹಿತಿ ನೀಡಿದರು.

ಶಿಕ್ಷಣ ಹಾಗೂ ಪರೀಕ್ಷಾ ವ್ಯವಸ್ಥೆಯಲ್ಲಿ ಪಾರದರ್ಶಕತೆ ತರಲು ಮತ್ತು ನೇಮಕಾತಿ ಅಕ್ರಮ ತಡೆಯಲು ಸಚಿವ ಸಂಪುಟ ಉಪ ಸಮಿತಿ ರಚಿಸಲಾಗಿದೆ. ಪರೀಕ್ಷೆಗಳು ದುಬಾರಿಯಾಗದೆ ವಿದ್ಯಾರ್ಥಿಗಳಿಗೆ ಹೊರೆಯಾಗದಂತೆ ಪಾರದರ್ಶಕವಾಗಿ ನಡೆಯಲು ತಜ್ಞರಿಂದ ಸಲಹೆಗಳನ್ನು ಪಡೆಯಲಾಗುತ್ತಿದೆ ಎಂದು ಡಿಕೆಶಿ ತಿಳಿಸಿದರು.

ಸಿದ್ದು ಕ್ಷೇತ್ರದಲ್ಲಿ 'ಭೂಮಿಗೆ ಕೈ'

ವರುಣಾ ಕ್ಷೇತ್ರದ ಸಮೃದ್ಧ 165 ಎಕರೆ ಕೆಐಡಿಬಿ ಸ್ವಾಧೀನಕ್ಕೆ

ಮೈಸೂರು: ಬಿಡದಿ ಟೌನ್‌ಶಿಪ್ ಭೂಸ್ವಾಧೀನ ವಿವಾದದ ಬೆನ್ನಲ್ಲೇ ಮೈಸೂರು ಜಿಲ್ಲೆಯಲ್ಲೂ ರೈತರ ಫಲವತ್ತಾದ ಕೃಷಿ ಭೂಮಿಗೆ ರಾಜ್ಯ ಸರ್ಕಾರ ಕೈಹಾಕಿರುವ ಬಗ್ಗೆ ರೈತರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿನಿಧಿಸುವ ವರುಣಾ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕೈಗಾರಿಕಾ ಪ್ರದೇಶ ಅಭಿವೃದ್ಧಿಗೆ 165 ಎಕರೆ ಭೂಮಿಯನ್ನು ವಶಪಡಿಸಿಕೊಳ್ಳಲು ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ಪ್ರಾಥಮಿಕ ಅಧಿಸೂಚನೆ ಹೊರಡಿಸಿದೆ.

ಮೈಸೂರು ವಿಮಾನ ನಿಲ್ದಾಣ ಸಮೀಪವಿರುವ ವರುಣಾ ಕ್ಷೇತ್ರದ ಮರಸೆ ಹಾಗೂ ಮದರಗಳ್ಳಿ ಗ್ರಾಮಗಳ ವ್ಯಾಪ್ತಿಯಲ್ಲಿ 165 ಎಕರೆ ಭೂಮಿಯನ್ನು ಗುರುತಿಸಲಾಗಿದೆ. ಈ ಜಮೀನುಗಳಲ್ಲಿ ರೈತರು ಅಡಕೆ, ಬಾಳೆ, ತೆಂಗು, ಭತ್ತ ಸೇರಿದಂತೆ ವಾಣಿಜ್ಯ ಮತ್ತು ಆಹಾರ ಬೆಳೆ ಬೆಳೆಯುತ್ತಾರೆ. ಸಮೃದ್ಧ ಭೂಮಿಯನ್ನೇ ಕೈಗಾರಿಕೆ ಹೆಸರಿನಲ್ಲಿ ಸ್ವಾಧೀನಪಡಿಸಿಕೊಳ್ಳಲು ಸರ್ಕಾರ ಮುಂದಾಗಿರುವುದು ಅನ್ನದಾತರ ಆತಂಕವನ್ನು ಹೆಚ್ಚಿಸಿದೆ.

ವಿಮಾನ ನಿಲ್ದಾಣಕ್ಕೆ ಹತ್ತಿರವಿರುವ ಮರಸೆ–ಮದರಗಳ್ಳಿ ಭಾಗದಲ್ಲಿ ಕೈಗಾರಿಕಾ ಪ್ರದೇಶ ನಿರ್ಮಾಣಕ್ಕಾಗಿ ಕೆಐಎಡಿಬಿ ನೋಟಿಫಿಕೇಷನ್ ಜಾರಿ ಮಾಡಿದೆ. ಜೀವನಕ್ಕೆ ಆಧಾರವಾಗಿರುವ ಫಲವತ್ತಾದ ಭೂಮಿಯನ್ನು ಯಾವುದೇ ಕಾರಣಕ್ಕೂ ಕೈಗಾರಿಕೆಗೆ ಬಿಟ್ಟುಕೊಡುವುದಿಲ್ಲ ಎಂದು ರೈತರು ಪಟ್ಟುಹಿಡಿದಿದ್ದಾರೆ.

ಬೆಂಗಳೂರು ಸಮೀಪದ ಬಿಡದಿಯಲ್ಲಿ ನಡೆದ ಭೂಸ್ವಾಧೀನ ವಿರೋಧಿ ಚಳವಳಿಯ ಮಾದರಿಯಲ್ಲೇ ಮೈಸೂರಿನಲ್ಲೂ ಬೃಹತ್ ಹೋರಾಟ ರೂಪಿಸಲು ರೈತ ಸಂಘಟನೆಗಳು ಮತ್ತು ರೈತರು ಮುಂದಾಗಿದ್ದಾರೆ.

ಕೊಡಗಿನಲ್ಲಿ ಉತ್ತಮ ಮಳೆ

ಮಡಿಕೇರಿ: ಕೊಡಗಿನ ತಲಕಾವೇರಿ, ಭಾಗಮಂಡಲ, ನಾಲಡಿ ಸಹಿತ ಹಲವು ಭಾಗಗಳಲ್ಲಿ ಮಳೆಯಾಗಿದೆ. ಆಗಸ್ಟ್ 27ರ ಗುರುವಾರ ಬೆಳಿಗ್ಗೆ ಮಾಹಿತಿ ಪ್ರಕಾರ ತಲಕಾವೇರಿಯಲ್ಲಿ 39.4 ಮಿ.ಮೀ, ಭಾಗಮಂಡಲದಲ್ಲಿ 31.8 ಮಿ.ಮೀ, ನಾಲಡಿಯಲ್ಲಿ

ಪುಟ 2ಕ್ಕೆ

ನೇಮಕಾತಿ ಅಕ್ರಮ ತಡೆಗೆ ಸಂಪುಟ ಉಪಸಮಿತಿ ರಚನೆ

ಯು.ಟಿ.ಖಾದರ್ ನೇತೃತ್ವದಲ್ಲಿ ಐವರು ಸಚಿವರ ನೇಮಕ

ಬೆಂಗಳೂರು: ನೇಮಕಾತಿ ಪ್ರಕ್ರಿಯೆ ಮತ್ತು ಪರೀಕ್ಷೆಯಲ್ಲಿ ಪಾರದರ್ಶಕತೆ ತರುವುದು, ಪ್ರಶ್ನೆಪತ್ರಿಕೆ ಸೋರಿಕೆ ಹಾಗೂ ಅಕ್ರಮಗಳಿಗೆ ಕಡಿವಾಣ ಹಾಕಲು ರಾಜ್ಯ ಸರ್ಕಾರ ಆರೋಗ್ಯ ಸಚಿವ ಯು.ಟಿ.ಖಾದರ್ ನೇತೃತ್ವದಲ್ಲಿ ಐವರ ಸಂಪುಟ ಉಪಸಮಿತಿ ರಚಿಸಿದೆ.

ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ, ಗೃಹ ಸಚಿವ ಪ್ರಿಯಾಂಕ್ ಖರ್ಗೆ, ವೈದ್ಯಕೀಯ ಶಿಕ್ಷಣ ಸಚಿವ ಶರಣ ಪ್ರಕಾಶ ಪಾಟೀಲ್ ಮತ್ತು ಶಿಕ್ಷಣ ಸಚಿವ ಮಧು ಬಂಗಾರಪ್ಪ ಸಮಿತಿಯ ಸದಸ್ಯರಾಗಿದ್ದಾರೆ.

ವಿದ್ಯಾರ್ಥಿಗಳ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವುದು ಹಾಗೂ ಶಿಕ್ಷಣ ಕ್ಷೇತ್ರದಲ್ಲಿ ಅಗತ್ಯ ಸುಧಾರಣೆಗಳನ್ನು ಕೈಗೊಳ್ಳುವ ನಿಟ್ಟಿನಲ್ಲಿ ಸಮಿತಿ ಪರಿಹಾರ ರೂಪಿಸಲಿದೆ. ಪರೀಕ್ಷಾ ಮತ್ತು ನೇಮಕಾತಿಗೆ ನಿಗದಿತ ವೇಳಾಪಟ್ಟಿ ರೂಪಿಸುವುದು ಸೇರಿದಂತೆ ಹಲವು ಪ್ರಮುಖ ವಿಚಾರಗಳನ್ನು ಸಮಿತಿ ಪರಿಶೀಲಿಸಲಿದೆ.

ಇದರೊಂದಿಗೆ ಖಾಸಗಿ ಶಿಕ್ಷಣ ಸಂಸ್ಥೆಗಳ ಶುಲ್ಕ ನಿಯಂತ್ರಣ, ಕೋಚಿಂಗ್ ಕೇಂದ್ರಗಳ ಮೇಲ್ವಿಚಾರಣೆ ಹಾಗೂ

ಪುಟ 2ಕ್ಕೆ

110 ಅಡಿ ತಲುಪಿದ ಕೆಆರ್‌ಎಸ್

ಕೊಡಗಿನಲ್ಲಿ ಮಳೆ ಹೆಚ್ಚಳ: 17427 ಕ್ಯೂಸೆಕ್ ಒಳಹರಿವು

ಮೈಸೂರು: ಕೊಡಗಿನಲ್ಲಿ ಎರಡು ದಿನಗಳಿಂದ ಭಾರೀ ಮಳೆ ಆಗುತ್ತಿರುವ ಹಿನ್ನೆಲೆಯಲ್ಲಿ ಕೃಷ್ಣರಾಜಸಾಗರ ಜಲಾಶಯಕ್ಕೆ ಒಳಹರಿವಿನ ಪ್ರಮಾಣ ಭಾರೀ ಹೆಚ್ಚಾಗಿದೆ.

ಕೆ.ಆರ್.ಎಸ್ ಜಲಾಶಯಕ್ಕೆ ಗುರುವಾರ ಬೆಳಿಗ್ಗೆ 17427 ಕ್ಯೂಸೆಕ್ ನೀರು ಹರಿದು ಬರುತ್ತಿದೆ. ಹೆಚ್ಚಿನ ನೀರು ಹರಿದು ಬರುತ್ತಿರುವುದರಿಂದ ನೀರಿನ ಮಟ್ಟದಲ್ಲೂ ಏರಿಕೆ ಕಂಡಿದೆ. ಜಲಾಶಯದ ನೀರಿನ ಮಟ್ಟ ಗುರುವಾರ 110

ಹೇಮಾವತಿ ಹೊರಹರಿವು ಹೆಚ್ಚಳ

ಹಾಸನ ಜಿಲ್ಲೆಯ ಹೇಮಾವತಿ ಜಲಾಶಯದಲ್ಲಿ ಒಳಹರಿವಿನ ಪ್ರಮಾಣ ಕಡಿಮೆಯಾಗಿದ್ದರೂ ಹೊರ ಹರಿವನ್ನು ಏರಿಕೆ ಮಾಡಲಾಗಿದೆ. ಸದ್ಯ 2210 ಕ್ಯೂಸೆಕ್ ನೀರು ಜಲಾಶಯಕ್ಕೆ ಹರಿದು ಬರುತ್ತಿದೆ. 5500 ಕ್ಯೂಸೆಕ್ ಅನ್ನು ನದಿ ಮೂಲಕ ಹೊರಬಿಡಲಾಗುತ್ತಿದೆ. ಇಲ್ಲಿ ಹರಿಬಿಡುವ ಹೆಚ್ಚಿನ ನೀರು ಕೃಷ್ಣರಾಜಸಾಗರ ಜಲಾಶಯಕ್ಕೆ ಸೇರಲಿದೆ. ಜಲಾಶಯದಲ್ಲಿ ಈಗ 30 ಟಿಎಂಸಿ ನೀರಿದೆ. 37.10 ಟಿಎಂಸಿ ಗರಿಷ್ಠ ನೀರು ಸಂಗ್ರಹ ಸಾಮರ್ಥ್ಯ.

ಪುಟ 2ಕ್ಕೆ

ಕುಸಿದ ಕಬಿನಿ ನೀರಿನ ಮಟ್ಟ

ಕೇರಳದಲ್ಲಿ ಮಳೆ ಆಗುತ್ತಿರುವುದರಿಂದ ಕಬಿನಿ ಜಲಾಶಯಕ್ಕೆ ಸದ್ಯ 7676 ಕ್ಯುಸೆಕ್ ನೀರು ಹರಿದು ಬರುತ್ತಿದೆ. ಹೊರಹರಿವು 7760 ಕ್ಯುಸೆಕ್ ನಷ್ಟಿದೆ. ಜಲಾಶಯದ ನೀರಿನ ಮಟ್ಟವು 2272.76 ಅಡಿಗೆ ತಲುಪಿದೆ. ಇಲ್ಲಿ 2284 ಅಡಿ ನೀರು ಸಂಗ್ರಹಿಸುವ

ಪುಟ 2ಕ್ಕೆ

ತಾಯಿ, ಇಬ್ಬರು ಮಕ್ಕಳು ಅನುಮಾನಾಸ್ಪದ ಸಾವು

ತುಮಕೂರು: ಶಿರಾದ ಮನೆಯೊಂದರಲ್ಲಿ ತಾಯಿ ಮತ್ತು ಇಬ್ಬರು ಮಕ್ಕಳು ಸಾವನ್ನಪ್ಪಿದ್ದಾರೆ. ರಾಬಿಯಾ ಹಾಗೂ ಆಕೆಯ ಇಬ್ಬರು ಮಕ್ಕಳಾದ 9 ವರ್ಷದ ತಮನ್ನಾ ಮತ್ತು 5 ವರ್ಷದ ಸಿಮ್ರಾನ್ ಮೃತಪಟ್ಟಿರುವ ಘಟನೆ ನಡೆದಿದೆ. ಸಾವಿಗೆ ನಿಖರ ಕಾರಣ ತಿಳಿದುಬಂದಿಲ್ಲ.

ರಾಬಿಯಾ ನಿವೇಶನದ ಹಕ್ಕಿಗಾಗಿ ಹೋರಾಡಿ ಉಪಮುಖ್ಯಮಂತ್ರಿ ಮೂಲಕ ನಿವೇಶನ ಪಡೆದುಕೊಂಡಿದ್ದರು. ಮನೆ ಕಟ್ಟಲು ಪ್ರಾರಂಭಿಸಿದ್ದ ಅಮ್ಮ ಹೋರಾಟದಿಂದಲೇ ಹೆಸರುಗಳಿಸಿದ್ದರು.

ಸೋಕೋ ತಂಡ ಸ್ಥಳ ಪರಿಶೀಲನೆ ನಡೆಸಿದೆ. ಪೊಲೀಸರು ವೈಜ್ಞಾನಿಕ ತನಿಖೆ ಕೈಗೊಂಡಿದ್ದಾರೆ. ಅನುಮಾನಾಸ್ಪದ ಸಾವಿನ ಕಾರಣ ತನಿಖೆಯಿಂದ ಹೊರಬರಬೇಕಿದೆ.

ಸುಪ್ರೀಂ ಆದೇಶಕ್ಕೆ ಕಾಯದೆ ಕೇಂದ್ರ ಬರ ಪರಿಹಾರ ಬಿಡುಗಡೆ ಮಾಡಲಿ

ಬರದ ಸ್ಥಿತಿಯಲ್ಲಿ ರಾಜಕೀಯ ಬೇಡ: ಉಪ ಮುಖ್ಯಮಂತ್ರಿ ಪರಮೇಶ್ವರ್ ಎಚ್ಚರಿಕೆ

ಬೆಂಗಳೂರು: ಕೇಂದ್ರ ಸರ್ಕಾರ ಹಿಂದಿನ ವರ್ಷದಂತೆ ಸುಪ್ರೀಂಕೋರ್ಟ್ ಆದೇಶಕ್ಕೆ ಕಾಯದೇ ತ್ವರಿತವಾಗಿ ಕರ್ನಾಟಕಕ್ಕೆ ಪರಿಹಾರ ಬಿಡುಗಡೆ ಮಾಡಬೇಕು ಎಂದು ಉಪ ಮುಖ್ಯಮಂತ್ರಿ ಡಾ.ಜಿ

ಇಂದು ಅರಮನೆಗೆ ದಸರಾ ಗಜಪಡೆ

ಮೈಸೂರು: ನಾಡಹಬ್ಬದ ಮುನ್ನುಡಿಯಾಗಿ ನಗರಕ್ಕೆ ಆಗಮಿಸಿರುವ ಗಜಪಡೆಯ ಒಂಭತ್ತು ಆನೆಗಳು ಇಂದು ಕಾಲ್ನಡಿಗೆ ಮೂಲಕ ಅರಮನೆ ಆವರಣ ತಲುಪಲಿದ್ದು, ಅರಮನೆ ಆಡಳಿತ ಮಂಡಳಿಯಿಂದ ಭವ್ಯ ಸ್ವಾಗತದೊಂದಿಗೆ ಅದ್ಧೂರಿಯಾಗಿ ಬರ ಮಾಡಿಕೊಳ್ಳಲು ಸಕಲ ಸಿದ್ಧತೆ ಪೂರ್ಣಗೊಂಡಿವೆ.

ಬುಧವಾರ ಸಂಜೆ ನಗರದ ಆಶೋಕಪುರಂನ ಅರಣ್ಯಭವನದಲ್ಲಿ ಆಗಮಿಸಿರುವ ಗಜಪಡೆಯ ಒಂಭತ್ತು ಆನೆಗಳು ಆವರಣದಲ್ಲಿ ನೀರಿನ ಮಜ್ಜನ ಸೇರಿ ರಿಲ್ಯಾಕ್ಸ್ ಮೂಡ್ ನಲ್ಲಿವೆ. ಆನೆಗಳಿರುವ ಮಾಹಿತಿ ತಿಳಿದ ಸ್ಥಳೀಯರು ಆನೆಗಳನ್ನು ವೀಕ್ಷಿಸಲು ಮುಗಿ ಬೀಳುತ್ತಿದ್ದ ದೃಶ್ಯ ಕಂಡು ಬಂದಿತು. ಆದರೆ, ಪೊಲೀಸರು ಆರಂಭದಲ್ಲೇ ಅವರನ್ನು ತಡೆಯುವ ಪ್ರಯತ್ನ ನಡೆಸಿದರು.

ಶುಕ್ರವಾರ ಅರಮನೆಯ ಜಯಮಾರ್ತಾಂಡ ದ್ವಾರದ ಬಿ.9.52ರ ಶುಭಲಗ್ನದಲ್ಲಿ ಜಿಲ್ಲಾ ಉಸ್ತುವಾರಿ ಡಾ.ಯತೀಂದ್ರ ಸಿದ್ದರಾಮಯ್ಯ ಸ್ವಾಗತ ಮಾಡುವರು, ಅನೇಕ ಗಣ್ಯರು ಭಾಗವಹಿಸುವವರು. ಇನ್ನೂ ಆನೆಗಳ ಸ್ಥಳಕ್ಕೆ ಭೇಟಿ ನೀಡಿದ ಪಿಸಿಸಿಎಫ್ ಮೀನಾಕ್ಷಿ ಗಜಪಡೆಯ ಪೂರ್ಣ ಮಾಹಿತಿ ಕೇಳಿ ಪಡೆದರು. ಡಿಸಿಎಫ್ ಪ್ರಭುಗೌಡ ಸೇರಿ ಅನೇಕರು ಉಪಸ್ಥಿತರಿದ್ದರು.

ಇಂದಿನಿಂದ 'ಮೈಸೂರು ಸಂತೆ-2026'

ಮೈಸೂರು: ಶಾಪಿಂಗ್, ಆಹಾರ, ಮನರಂಜನೆ ಹಾಗೂ ಸ್ಥಳೀಯ ಉದ್ಯಮಶೀಲತೆಗೆ ವೇದಿಕೆ ಕಲ್ಪಿಸುವ 'ಮೈಸೂರು ಸಂತೆ-2026' ಮೂರು ದಿನಗಳ ಭವ್ಯ ಮೇಳವು ಆ.28ರಿಂದ 30ರವರೆಗೆ ನಗರದ ಮಹಾರಾಜ ಕಾಲೇಜು ಮೈದಾನದಲ್ಲಿ ನಡೆಯಲಿದೆ.

ಬಣ್ಣ, ಸೃಜನಶೀಲತೆ ಹಾಗೂ ಸಂಭ್ರಮದಿಂದ ಮೈಸೂರು ನಗರವನ್ನು ಕಂಗೊಳಿಸಲಿರುವ ಈ ಮೇಳಕ್ಕೆ ಸಾರ್ವಜನಿಕರಿಗೆ ಪ್ರತಿದಿನ ಬೆಳಿಗ್ಗೆ 11ರಿಂದ ರಾತ್ರಿ 9ರವರೆಗೆ ಪ್ರವೇಶವಿರಲಿದೆ. ಮಹಿಳಾ ಮತ್ತು ಸ್ಥಳೀಯ ಉದ್ಯಮಶೀಲತೆಯನ್ನು ಉತ್ತೇಜಿಸುವುದರ ಜೊತೆಗೆ ಶಾಪಿಂಗ್, ಆಹಾರ, ಮನರಂಜನೆ ಹಾಗೂ ಸಮುದಾಯದ ಒಗ್ಗಟ್ಟನ್ನು ಒಂದೇ ವೇದಿಕೆಯಲ್ಲಿ ಪರಿಚಯಿಸುವ ಉದ್ದೇಶವನ್ನು ಮೇಳ ಹೊಂದಿದೆ. ಮೇಳದ ಉದ್ಘಾಟನಾ ಸಮಾರಂಭ ಆ.28ರಂದು ಶುಕ್ರವಾರ ಸಂ.5ಕ್ಕೆ ಗಣ್ಯರ ಉಪಸ್ಥಿತಿಯಲ್ಲಿ ನಡೆಯಲಿದೆ. ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಚೌಧರಿ, ನಟಿ, ನಿರ್ಮಾಪಕಿ ಹಾಗೂ ನಿರ್ದೇಶಕಿ ಶ್ರುತಿ ನಾಯ್ಡು ಮತ್ತು ಮೈಸೂರು ಮಹಾನಗರಪಾಲಿಕೆ ಆಯುಕ್ತೆ ಎಂ.ಕೆ.ಸವಿತಾ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಮೇಳದಲ್ಲಿ ದೇಶದ ವಿವಿಧ ಭಾಗಗಳಿಂದ ಆಗಮಿಸುವ 150ಕ್ಕೂ ಅಧಿಕ ವಿಶೇಷ ಮಳಿಗೆಗಳು ಇರಲಿದ್ದು, ಹಬ್ಬದ ಉಡುಪುಗಳು, ಕರಕುಶಲ ವಸ್ತುಗಳು, ಗೃಹಾಲಂಕಾರ ಸಾಮಗ್ರಿಗಳು, ಜೀವನಶೈಲಿ ಉತ್ಪನ್ನಗಳು ಸೇರಿದಂತೆ ವಿವಿಧ ವಸ್ತುಗಳ ಖರೀದಿಗೆ ಅವಕಾಶ ಕಲ್ಪಿಸಲಾಗಿದೆ. ಆಹಾರ ಮಳಿಗೆಗಳಲ್ಲಿ ಮೈಸೂರಿನ ಜನಪ್ರಿಯ ತಿನಿಸುಗಳೊಂದಿಗೆ ವಿವಿಧ ಬಗೆಯ ಬಹುಪಾಕಪದ್ಧತಿಯ ಆಹಾರಗಳು ಲಭ್ಯವಿರಲಿವೆ. ಮಕ್ಕಳಿಗಾಗಿ ವಿಶೇಷ ಆಟ ಮತ್ತು ಚಟುವಟಿಕೆ ವಲಯ, ಕಾರ್ಯಾಗಾರಗಳು, ಆಟಗಳು ಹಾಗೂ ಸಂವಾದಾತ್ಮಕ ಚಟುವಟಿಕೆಗಳು ಇರಲಿವೆ. ಐಷಾರಾಮಿ ಕಾರು ಮತ್ತು ಬೈಕ್‌ಗಳ ಪ್ರದರ್ಶನವೂ ಮೇಳದ ಪ್ರಮುಖ ಆಕರ್ಷಣೆಯಾಗಲಿದೆ. ಮೂರು ದಿನಗಳ ಸಂಜೆ ಸಾಂಸ್ಕೃತಿಕ ಹಾಗೂ ಮನರಂಜನಾ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಮೇಳಕ್ಕೆ ಪ್ರವೇಶ ಶುಲ್ಕ 60ರೂ. ನಿಗದಿಪಡಿಸಲಾಗಿದ್ದು, ಸಾರ್ವಜನಿಕರಿಗೆ ಕೈಗೆಟುಕುವ ದರದಲ್ಲಿ ಮನರಂಜನೆ ಹಾಗೂ ಶಾಪಿಂಗ್ ಅನುಭವವನ್ನು ಒದಗಿಸಲಾಗುತ್ತಿದೆ.

ಮಕ್ಕಳ ಶಿಕ್ಷಣದ ನೆರವಿಗೆ ಟುವರ್ಡ್ಸ್ ಕಾರ್ಯಕ್ರಮ

ಮೈಸೂರು: ಓದಿನಲ್ಲಿ ಕಷ್ಟ ಪಡುತ್ತಿರುವ ಮಕ್ಕಳ ನೆರವಿಗಾಗಿ ನಗರದ ವಿವೇಕಾನಂದ ನಗರದ 2ನೇ ಮುಖ್ಯ ರಸ್ತೆ 9ನೇ ಅಡ್ಡ ರಸ್ತೆಯಲ್ಲಿನ 1323ರ ಸಂಖ್ಯೆ ವಿಳಾಸದ ಎವಿಕೆ ರಿಸೋರ್ಸ್ ಕೇಂದ್ರದಿಂದ ಟುವರ್ಡ್ಸ್ 100 ಎಂಬ ಕಾರ್ಯಕ್ರಮ ಆರಂಭಿಸಿದ್ದು, ಪೋಷಕರು ಪ್ರಯೋಜನ ಪಡೆಯಬಹುದಾಗಿದೆ ಎಂದು ಸ್ಥಾಪಕ ಕೆ. ಚಿಟ್ಟಿಬಾಬು ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಮಕ್ಕಳಿಗೆ ಪಾಠಗಳನ್ನು ಅರ್ಥ ಮಾಡಿಕೊಳ್ಳಲು ಆಗದಿರುವುದು, ಶ್ರಮಪಟ್ಟು ಓದಿದರೂ ನಿರೀಕ್ಷಿತ ಅಂಕ ಪಡೆಯಲು ಸಾಧ್ಯವಾಗದಿರುವುದು, ಪರೀಕ್ಷೆಗೂ ಮೊದಲು ಆತ್ಮವಿಶ್ವಾಸ ಕಳೆದುಕೊಳ್ಳುವುದು. ಏಕಾಗ್ರತೆ ಹಾಗೂ ನಿಯಮಿತ ಅಭ್ಯಾಸ ಮುಂದುವರಿಸಲು ಸಾಧ್ಯವಾಗದಿರುವುದು. ಪ್ರಯತ್ನ ಪಟ್ಟರೂ ನಿಜವಾದ ಸಾಮರ್ಥ್ಯಕ್ಕೆ ತಕ್ಕಂತೆ ಸಾಧನೆ ಮಾಡಲು ಸಾಧ್ಯವಾದಂತಿರುವ ಸಂದರ್ಭದಲ್ಲಿ ಮನಃಶಾಸ್ತ್ರ ಆಧಾರಿತ ಈ ಟುವರ್ಡ್ಸ್ 100 ಕಾರ್ಯಕ್ರಮ ನೆರವಾಗಲಿದೆ. ಹೆಚ್ಚಿನ ಮಾಹಿತಿಗೆ ದೂ.8105519836 ಸಂಪರ್ಕಿಸಬಹುದಾಗಿದೆ ಎಂದರು. ಶಿವಶಂಕರ್, ಶ್ರುತಿ ಇದ್ದರು.

ನಾಳೆ ನನ್ನ ಜನಗಳು ಪ್ರದರ್ಶನ

ಮೈಸೂರು: ಏಕತಾರಿ ಸಾಂಸ್ಕೃತಿಕ ಸಂಘಟನೆ ವತಿಯಿಂದ ಡಾ.ಸಿದ್ದಲಿಂಗಯ್ಯರ ಕಾವ್ಯಗಳನ್ನು ಆಧರಿಸಿದ ನನ್ನ ಜನಗಳು ನಾಟಕ ಪ್ರದರ್ಶನ ಆ.29ರ ಸಂಜೆ 6.30ಕ್ಕೆ ರಂಗಾಯಣದ ಕಿರು ರಂಗಮಂದಿರದಲ್ಲಿ ನಡೆಯಲಿದೆ ಎಂದು ಹಿರಿಯ ರಂಗಕರ್ಮಿ ಹಾಗೂ ರಂಗಾಯಣದ ಮಾಜಿ ನಿರ್ದೇಶಕ ಡಾ.ಜನಾರ್ಧನ್ (ಜನ್ನಿ) ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ತಾವು ಸಂಗೀತ ನೀಡಿದ್ದು, ದೇವಾನಂದ ವರಪ್ರಸಾದ್ ನಿರ್ದೇಶಿಸಿದ್ದಾರೆ. ಸಿದ್ದಲಿಂಗಯ್ಯನವರು ಶಿಕ್ಷಣದ ಮೂಲಕ ಆತ್ಮಗೌರವ ಹಾಗೂ ಸಾಮಾಜಿಕ ಪ್ರಜ್ಞೆ ಬೆಳೆಸಿಕೊಂಡವರಾಗಿದ್ದಾರೆ. ಡಾ.ಬಿ.ಆರ್. ಅಂಬೇಡ್ಕರ್ ಅವರ ವಿಚಾರ ಧಾರೆಗಳಿಂದ ಪ್ರೇರಿತರಾಗಿ, ದಲಿತ ಸಂಘರ್ಷ ಸಮಿತಿ ಮತ್ತು ಬಂಡಾಯ ಚಳವಳಿಗಳಲ್ಲಿ ಭಾಗವಹಿಸಿದ್ದವರು. ದಲಿತರ ನೋವು, ಶೋಷಣೆ, ಅಸಮಾನತೆ ಅವರ ಬರಹದ ಪ್ರಮುಖ ವಿಷಯಗಳಾಗಿವೆ. ನಾಟಕದ ಪ್ರವೇಶ ದರ 100 ರೂ.ಗಳಾಗಿವೆ ಎಂದು ವಿವರಿಸಿದರು. ದೇವಾನಂದ ವರಪ್ರಸಾದ್, ಸ್ವಪ್ನಾ, ಸುಮಲತಾ ಮೊದಲಾದವರು ಇದ್ದರು.

ಪುನೀತ್ ಕೆರೆಹಳ್ಳಿ ವಿರುದ್ಧ ಎರಡು ದೂರು

ಕಾನೂನು ಕ್ರಮ ಜರುಗಿಸುವಂತೆ ಪ್ರತ್ಯೇಕ ದೂರುಗಳಲ್ಲಿ ಆಗ್ರಹ

ಮೈಸೂರು: ನರಸಿಂಹರಾಜ ಕ್ಷೇತ್ರದ ಕಾಂಗ್ರೆಸ್ ಶಾಸಕ ತನ್ವೀರ್ ಸೇಠ್ ವಿರುದ್ಧ ಏಕವಚನದಲ್ಲಿ ಮಾತನಾಡಿ ಅವಹೇಳನ ಮಾಡಿದ್ದಾರೆ ಎಂದು ಆರೋಪಿಸಿ ಹಿಂದೂ ಮುಖಂಡ ಪುನೀತ್ ಕೆರೆಹಳ್ಳಿ ವಿರುದ್ಧ ಕಾನೂನು ಕ್ರಮ ಜರುಗಿಸುವಂತೆ ಆಗ್ರಹಿಸಿ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು, ಮುಖಂಡರು ಮೈಸೂರು ನಗರ ಪೊಲೀಸ್ ಆಯುಕ್ತೆ, ಉಪ ಆಯುಕ್ತರಿಗೆ ಪ್ರತ್ಯೇಕವಾಗಿ ಎರಡು ದೂರುಗಳನ್ನು ನೀಡಿದರು.

ಮಹಾನಗರಪಾಲಿಕೆ ಮಾಜಿ ಸದಸ್ಯ, ಹಿರಿಯ ಕಾಂಗ್ರೆಸ್ ಮುಖಂಡ ಶೌಕತ್ ಪಾಷ ನೇತೃತ್ವದಲ್ಲಿ ನಗರ ಪೊಲೀಸ್ ಆಯುಕ್ತರಿಗೆ ದೂರು ನೀಡಿದರೆ, ಮತ್ತೊಂದು ಕಡೆ ಡಿಸಿಸಿ ಉಪಾಧ್ಯಕ್ಷ ಎನ್. ಮಾದೇಗೌಡ ಮತ್ತು ನಗರ ಕಾಂಗ್ರೆಸ್ ವಕ್ತಾರ ಎಸ್.ರಾಜೇಶ್ ನೇತೃತ್ವದಲ್ಲಿ ಕಾಂಗ್ರೆಸ್ ಎಸ್ಸಿ ಎಸ್ಟಿ ಮೋರ್ಚಾ, ಅಲ್ಪಸಂಖ್ಯಾತ ಮುಖಂಡರು ಉಪ ಪೊಲೀಸ್ ಆಯುಕ್ತರಿಗೆ ದೂರು ನೀಡಿದರು.

ಸಂಘ ಪರಿವಾರದ ಮುಖಂಡ ಪುನೀತ್ ಕೆರೆಹಳ್ಳಿ ಪದೇ ಪದೇ ಕೋಮು ಘರ್ಷಣೆಗೆ ಅವಕಾಶ ನೀಡುವಂತಹ ಹೇಳಿಕೆಗಳನ್ನು ನೀಡುವ ಮೂಲಕ ಕೋಮು ಗಲಭೆಗೆ ಪ್ರಚೋದನೆ ನೀಡುತ್ತಿದ್ದಾರೆ. ಈ ಹಿಂದೆಯೂ ಈತನ ವಿರುದ್ಧ ಇದೇ ರೀತಿ ಕೋಮು ಪ್ರಚೋದನೆ ಹೇಳಿಕೆಗಳ ವಿರುದ್ಧ ರಾಜ್ಯಾದ್ಯಂತ ಹಲವು ಪೊಲೀಸ್ ಠಾಣೆಗಳಲ್ಲಿ ದೂರುಗಳು ದಾಖಲಾಗಿವೆ. ಮೈಸೂರು ನಗರದಲ್ಲಿ ಹಿಂದೂ ಮುಸಲ್ಮಾನರು ಸೌಹಾರ್ದತೆಯಿಂದ ಜೀವನ ನಡೆಸುತ್ತಿದ್ದಾರೆ. ಶಾಂತಿಯನ್ನು ಕೆಡಿಸಲು ಪುನೀತ್ ಕೆರೆಹಳ್ಳಿ ಪದೇ ಪದೇ ಮುಸ್ಲಿಂ ಸಮುದಾಯವನ್ನು ಗುರಿಯಾಗಿಸಿಕೊಂಡು ಹೇಳಿಕೆಗಳನ್ನು ನೀಡುವ ಮೂಲಕ ಕೋಮು ಘರ್ಷಣೆಗೆ ಪ್ರಚೋದನೆ ನೀಡುತ್ತಿದ್ದಾರೆ. ಈದ್ ಮಿಲಾದ್ ಹಬ್ಬಕ್ಕೂ ಮುನ್ನ ಶಾಸಕ ತನ್ವೀರ್ ಸೇಠ್ ವಿರುದ್ಧ ಏಕವಚನದಲ್ಲಿ ಮಾತನಾಡಿದ್ದಲ್ಲದೇ, ಅವರ ವಿರುದ್ಧ ಸಲ್ಲದ ಟೀಕಾ ಪ್ರಹಾರ ನಡೆಸಿದ್ದಾರೆ. ಮುಸಲ್ಮಾನರನ್ನು ಮತ್ತು ತನ್ವೀರ್ ಸೇಠ್ ಅಭಿಮಾನಿಗಳನ್ನು ಕೆರಳಿಸಿ ಗಲಭೆ ಸೃಷ್ಟಿಸುವುದು ಈತನ ಉದ್ದೇಶವಾಗಿದೆ ಎಂದು ದೂರಿದರು.

ನಗರಪಾಲಿಕೆ ಮಾಜಿ ಸದಸ್ಯರಾದ ಶೌಕತ್ ಪಾಷ ಮಾತನಾಡಿ, ಪುನೀತ್ ಕೆರೆಹಳ್ಳಿ ಪದೇ ಪದೇ ಕೋಮು ಗಲಭೆ ಪ್ರಚೋದನೆಯ ಹೇಳಿಕೆಗಳನ್ನು ನೀಡುವ ಮೂಲಕ ಹಿಂದೂ ಮುಸ್ಲಿಂ ಗಲಭೆ ಸೃಷ್ಟಿಸುವ ಹುನ್ನಾರ ಮಾಡುತ್ತಿದ್ದಾರೆ. ಎನ್‌ಆರ್ ಕ್ಷೇತ್ರದ ಶಾಸಕರಾದ ತನ್ವೀರ್ ಸೇಠ್ ಒಬ್ಬ ಜನಾನುರಾಗಿ, ಪ್ರಾಮಾಣಿಕ, ಸೌಹಾರ್ದತೆ ಬಯಸುವ ಶಾಸಕರಾಗಿದ್ದಾರೆ. ಅವರು ತಮ್ಮ 6 ಅವಧಿಗೆ ಶಾಸಕರು, ಎರಡು ಬಾರಿ ಸಚಿವರಾಗಿದ್ದಾರೆ. ಇದುವರೆಗೂ ಅವರು ಯಾವುದೇ ಪೊಲೀಸ್ ಅಧಿಕಾರಿಗಳಿಗೆ ಧಮಕಿ ಹಾಕಿದ ನಿದರ್ಶನಗಳಿಲ್ಲ, ಹೀಗಿದ್ದರೂ ಅವರ ವಿರುದ್ಧ ಮಾತನಾಡಿದ್ದು, ತನ್ವೀರ್ ಸೇಠ್ ಅಭಿಮಾನಿಗಳಿಗೆ ಮತ್ತು ಕಾಂಗ್ರೆಸ್ ಕಾರ್ಯಕರ್ತರಿಗೆ ಬೇಸರವಾಗಿದೆ. ಕೂಡಲೇ ಆತನ ವಿರುದ್ಧ ಪೊಲೀಸರು ಕಾನೂನು ಕ್ರಮಕ್ಕೆ ಮುಂದಾಗಬೇಕು ಎಂದು ಆಗ್ರಹಿಸಿದರು.

ನಗರ ಕಾಂಗ್ರೆಸ್ ವಕ್ತಾರ ಎಸ್.ರಾಜೇಶ್ ಮಾತನಾಡಿ ಮೈಸೂರು ನಗರದಲ್ಲಿ ದಸರಾ ಹಬ್ಬ ಪ್ರಾರಂಭವಾಗಿದ್ದು, ಶಾಂತಿಯುತವಾಗಿರುವ ನಗರದಲ್ಲಿ ಕೋಮು ಗಲಭೆ ಸೃಷ್ಟಿಸಲು ಪುನೀತ್ ಕೆರೆಹಳ್ಳಿ ಹುನ್ನಾರ ನಡೆಸಿ, ಈದ್ ಮಿಲಾದ್ ಸಂದರ್ಭದಲ್ಲಿ ಪ್ರಚೋದನಾಕಾರಿ ಹೇಳಿಕೆ ನೀಡುವ ಮೂಲಕ ಶಾಂತಿ ಕದಡುವ ಪ್ರಯತ್ನ ನಡೆಸಿದ್ದಾರೆ, ಅವರತ ವಿರುದ್ಧ ಪೊಲೀಸರು ಸೂಕ್ತ ಕ್ರಮ ಜರುಗಿಸಬೇಕು. ಈ ಸಂದರ್ಭದಲ್ಲಿ ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯ್ಯೂಬ್ ಖಾನ್, ಮಾಜಿ ಮೇಯರ್ ಪುಷ್ಪಲತಾ, ಮಾಜಿ ಉಪ ಮೇಯರ್ ಅನ್ವರ್ ಬೇಗ್ (ಆಫ್ತಾಬ್), ಶ್ರೀಧರ್, ಹೆಚ್.ಎಂ.ಶಾಂತಕುಮಾರಿ, ಪಾಲಿಕೆ ಮಾಜಿ ಸದಸ್ಯರಾದ ಸೈಯದ್ ಹಸರತುಲ್ಲಾ, ಪ್ರದೀಪ್ ಚಂದ್ರ, ಮುಖಂಡರಾದ ಜಿ.ಎನ್. ಮಂಜುನಾಥ್, ಎಸ್.ಎ.ರಹೀಂ, ಸೈಯದ್ ಫಾರೂಖ್, ಸಲ್ಮಾನ್ ಫಾರ್ಸಿ, ರಾಮು ಇತರರು ಇದ್ದರು.

> ಪುನೀತ್ ಕೆರೆಹಳ್ಳಿ ಅವರು ಶಾಸಕರಾದ ತನ್ವೀರ್ ಸೇಠ್ ವಿರುದ್ಧ ಮಾಡಿರುವ ಆರೋಪ ಸುಳ್ಳು. ತನ್ವೀರ್ ಸೇಠ್ ಅವರು ಯಾವುದೇ ಕಾನೂನು ಬಾಹಿರ ಚಟುವಟಿಕೆಗಳನ್ನು ಪ್ರೋತ್ಸಾಹಿಸುವುದಿಲ್ಲ, ಯಾವುದೇ ದಾಖಲೆ ಇಲ್ಲದೆ ಪುನೀತ್ ಕೆರೆಹಳ್ಳಿ ಅವರು ತನ್ವೀರ್ ಸೇಠ್ ವಿರುದ್ಧ ಆರೋಪ ಮಾಡಿದ್ದಾರೆ. ಅವರ ವಿರುದ್ಧ ಪೊಲೀಸರು ಕಾನೂನು ಕ್ರಮ ಜರುಗಿಸಬೇಕು.
> — ಎನ್.ಮಾದೇಗೌಡ ಡಿಸಿಸಿ ಉಪಾಧ್ಯಕ್ಷ

ಬರ ಪರಿಹಾರ ಬಿಡುಗಡೆ ಮಾಡಲಿ

ಈ ತಿಂಗಳ ಕೊನೆಯ ವೇಳೆಗೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುತ್ತೇವೆ. ಪ್ರಧಾನ ಮಂತ್ರಿಗಳು, ಗೃಹ ಸಚಿವರು ಮತ್ತು ಕೃಷಿ ಸಚಿವರಿಗೆ ಸಲ್ಲಿಸುತ್ತೇವೆ ಎಂದು ಮಾಹಿತಿ ನೀಡಿದರು.

288 ಭಾರತೀಯರು ನಾಪತ್ತೆ

ಪ್ರಧಾನಿ ನರೇಂದ್ರ ಮೋದಿ ಅವರು ನೇಪಾಳ ಪ್ರಧಾನಿಗಳೊಂದಿಗೆ ಮಾತನಾಡಿ, ಸಾಧ್ಯವಿರುವ ಎಲ್ಲ ನೆರವನ್ನು ನೀಡುವುದಾಗಿ ತಿಳಿಸಿದ್ದಾರೆ.

ಕುಸಿದ ಕಬಿನಿ ನೀರಿನ ಮಟ್ಟ

ಸಾಮರ್ಥ್ಯವಿದೆ. ತಮಿಳುನಾಡಿಗೆ ಜಲಾಶಯದಿಂದ ನಿರಂತರವಾಗಿ ಅತಿ ಹೆಚ್ಚಿನ ನೀರು ಹೊರ ಹರಿಸುತ್ತಿರುವುದರಿಂದ ನೀರಿನ ಮಟ್ಟ ಕುಸಿದಿದೆ. 13.07 ಟಿಎಂಸಿ ನೀರು ಲಭ್ಯವಿದೆ. ಕಳೆದ ವರ್ಷ ಇದೇ ದಿನ 19.12 ಟಿಎಂಸಿ ನೀರು ಜಲಾಶಯದಲ್ಲಿ ಸಂಗ್ರಹವಿತ್ತು.

ಮೇವಿನ ಬೀಜಕ್ಕೆ 25 ಕೋಟಿ

ವಿಧಾನಸೌಧದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ರಾಜ್ಯದಲ್ಲಿ 151 ಲಕ್ಷ ಟನ್‌ಗಳಷ್ಟು ಮೇವಿನ ಸಂಗ್ರಹವಿದೆ. ಇದು 33 ವಾರಗಳಿಗೆ ಸಾಕಾಗುತ್ತದೆ. 49 ತಾಲ್ಲೂಕುಗಳಲ್ಲಿ 25 ವಾರಗಳಿಗೆ ಹಾಗೂ 18 ತಾಲ್ಲೂಕುಗಳಲ್ಲಿ 20 ವಾರಗಳಿಗಿಂತ ಕಡಿಮೆ ಅವಧಿಗೆ ಸಾಕಾಗುವಷ್ಟು ಮೇವಿನ ಸಂಗ್ರಹವಿದೆ. ಇದರ ನಡುವೆ ನೀರಿನ ಆಸರೆ ಹೊಂದಿರುವ ರೈತರಿಗೆ ಮೇವಿನ ಬೀಜದ ಕಿಟ್‌ಗಳನ್ನು ನೀಡಲು 25 ಕೋಟಿ ಗಳನ್ನು ಬಿಡುಗಡೆ ಮಾಡಿದ್ದೇವೆ. ಕೆಎಂಎಫ್ ಕಡೆಯಿಂದಲೂ ಕಿಟ್‌ಗಳನ್ನು ನೀಡುತ್ತಿದ್ದೇವೆ ಎಂದು ತಿಳಿಸಿದರು.

ಹೇಮಾವತಿ ಹೊರಹರಿವು ಹೆಚ್ಚಳ

ಕೊಡಗಿನ ಹಾರಂಗಿ ಜಲಾಶಯಕ್ಕೂ 4275 ಕ್ಯುಸೆಕ್ ನೀರು ಒಳಹರಿವು ಇದೆ. 3458 ಕ್ಯುಸೆಕ್ ಹೊರ ಹರಿವು ಇದೆ. ಕೊಡಗಿನಲ್ಲಿ ಮಳೆಯಾಗುತ್ತಿರುವುದರಿಂದ ಹೆಚ್ಚಿನ ನೀರು ಬರುತ್ತಿದೆ. ಜಲಾಶಯದಲ್ಲಿ ಈಗ 8.34 ಟಿಎಂಸಿ ನೀರು ಲಭ್ಯವಿದೆ.

110 ಅಡಿ ತಲುಪಿದ ಕೆಆರ್‌ಎಸ್

ಅಡಿ ತಲುಪಿದೆ. ಜಲಾಶಯ ಭರ್ತಿಗೆ ಇನ್ನು 14 ಅಡಿ ಬಾಕಿಯಿದೆ. ಕೆಆರ್‌ಎಸ್ ಜಲಾಶಯದಲ್ಲಿ ಸದ್ಯ 31.47 ಟಿಎಂಸಿ ನೀರು ಸಂಗ್ರಹವಿದೆ. 49.45 ಟಿಎಂಸಿ ನೀರು ಸಂಗ್ರಹಿಸುವ ಸಾಮರ್ಥ್ಯವಿದೆ. ಕಳೆದ ವರ್ಷ ಇದೇ ದಿನ ಜಲಾಶಯವು ಬಹುತೇಕ ಭರ್ತಿಯಾಗಿತ್ತು. ಜಲಾಶಯದಿಂದ ಈಗಲೂ 4514 ಕ್ಯುಸೆಕ್ ನೀರು ಹೊರ ಬಿಡಲಾಗುತ್ತಿದೆ. ಎರಡು ದಿನದಿಂದ ಕಾವೇರಿ ನದಿ ಮೂಲಕ ಹೆಚ್ಚಿನ ನೀರು ಹರಿದು ಬರುತ್ತಿದೆ. ಬುಧವಾರ ಸಂಜೆ ಹೊತ್ತಿಗೆ ಒಳಹರಿವಿನ ಪ್ರಮಾಣವು 13 ಸಾವಿರ ಕ್ಯುಸೆಕ್ ದಾಟಿತ್ತು. ಗುರುವಾರ ಬೆಳಿಗ್ಗೆ 17 ಸಾವಿರ ಕ್ಯುಸೆಕ್ ದಾಟಿದೆ. ಶುಕ್ರವಾರ 20 ಸಾವಿರ ಕ್ಯುಸೆಕ್ ಸಮೀಪಿಸಬಹುದು ಎಂದು ನಿರೀಕ್ಷಿಸಲಾಗಿದೆ.

ವಿಪಕ್ಷಗಳ ಒತ್ತಡಕ್ಕೆ ಮಣಿಯಲ್ಲ

ಅವಧಿಯ ಹಲವು ಹಗರಣಗಳು ಬಯಲಾಗುವ ಭಯದಿಂದಲೇ ವಿಪಕ್ಷಗಳು ಚರ್ಚೆಯಿಂದ ಓಡಿಹೋಗಿವೆ ಎಂದು ವ್ಯಂಗ್ಯವಾಡಿದರು.

ನೇಪಾಳ-ಟಿಬೆಟ್ ಗಡಿಯಲ್ಲಿ ಸಂಭವಿಸಿದ ಜಲಪ್ರಳಯದಲ್ಲಿ ಸಿಲುಕಿರುವ ಕನ್ನಡಿಗರ ರಕ್ಷಣೆಗೆ ಸರ್ಕಾರ ಸಕ್ರಿಯವಾಗಿದೆ. ಪ್ರವಾಹದಲ್ಲಿ ಸಿಲುಕಿರುವವರ ನಿಖರ ವಿವರಗಳನ್ನು ಕಲೆಹಾಕಲಾಗುತ್ತಿದೆ. ಕೆಲವರು ಅಧಿಕಾರಿಗಳ ಸಂಪರ್ಕದಲ್ಲಿದ್ದಾರೆ ಎಂದು ಹೇಳಿದರು. ಕಲಬುರಗಿಯ ಇಬ್ಬರು ಯಾತ್ರಿಕರ ಜತೆ ಸಂಪರ್ಕ ಸಾಧಿಸಲಾಗಿದ್ದು, ಡಿಸಿಎಂ ಸ್ವತಃ ಅವರೊಂದಿಗೆ ವಿಡಿಯೋ ಕಾಲ್ ಮೂಲಕ ಮಾತನಾಡಿದ್ದಾರೆ. ಎಲ್ಲರನ್ನೂ ಆದಷ್ಟು ಬೇಗ ಸುರಕ್ಷಿತವಾಗಿ ಕರೆತರಲು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಮೊದಲ ಪುಟದಿಂದ

ಸಂಪುಟ ಉಪಸಮಿತಿ ರಚನೆ

ವಿದ್ಯಾರ್ಥಿ ಗಳು ಮತ್ತು ಅವರ ಕುಟುಂಬಗಳ ಮೇಲಿನ ಶಿಕ್ಷಣದ ಆರ್ಥಿಕ ಹೊರೆಯನ್ನು ಕಡಿಮೆ ಮಾಡುವ ಕ್ರಮಗಳ ಬಗ್ಗೆಯೂ ಸಮಿತಿ ಶಿಫಾರಸು ನೀಡಲಿದೆ. ಸರ್ಕಾರಿ ಶಾಲೆಗಳು, ಪಿಯು ಕಾಲೇಜುಗಳು ಮತ್ತು ವಿಶ್ವವಿದ್ಯಾಲಯಗಳ ಮೂಲಸೌಕರ್ಯ ಹಾಗೂ ಶಿಕ್ಷಣದ ಗುಣಮಟ್ಟ ಸುಧಾರಣೆ, ಶಿಕ್ಷಕರ ಕೊರತೆ ನಿವಾರಣೆ, ಪ್ರಯೋಗಾ ಲಯ, ಗ್ರಂಥಾಲಯ, ಹಾಸ್ಟೆಲ್ ಸೇರಿದಂತೆ ಅಗತ್ಯ ಸೌಲಭ್ಯಗಳ ಅಭಿವೃದ್ಧಿಯ ಬಗ್ಗೆಯೂ ಸಮಿತಿ ಅಧ್ಯಯನ ನಡೆಸಲಿದೆ. ಈ ಎಲ

ಮೈಸೂರಿನಲ್ಲೂ ಭೂಸ್ವಾಧೀನ ಪ್ರಕ್ರಿಯೆ: ರೈತರ ಆಕ್ರೋಶ

ಮೈಸೂರು: ಬೆಂಗಳೂರಿನ ಬಿಡದಿಯಲ್ಲಿ ಭೂಸ್ವಾಧೀನ ಪ್ರಕ್ರಿಯೆ ಬೆನ್ನಲ್ಲೇ ಈಗ ಮೈಸೂರಿನಲ್ಲಿಯೂ ಸಹ ಕರ್ನಾಟಕ ಕೈಗಾರಿಕಾ ಪ್ರದೇಶಗಳ ಅಭಿವೃದ್ಧಿ ಮಂಡಳಿ ಜಿಲ್ಲಾ ಕಚೇರಿ(ಕೆಐಎಡಿಬಿ) ಎದುರು ವರುಣಾ ಕ್ಷೇತ್ರದ ರೈತ ಹೋರಾಟ ಹಿತರಕ್ಷಣಾ ಸಮಿತಿ ರೈತರು ಪ್ರತಿಭಟಿಸಿ ಆಕ್ರೋಶ ವ್ಯಕ್ತಪಡಿಸಿದರು.

ಕೆಆರ್‌ಎಸ್ ಮುಖ್ಯರಸ್ತೆಯಲ್ಲಿ ಜಮಾವಣೆಗೊಂಡ ರೈತರು ಬಿಡುವುದಿಲ್ಲ ಬಿಡುವುದಿಲ್ಲ, ನಮ್ಮ ಭೂಮಿ ಬಿಡುವುದಿಲ್ಲ, ಕೊಡುವುದಿಲ್ಲ ಕೊಡುವುದಿಲ್ಲ, ನಮ್ಮ ನೆಲ ಕೊಡುವುದಿ ಎಂಬಿತ್ಯಾದಿ ಘೋಷಣೆಗಳನ್ನು ಕೂಗಿದರು ಈ ವೇಳೆ ಮಾತನಾಡಿದ ಬಿಜೆಪಿ ಮುಖಂಡ ಸುಶ್ರುತ್ ಗೌಡ ಮಾತನಾಡಿ, ಮರಸೆ ಮತ್ತು ಮದರಗಳ್ಳಿಯ ಭಾಗದಲ್ಲಿ 65ಕೃಷಿಕರ 165 ಎಕರೆ ಭೂಮಿ ವಶಕ್ಕೆ ಕೆಐಎಡಿಬಿ ಆ.23ರಂದು ಎಲ್ಲಾ ರೈತರಿಗೂ ನೋಟಿಸ್ ನೀಡಿದೆ. ಸದರಿ ನೋಟಿಸ್ ನಲ್ಲಿ ಬೇರೆ ವಿಚಾರಗಳಿಗೆ ಭೂಮಿ ಮಾರದಂತೆ ನೋಟಿಸ್ ನೀಡಿದ್ದು, ಮಂಡಳಿಗೆ ಭೂಮಿ ನೀಡುವ ಕುರಿತಂತೆಯೂ ಪ್ರಸ್ತಾಪಿಸಿದೆ. ಆದರೆ, ನೋಟಿಸ್‌ಗೆ ಉತ್ತರಿಸುವ ಮೊದಲೇ ಖಾಸಗಿ ಕಂಪನಿಯವರಿಗೆ ಭೂಮಿ ನೀಡುವ ಕುರಿತು ಸ್ಥಳಕ್ಕೆ ಆಗಮಿಸಿ ಮಾತುಕತೆ ನಡೆಸುತ್ತಿದ್ದಾರೆ. ಇದು ರೈತ ವಿರೋಧಿ ನಡೆಯಾಗಿದೆ ಎಂದು ಕಿಡಿಕಾರಿದರು.

ಸದರಿ ಜಾಗದಲ್ಲಿ ಒಂದಿಂಚೂ ಬಂಜರೂ ಭೂಮಿ ಇಲ್ಲ. ತೆಂಗು, ಅಡಿಕೆ, ಹತ್ತಿ, ಹೈನುಗಾರಿಕೆ ಸೇರಿ ಎಲ್ಲಾ ಹಸಿರು ವಲಯವಾಗಿದೆ.

ಹೀಗಾಗಿ ಸರ್ಕಾರ ಈ ಕೂಡಲೇ ಸದರಿ ಯೋಜನೆ ಕೈ ಬಿಡಬೇಕು. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಸ್ವಕ್ಷೇತ್ರ ಆಗಿರುವುದರಿಂದ ಅವರ ಗಮನಕ್ಕೆ ತಾರದೇ ಯೋಜನೆ ಜಾರಿಗೊಳಿಸುವ ಹುನ್ನಾರ ನಡೆದಿದೆ. ಈ ಹಿನ್ನೆಲೆಯಲ್ಲಿ ಸಿದ್ದರಾಮಯ್ಯ ಹಾಗೂ ಅವರ ಪುತ್ರರಾದ ಸಚಿವರಾದ ಡಾ.ಯತೀಂದ್ರ ಸಿದ್ದರಾಮಯ್ಯ ಈ ಕೂಡಲೇ ಸದರಿ ಯೋಜನೆ ಕೈ ಬಿಡಬೇಕು. ಇಲ್ಲದಿದ್ದರೆ ಬಿಡದಿ ಮಾದರಿಯಲ್ಲಿ ಉಗ್ರ ಹೋರಾಟ ನಡೆಸಲಾಗುವುದು. ಅಲ್ಲದೆ, ನನ್ನನ್ನೂ ಸೇರಿ 65ಮಂದಿ ಆರ್ ಟಿಸಿ ಹೊಂದಿರುವ ಪ್ರಸ್ತುತ ಜಾಗದ ಅಸ್ತಿತ್ವದಲ್ಲಿರುವ ರೈತರೆಲ್ಲರೂ ಭೂಮಿ ಕೊಡದಿರುವ ಬಗ್ಗೆ ತೀರ್ಮಾನ ಕೈಗೊಂಡು ಅದರ ಮನವಿ ಪತ್ರ ಸಲ್ಲಿಸುತ್ತಿರುವುದಾಗಿ ಹೇಳಿದರು.

ರೈತ ವೆಂಕಟೇಶ್ ಕುಮಾರ್ ಮಾತನಾಡಿ ಸಿದ್ದರಾಮಯ್ಯ ಮುಖ್ಯಮಂತ್ರಿ ಸ್ಥಾನದಿಂದ ಇಳಿದ ಬಳಿಕ ಭೂ ಸ್ವಾಧೀನ ಪ್ರಕ್ರಿಯೆ ಶುರು ಮಾಡಿದ್ದಾರೆಂದು ಎನಿಸುತ್ತಿದೆ. ಭೂಸ್ವಾಧೀನ ಪಡಿಸಿಕೊಂಡು ಕೈಗಾರಿಕೆಗೆ ಕೊಡುವ ಜಾಗ ಇದಲ್ಲ. ಇದನ್ನು ಜನನಾಯಕರಿಗೆ ಅರ್ಥಮಾಡಿಸುವ ಕೆಲಸವನ್ನು ಮಾಡಲಾಗುವುದು. ಮುಂದಿನ ದಿನಗಳಲ್ಲಿ ಸಿದ್ದರಾಮಯ್ಯ, ಯತೀಂದ್ರ ಸಿದ್ದರಾಮಯ್ಯರನ್ನು ಭೇಟಿ ಮಾಡಿ ಮನವಿ ಮಾಡಲಾಗುವುದು. ಅದಾಗಿಯೂ ಭೂ ಸ್ವಾಧೀನ ಪ್ರಕ್ರಿಯೆ ಕೈ ಬಿಡದಿದ್ದರೆ ಉಗ್ರ ಹೋರಾಟ ಮಾಡುವುದಾಗಿ ಹೇಳಿದರು. ಪ್ರತಿಭಟನೆಯಲ್ಲಿ ಮರಸೆ ಗ್ರಾಮದ ರಾಜೇಗೌಡ, ಮಂಜುನಾಥ್, ಮುರುಳಿ, ರವಿ, ರಾಜನಾಯಕ, ಸಿದ್ದನಾಯಕ, ಬೈರೇಶ, ರತ್ನಮ್ಮ, ಸಿದ್ದಮ್ಮ, ಮಂಜುಳಾ, ಅನಿತಾ ಇನ್ನಿತರರು ಉಪಸ್ಥಿತರಿದ್ದರು.

> ಕೆಐಎಡಿಬಿಯವರು ಹಸಿರು ವಲಯವನ್ನೇ ಉದ್ದೇಶಪೂರ್ವಕವಾಗಿ ಗುರುತಿಸಿ ಕೊಡುವ ಕೆಲಸ ಮಾಡುವುದು ಖಂಡನೀಯ. ಬೇಕಿದ್ದರೆ ಬಂಜರೂ ಭೂಮಿಯನ್ನು ಕೈಗಾರಿಕೆಗೆ ನೀಡಲಿ. ಅನ್ನ ಬೆಳೆಯುವ ರೈತರ ಭೂಮಿಯನ್ನು ಕೇಳುವುದು ಶುದ್ಧ ತಪ್ಪು. ಹಾಗೊಂದು ವೇಳೆ ನಮ್ಮ ವಿರೋಧದ ನಡುವೆಯೂ ಭೂಮಿ ಪಡೆಯಲು ಬಂದರೆ ವಿಷ ಕುಡಿಯುತ್ತೇವೆಯೇ ಹೊರತು ಭೂಮಿ ಕೊಡುವುದಿಲ್ಲ.
> **ವೆಂಕಟೇಶ್‌ಕುಮಾರ್** ರೈತ

ಚಕೋರದ 20ನೇ ಕಾರ್ಯಕ್ರಮ

ಮರೆತು ಹೋದ, ಮರೆಯಲಾಗದ, ಅಜ್ಞಾತ ಸ್ವಾತಂತ್ರ್ಯ ಹೋರಾಟಗಾರರು

ಚಾಮರಾಜನಗರ : ಕನ್ನಡ ಸಾಹಿತ್ಯ ಅಕಾಡೆಮಿ ಆಶ್ರಯದಲ್ಲಿ ನಡೆಯುವ ತಿಂಗಳ ಕಾರ್ಯಕ್ರಮ ಚಕೋರದ 20ನೇ ಪ್ರಸ್ತುತಿ ತಾ.ನ ಆಲೂರಿನ ಸರ್ಕಾರಿ ಪಥಮ ದರ್ಜೆ ಕಾಲೇಜಿನಲ್ಲಿ ನಡೆಯಿತು.ಹಿರಿಯ ಸಾಹಿತಿ,ರಂಗಕರ್ಮಿ ಕೆ. ವೆಂಕಟರಾಜು ಪ್ರಧಾನ ಭಾಷಣ ಮಾಡಿ ,ಬ್ರಿಟಿಷರಿಂದ ಭಾರತಕ್ಕೆ ಸ್ವಾತಂತ್ರ್ಯ ದೊರಕಿಸಿಕೊಡಲು ಮೈಸೂರು ಹುಲಿ ಟಿಪ್ಪು ಸುಲ್ತಾನ್, ಸಿಪಾಯಿ ದಂಗೆ, ನಾನಾ ಸಾಹೇಬ ತಾಂತ್ಯಾ ಟೋಪಿ, ಝಾನ್ಸಿ ರಾಣಿ ಲಕ್ಷ್ಮೀಬಾಯಿ, ಕ್ರಾಂತಿಕಾರಿಗಳಾದ ಭಗತ್ ಸಿಂಗ್, ರಾಜಗುರು,ಸುಖದೇವ್ ಮಹಾತ್ಮ ಗಾಂಧಿ ,ನೇತಾಜಿ ಸುಭಾಷ್ ಚಂದ್ರ ಬೋಸ್ ನೆಹರೂ ತ್ಯಾಗ, ಬಲಿದಾನ ಎಷ್ಟು ಕಾರಣವೋ ಮರೆತು ಹೋದ, ಮರೆಯಲಾಗದ,ಅಜ್ಞಾತ ಸ್ವಾತಂತ್ರ್ಯ ಹೋರಾಟಗಾರರು ಅಷ್ಟೇ ಕಾರಣ ಎಂಬ ಅಂಶವನ್ನು ಅನೇಕ ದೃಷ್ಟಾಂತಗಳ ಮೂಲಕ ಪ್ರತಿಪಾದಿಸಿದರು. ಉತ್ತರ ಕನ್ನಡ ಜಿಲ್ಲೆಯ ಸಿರಸಿ,ಸಿದ್ದಾಪುರ, ಅಂಕೋಲಾ ಗಳಲ್ಲಿ ಪ್ರತಿ ಮನೆಗೆ ಒಬ್ಬರಂತೆ ಸ್ವಾತಂತ್ರ್ಯ ಹೋರಾಟಗಾರರು ಇದ್ದರು. ಒಂದು ಕುಟುಂಬದ ಎಲ್ಲರೂ ಬಂಧನವಾಗುವ ಸಾಧ್ಯತೆ ಇತ್ತು. ಇದನ್ನು ಮನಗಂಡ ಅವರು ಇಡೀ ಕುಟುಂಬದ ಚಿನ್ನಾಭರಣಗಳನ್ನು ಆ ಮನೆಯಲ್ಲಿ ಕೆಲಸ ಮಾಡುತ್ತಿದ್ದ ದಲಿತ ಹೆಣ್ಣು ಮಗಳು ದೇವಿ ಎಂಬಾಕೆಯ ಕೈಗೆ ಗಂಟು ಕಟ್ಟಿ ಸಾಧ್ಯವಾದರೆ ರಕ್ಷಿಸಿಡು ಎಂದು ಕೊಟ್ಟು ನಂತರ ಬಂಧನವಾಗುತ್ತಾರೆ. ಎಷ್ಟೋ ತಿಂಗಳ ನಂತರ ಬಿಡುಗಡೆ ಆದಾಗ ಆ ದಲಿತ ಹೆಣ್ಣು ಮಗಳು ತಾನು ಜಮೀನಿನಲ್ಲಿ ಹೂತಿಟ್ಟಿದ್ದ ಚಿನ್ನಾಭರಣಗಳನ್ನು ತಂದು ಒಪ್ಪಿಸುತ್ತಾಳೆ. ಆಕೆಗೆ ಚಿನ್ನಾಭರಣಗಳನ್ನು ಕೊಟ್ಟ ವಿಷಯ ಗೊತ್ತಾಗಿ ಅಧಿಕಾರಿಗಳು ಆಕೆಗೆ ಚಿತ್ರಹಿಂಸೆ ಕೊಡುತ್ತಾರೆ. ಆದರೂ ಆಕೆ ಬಾಯಿ ಬಿಡುವುದಿಲ್ಲ. ನಿನಗೆ ಬೇಕಾದಷ್ಟು ಆಭರಣಗಳನ್ನು ಎತ್ತಿಕೋ ಎಂದಾಗ ಆಕೆ ಮುಟ್ಟುವುದಿಲ್ಲ. ಈಕೆ ಯಾವ ಸ್ವಾತಂತ್ರ್ಯ ಹೋರಟಗಾರರಿಗೆ ಕಡಿಮೆ? ಇಂತಹ ಮರೆತುಹೋದ ಅಜ್ಞಾತ ಸ್ವಾತಂತ್ರ್ಯ ಹೋರಾಟಗಾರರು ಭಾರತದ ಉದ್ದಗಲಕ್ಕೂ ಸಿಗುತ್ತಾರೆ.

ಪ್ರೊ. ಎಎಂ ಶಿವಸ್ವಾಮಿ ಚಕೋರ ಕಾರ್ಯಕ್ರಮದ ರೂಪುರೇಷೆ ವಿವರಿಸಿದರು. ಪ್ರಾಚಾರ್ಯರಾದ ತಿಮ್ಮರಾಜು ಅಧ್ಯಕ್ಷತೆ ವಹಿಸಿದ್ದರು. ಕನ್ನಡ ಸಾಹಿತ್ಯ ಅಕಾಡೆಮಿ ಸದಸ್ಯ ಸಂಚಾಲಕ ಪ್ರಕಾಶ್ ರಾಜ್ ಮೇಹು ಮಾತನಾಡಿದರು. ಸಿಎಂ ನರಸಿಂಹ ಮೂರ್ತಿ, ಪರಿಸರವಾದಿ ಪುಣಜನೂರು ದೊರೆಸ್ವಾಮಿ, ಕನ್ನಡ ಉಪನ್ಯಾಸಕ ಕೃಷ್ಣಮೂರ್ತಿ, ದೀನಬಂಧು ಸಂಸ್ಥೆಯ ಪ್ರಕಾಶ್, ಚೇತನ್ ಎ ಡಿ ಸಿಲ್ವ,ಶಿವಕುಮಾರ್, ಉಪನ್ಯಾಸಕರು,ಸಿಬ್ಬಂದಿ, ವಿದ್ಯಾರ್ಥಿಗಳು ಇದ್ದರು

ವ್ಯಾಪಾರಕ್ಕೆ ಬಂದು ಕೊಳ್ಳೆ

ಬ್ರಿಟಿಷರಿಗಿಂತ ಮೊದಲು ಅನೇಕರು ದಂಡೆತ್ತಿ ಬಂದು ಇಲ್ಲೇ ರಾಜ್ಯಭಾರ ನಡೆಸಿದ್ದಾರೆ. ಅವರು ಹೊಸ ಸಂಸ್ಕೃತಿ, ಸಂಗೀತ, ವಾಸ್ತುಶಿಲ್ಪ ಕೊಡುಗೆ ನೀಡಿದ್ದಾರೆ. ಆದರೆ ವ್ಯಾಪಾರಕ್ಕೆಂದು ಬಂದ ಬ್ರಿಟಿಷರು ಶತಮಾನಗಳ ಕಾಲ ನಮ್ಮನ್ನು ಗುಲಾಮತನಕ್ಕೆ ತಳ್ಳಿ ಭಾರತವನ್ನು ಕೊಳ್ಳೆ ಹೊಡೆದರು. ಮಹಾತ್ಮ ಗಾಂಧೀಜಿ ಅಹಿಂಸಾತ್ಮಕ ಚಳುವಳಿ ಕಟ್ಟಿ ದಶಕಗಳ ಕಾಲ ಜೈಲುವಾಸ ಅನುಭವಿಸಿ ಸ್ವಾತಂತ್ರ್ಯ ದೊರಕಿಸಿಕೊಟ್ಟರು. ಪತ್ರಿಕೆ,ಫೋನು ಏನೂ ಇಲ್ಲದ ಕಾಲದಲ್ಲಿ ಗ್ರಾಮದ ಮೂಲೆ ಮೂಲೆಗೂ ಈ ಚಳುವಳಿ ಹರಡಿತು. ಅಜ್ಞಾತರಾಗಿಯೇ ಉಳಿದು ಲೆಕ್ಕವಿಲ್ಲದಷ್ಟು ಜನ ಸ್ವಾತಂತ್ರ್ಯ ಹೋರಾಟದಲ್ಲಿ ತಮ್ಮ ಅಮೂಲ್ಯ ಕೊಡುಗೆ ನೀಡಿದ್ದಾರೆ. ಇದನ್ನು ಸಹ ನಾವು ಮರೆಯಬಾರದು ಎಂದರು.

ಹೋರಾಟದಲ್ಲಿ ಜಯ ಸಿಗುವ ವಿಶ್ವಾಸ

ಮಾಜಿ ಶಾಸಕ ಎ.ಮಂಜುನಾಥ್ ಹೇಳಿಕೆ । ಬಿಡದಿ ಸಮಗ್ರ ನಗರ ಯೋಜನೆ

ರಾಮನಗರ: ಸರ್ಕಾರ ನಡೆಸುತ್ತಿರುವವರು, ಅಧಿಕಾರದಲ್ಲಿ ಇರುವವರು ಹೋರಾಟಗಾರರ ಬದುಕಿನಲ್ಲಿ ಚೆಲ್ಲಾಟ ಆಡುವುದನ್ನು ಕರಗತ ಮಾಡಿಕೊಂಡಿದ್ದಾರೆ. ಇವರ ವಿರುದ್ಧ ಹೋರಾಟ ಮಾಡುವುದು ಕಷ್ಟ. ಆದರೂ ಬಿಡದಿ ಸಮಗ್ರ ನಗರ ಯೋಜನೆ ವಿಚಾರದಲ್ಲಿ ರೈತರು ಹೋರಾಟ ಮುಂದುವರೆಸಿದ್ದಾರೆ, ಜೆಡಿಎಸ್ ಪಕ್ಷ ಕೂಡ ಕಾನೂನಾತ್ಮಕವಾಗಿ ಹೋರಾಟ ಮಾಡುತ್ತಿದೆ ಎಂದು ಜೆಡಿಎಸ್ ರಾಜ್ಯ ಕೋರ್ ಕಮಿಟಿ ಸದಸ್ಯರಾದ ಮಾಜಿಶಾಸಕ ಎ. ಮಂಜುನಾಥ್ ಹೇಳಿದರು.

ನಗರದ ಕೈಗಾರಿಕಾ ಪ್ರದೇಶದಲ್ಲಿ ನೂತನವಾಗಿ ಜೆಡಿಎಸ್ ಜಿಲ್ಲಾ ಮತ್ತು ತಾಲೂಕು ಕಚೇರಿ ಉದ್ಘಾಟಿಸಿದ ಬಳಿಕ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು. ಅಧಿಕಾರದಲ್ಲಿ ಇರುವವರು, ತಮ್ಮ ಹಣ ಬಲ, ತೋಳ್ಬಲ, ಅಧಿಕಾರದ ಬಲವನ್ನು ಉಪಯೋಗಿಸಿಕೊಂಡು ಹೋರಾಟ ಹತ್ತಿಕ್ಕುತ್ತಿದ್ದಾರೆ. ನ್ಯಾಯಾಲಯಕ್ಕೆ ಸುಳ್ಳು ಮಾಹಿತಿ ನೀಡುತ್ತಿದ್ದಾರೆ ಎಂದು ದೂರಿದರು. ಬಿಡದಿ ಟೌನ್ ಶಿಪ್ ವಿಷಯದಲ್ಲಿ ರೈತರು ಮತ್ತು ನೈಸ್ ಟೋಲ್ ವಿಚಾರದಲ್ಲಿ ಜನರನ್ನು ಎತ್ತಿಕಟ್ಟುವ ಕೆಲಸ ಮಾಡುತ್ತಿದ್ದಾರೆ ಎಂಬ ಮಾಜಿ ಸಂಸದ ಡಿ.ಕೆ.ಸುರೇಶ್ ಅವರ ಹೇಳಿಕೆಯನ್ನು ಪ್ರಸ್ತಾಪಿಸಿದ ಅವರು, ಹೌದು, ಬಿಡದಿ ಟೌನ್ ಶಿಪ್ ಯೋಜನೆ ಹಾಗೂ ನೈಸ್ ಟೋಲ್ ಸಂಗ್ರಹದ ವಿರುದ್ಧ ನಾವು ಪಾದಯಾತ್ರೆಯಂತಹ ಹೋರಾಟ ಮಾಡುತ್ತಿದ್ದೇವೆ ಅಷ್ಟೆ. ಅವರೇನಾದರು ವಿಪಕ್ಷದಲ್ಲಿ ಇದ್ದಿದ್ದರೆ ವಿಧಾನಸೌಧದವರೆಗೆ ಉರುಳು ಸೇವೆಯೇ ಮಾಡುತ್ತಿದ್ದರು ಎಂದು ಟೀಕಾ ಪ್ರಹಾರ ನಡೆಸಿದರು. ರೈತರು ಮತ್ತು ಜೆಡಿಎಸ್ ನಡೆಸುತ್ತಿರುವ ಹೋರಾಟಕ್ಕೆ, ಸತ್ಯಕ್ಕೆ ಜಯ ಸಿಗುವ ವಿಶ್ವಾಸವಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ನಗರಸಭೆ ವಿಪಕ್ಷ ನಾಯಕ ಮಂಜುನಾಥ್, ಸದಸ್ಯರಾದ ಗ್ಯಾಬ್ರಿಯಲ್, ಜೆಡಿಎಸ್ ಜಿಲ್ಲಾಧ್ಯಕ್ಷ ಜಯಮುತ್ತು, ರಾಮನಗರ ತಾಲೂಕು ಅಧ್ಯಕ್ಷ ಸಬ್ಬಕೆರೆ ಶಿವಲಿಂಗಯ್ಯ, ಹಾರೋಹಳ್ಳಿ ತಾಲೂಕು ಅಧ್ಯಕ್ಷ ರಾಮ, ಮುಖಂಡರಾದ ಸೋಮೇಗೌಡ, ಶಿವಕುಮಾರ್, ಜಿ.ಟಿ.ಕೃಷ್ಣ, ಗೂಳಿಗೌಡ, ರಾಜಶೇಖರ್ , ಜಯಕುಮಾರ್, ಅಂಜನಾಪುರ ವಾಸು, ಕೊತ್ತಿಪುರ ಗೋವಿಂದರಾಜು, ಕೆಂಪರಾಜು, ಸಂತೋಷ್ , ಶೋಭಾ, ಸರಸ್ವತಿ, ಪೂರ್ಣಿಮಾ, ಜಯಮ್ಮ ಇದ್ದರು.

ನೈಸ್‌ನ ಉಸಾಬರಿ ಇವರಿಗೇಕೆ?

ಸುಪ್ರೀಂ ಕೋರ್ಟ್ ಆದೇಶಕ್ಕೆ ಗೌರವ ಕೊಟ್ಟು ರಾಜ್ಯ ಸರ್ಕಾರ ಬೆಂಗಳೂರಲ್ಲಿ ಫುಟ್ ಪಾತ್ ತೆರವು ಮಾಡುತ್ತಿದೆ. ಹಾಗೆಯೇ ಕೋರ್ಟ್ ನ ಆದೇಶದ ಪ್ರಕಾರ ನೈಸ್ ಟೋಲ್ ಗಳ್ನು ಬುಲ್ಡೋಜರ್ ನಿಂದ ತೆರವು ಮಾಡಿ ಸಾರ್ವಜನಿಕರ ಸಂಚಾರಕ್ಕೆ ಮುಕ್ತವಾಗಿ ಅವಕಾಶ ನೀಡಲಿ, ಆ ಕ್ರೆಡಿಟ್ ಅವರೇ ತೆಗೆದುಕೊಳ್ಳಲಿ. ಇವರೇಕೆ ನೈಸ್ ನ ಉಸಾಬರಿ ವಹಿಸಿಕೊಳ್ಳುತ್ತಾರೆ ಎಂದು ಪ್ರಶ್ನಿಸಿದರು. ರಾಜ್ಯ – ರಾಷ್ಟ್ರೀಯ ಹೆದ್ದಾರಿಗಳಿಗೆ ಟೋಲ್ ಹಾಕುವುದು ಸಹಜ. ಎಲ್ಲಾದಕ್ಕೂ ಕೋರ್ಟ್ ಆದೇಶ ನೀಡಿದ್ದರೆ ಅವೆಲ್ಲವನ್ನು ತೆರವು ಮಾಡುವಂತೆ ಕೇಂದ್ರ ಸಚಿವ ಕುಮಾರಸ್ವಾಮಿರವರು ಹೇಳುತ್ತಿದ್ದರು. ನೈಸ್ ರಸ್ತೆಯಲ್ಲಿ ಕಾನೂನು ಬಾಹಿರವಾಗಿ ಟೋಲ್ ಸಂಗ್ರಹ ಮಾಡುತ್ತಿದ್ದಾರೆಂದು ಕೋರ್ಟ್ ಹೇಳಿರುವುದಕ್ಕೆ ಕುಮಾರಸ್ವಾಮಿ ಹೇಳಿದ್ದಾರೆ. ಅದರಲ್ಲಿ ತಪ್ಪೇನಿದೆ. ಅದು ಜನರನ್ನು ಎತ್ತಿಕಟ್ಟುವ ವಿಚಾರವಲ್ಲ ಜನಸಾಮಾನ್ಯರನ್ನು ಸುಲಿಗೆ ಮಾಡುತ್ತಿರುವ ವಿಚಾರ ಎಂದು ತಿರುಗೇಟು ನೀಡಿದರು. ನೈಸ್ ನ ಹಗಲು ದರೋಡೆಗೆ ಕಡಿವಾಣ ಹಾಕಿ ಜನಸಾಮಾನ್ಯರಿಗೆ ಅನುಕೂಲ ಕಲ್ಪಿಸುವವರೆಗೂ ಜೆಡಿಎಸ್ ಪಕ್ಷ ನೈಸ್ ವಿರುದ್ಧದ ಕಾನೂನಾತ್ಮಕ ಹೋರಾಟ ಮುಂದುವರೆಯಲಿದೆ ಎಂದು ಎ.ಮಂಜುನಾಥ್ ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ನೈಸ್‌ನಿಂದ ಕಾನೂನು ಬಾಹಿರ ಸಂಗ್ರಹ

ನ್ಯಾಯಾಲಯ ಆದೇಶ ನೀಡಿರುವ ಹಿನ್ನೆಲೆಯಲ್ಲಿ ನೈಸ್ ಟೋಲ್ ಸಂಗ್ರಹ ಮಾಡುತ್ತಿರುವುದು ಕಾನೂನು ಬಾಹಿರ. ಇಷ್ಟು ವರ್ಷಗಳಿಂದ ಟೋಲ್ ಸಂಗ್ರಹ ಮಾಡಿರುವುದೇ ಹಗಲು ದರೋಡೆ. ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಕಾರಣ ಪಕ್ಷ ಮತ್ತು ಪಕ್ಷದ ವರಿಷ್ಠರು ಕಾನೂನು ಅರಿವು ಅರಿತುಕೊಂಡು ಹೋರಾಟ ಕೈಗೆತ್ತಿಕೊಂಡಿದ್ದೇವೆ ಎಂದು ಹೇಳಿದರು.

> **ನಾವು ಪಾದಯಾತ್ರೆ ಮಾಡುತ್ತಿದ್ದೇವೆ. ಅವರಾಗಿದ್ದರೆ ಉರುಳು ಸೇವೆ ಮಾಡುತ್ತಿದ್ದರು – ಡಿಕೆಸು ವಿರುದ್ಧ ಟೀಕೆ**
> **ಅಧಿಕಾರ ಬಲ, ತೋಳ್ಬಲ, ಹಣ ಬಲ ಬಳಕೆ**
> **ಬಿಡದಿ ಹೋರಾಟ ಹತ್ತಿಕ್ಕುವ ಯತ್ನ –ಆರೋಪ**

ಜೆಡಿಎಸ್ ಘಟಕಗಳಿಗೆ ನೂತನ ಕಚೇರಿ

ಜೆಡಿಎಸ್ ಪಕ್ಷ ತನ್ನ ಜಿಲ್ಲಾ ಮತ್ತು ರಾಮನಗರ ತಾಲ್ಲೂಕು ಘಟಕಗಳ ಕಚೇರಿಯನ್ನು ನಗರದ ಕೈಗಾರಿಕಾ ಪ್ರದೇಶದಲ್ಲಿರುವ ದಿ ಭಾರತಿ ಕೋ ಆಪರೇಟಿವ್ ಬ್ಯಾಂಕಿನ ಕಟ್ಟಡಕ್ಕೆ ಸ್ಥಳಾಂತರಿಸಿದೆ. ನೂತನ ಕಚೇರಿಯನ್ನು ಜೆಡಿಎಸ್ ಜಿಲ್ಲಾ ಮತ್ತು ತಾಲೂಕು ಕಚೇರಿಯನ್ನು ಜೆಡಿಎಸ್ ರಾಜ್ಯ ಕೋರ್ ಕಮಿಟಿ ಸದಸ್ಯರಾದ ಮಾಜಿ ಶಾಸಕ ಎ.ಮಂಜುನಾಥ್ ಉದ್ಘಾಟಿಸಿದರು. ಜಿಲ್ಲೆಯಲ್ಲಿ ಜೆಡಿಎಸ್ ತಾಲೂಕು ಮತ್ತು ಜಿಲ್ಲಾ ಕಚೇರಿ ಕೊರತೆ ಇತ್ತು. ಪಕ್ಷದ ಯುವ ಘಟಕ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿರವರು ಸುಸಜ್ಜಿತವಾದ ಕಚೇರಿ ಪ್ರಾರಂಭಿಸಬೇಕೆಂದು ಹೇಳಿದ್ದರು. ಅದರಂತೆ ಬೇರೆ ತಾಲೂಕುಗಳಿಂದ ಆಗಮಿಸುವ ಪಕ್ಷದ ಮುಖಂಡರು , ಕಾರ್ಯಕರ್ತರು ಮಾತ್ರವಲ್ಲದೆ ಜನಸಾಮಾನ್ಯರಿಗೆ ಅನುಕೂಲವಾಗುವಂತೆ ಬಸ್ ನಿಲ್ದಾಣಕ್ಕೆ ಸಮೀಪದಲ್ಲಿ ಜೆಡಿಎಸ್ ಪಕ್ಷದ ಜಿಲ್ಲಾ ಮತ್ತು ತಾಲೂಕು ಕಚೇರಿಯನ್ನು ಒಂದೇ ಕಟ್ಟಡದಲ್ಲಿ ಪ್ರಾರಂಭಿಸಲಾಗಿದೆ ಎಂದರು. ಕೇಂದ್ರ ಸಚಿವ ಕುಮಾರಸ್ವಾಮಿ ಮತ್ತು ಜೆಡಿಎಸ್ ಯುವ ಘಟಕ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರ ಗೈರಾದ ಬಗ್ಗೆ ಪ್ರತಿಕ್ರಿಯಿಸಿದ ಅವರು, ಉಭಯ ನಾಯಕರು ಪ್ರಧಾನಿ ನರೇಂದ್ರ ಮೋದಿರವರು ಭೇಟಿಗೆ ಸಮಯವಕಾಶ ನೀಡಿದ್ದಾರೆ. ಹೀಗಾಗಿ ಇಂದು ಬರಲಾಗಲಿಲ್ಲ ಎಂದರು.

ಠಾಣೆಗೆ ಆಯೋಗದ ಅಧ್ಯಕ್ಷರ ಭೇಟಿ

ಮೈಸೂರು: ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ ಚೌದರಿ ಅವರು ಇಂದು ಮೈಸೂರು ನಗರ ನೆಹರೂ ವೃತ್ತದ ಬಳಿ ಇರುವ ಮಹಿಳಾ ಪೊಲೀಸ್ ಠಾಣೆಗೆ ಭೇಟಿ ನೀಡಿ, ಪರಿಶೀಲನೆ ನಡೆಸಿ ಮಾಹಿತಿ ಪಡೆದರು.

ಠಾಣೆಯಲ್ಲಿರುವ ಸೌಲಭ್ಯಗಳು, ಮಹಿಳೆಯರಿಗೆ ನೀಡಲಾಗುತ್ತಿರುವ ಸೇವೆಗಳು, ದೂರುಗಳ ನಿರ್ವಹಣೆ, ಮಹಿಳೆಯರ ಸಾಪತ್ತೆ, ಅಪರಾಧ ಪ್ರಕರಣಗಳು, ತೆರೆದ ಮನೆಯ ಕುರಿತು ಪರಿಶೀಲನೆ ನಡೆಸಿದರು. ಪೋಸ್ಕೊ ಕಾಯ್ದೆಯ ಪ್ರಕಾರ ಆಂತರಿಕ ದೂರು ಸಮಿತಿಯು ಪ್ರತಿ ಮೂರು ತಿಂಗಳಿಗೊಮ್ಮೆ ಸಭೆ ನಡೆಸಿ, ಮಹಿಳಾ ಸಿಬ್ಬಂದಿಗೆ ಸುರಕ್ಷಿತ ಕೆಲಸದ ವಾತಾವರಣ ಕಲ್ಪಿಸಿ, ಅವರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ನಾಳೆ ಪಂಚತಂತ್ರ ನಾಟಕ ಪ್ರದರ್ಶನ

ಮೈಸೂರು: ಶ್ರೀರಂಗಪಟ್ಟಣದ ನಿರ್ದಿಗಂತ ರಂಗ ತಂಡದ ವತಿಯಿಂದ ಆ.29 ರ ಸಂಜೆ 7ಕ್ಕೆ ರಂಗಾಯಣದ ವನರಂಗದಲ್ಲಿ ಪ್ರಾಜೆಕ್ಟ್ ಪಂಚತಂತ್ರ ನಾಟಕ ಪ್ರದರ್ಶನ ಆಯೋಜಿಸಲಾಗಿದೆ ಎಂದು ರಂಗ

ನೇತ್ರದಾನದಿಂದ ಬದುಕು ಸಾರ್ಥಕ: ಡಾ.ರಾಜೇಶ್

ಚಾಮರಾಜನಗರ, ಎಲ್ಲರೂ ನೇತ್ರದಾನ ಮಾಡುವುದ ರಿಂದ ಸಾಕಷ್ಟು ಅಂಧರ ಬಾಳಿಗೆ ಬೆಳಕಾಗಬಹುದು. ಈ ಮೂಲಕ ಸಾರ್ಥಕತೆ ಪಡೆಯಬಹುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ರಾಜೇಶ್ ಕುಮಾರ್ ಅವರು ಹೇಳಿದರು.

ಚಾಮರಾಜನಗರ ವೈದ್ಯಕೀಯ ವಿಜ್ಞಾನ ಗಳ ಸಂಸ್ಥೆಯ ಸಭಾಂಗಣದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಚಾಮರಾಜನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಮತ್ತು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ರಾಷ್ಟ್ರೀಯ ನೇತ್ರದಾನ ಪಾಕ್ಷಿಕ ಆಚರಣೆ ಹಿನ್ನೆಲೆಯಲ್ಲಿ ವೈದ್ಯಕೀಯ ವಿದ್ಯಾರ್ಥಿಗಳಿಗೆ ಹಮ್ಮಿಕೊಳ್ಳಲಾ ಗಿದ್ದ ವಿಚಾರ ಸಂಕಿರಣ ಉದ್ಘಾಟಿಸಿ ಅವರು ಮಾತನಾಡಿದರು. ವೈದ್ಯಕೀಯ ವಿದ್ಯಾರ್ಥಿಗಳು ಮುಂದಿನ ನೇತ್ರ ತಜ್ಞರಾಗಲಿದ್ದಾರೆ. ನೀವು ನೇತ್ರದಾನ ಮಾಡುವುದಾಗಿ ನೊಂದಣಿ ಮಾಡಿಕೊಂಡಲ್ಲಿ ನೇತ್ರ ತಜ್ಞರಾಗುವುದಕ್ಕೂ ಸಾರ್ಥಕವಾಗುತ್ತದೆ. ನಾನು ಮತ್ತು ನನ್ನ ಕುಟುಂಬ ವರ್ಗದವರು ಸಹ ನೇತ್ರದಾನಕ್ಕೆ ನೊಂದಣಿ ಮಾಡಿಕೊಂಡಿದ್ದೇವೆ ಎಂದರು.

ಚಾಮರಾಜನಗರ ಜಿಲ್ಲೆಯು ಮೇರುನಟ ಡಾ. ರಾಜ್ ಕುಮಾರ್ ಅವರ ತವರು ಜಿಲ್ಲೆಯಾಗಿದ್ದು, ಅವರು ಸಹ ನೇತ್ರದಾನ ಮಾಡಿದ್ದು, ಅವರ ಪುತ್ರ ಪುನೀತ್ ರಾಜ್ ಕುಮಾರ್ ಸಹ ನೇತ್ರದಾನ ಮಾಡಿದ್ದಾರೆ. ಸಾಕಷ್ಟು ಜನರು ನೇತ್ರದಾನ ಮಾಡಲು ನೊಂದಾಯಿಸಿಕೊಂಡಿದ್ದಾರೆ. ಎಲ್ಲರೂ ನೇತ್ರದಾನ ಮಾಡಿದಲ್ಲಿ ಸಾಕಷ್ಟು ಅಂಧರ ಬಾಳಿಗೆ ಬೆಳಕಾಗಬಹುದು ಎಂದು ಡಾ. ರಾಜೇಶ್ ಕುಮಾರ್ ಅವರು ತಿಳಿಸಿದರು.

ಜಿಲ್ಲಾ ಅಂಧತ್ವ ನಿಯಂತ್ರಣ ಕಾರ್ಯಕ್ರಮ ಅಧಿಕಾರಿ ಡಾ. ಚಂದ್ರಶೇಖರ್ ಅವರು ಮಾತನಾಡಿ ಇತ್ತೀಚಿನ ದಿನಗಳಲ್ಲಿ ಸಾಕಷ್ಟು ಜನರು ನೇತ್ರದಾನಕ್ಕಾಗಿ ನೊಂದಣಿ ಮಾಡುತ್ತಿದ್ದು, ಇದು ಕುಟುಂಬದ ಸಂಪ್ರದಾಯವಾದಲ್ಲಿ ಅಗತ್ಯವಿರುವ ಎಲ್ಲಾ ಕಾರ್ನಿಯಾ ಅಂಧರಿಗೂ ಸಹ ದೃಷ್ಟಿ ನೀಡಬಹುದಾಗಿದೆ. ಮರಣದ ನಂತರ ಕಣ್ಣನ್ನು ಹೂಳದೆ ದಾನ ಮಾಡುವುದರಿಂದ ಮಡಿದವರ ನೇತ್ರಗಳು ಸದಾ ಜೀವಂತವಾಗಿರುತ್ತದೆ ಎಂದು ತಿಳಿಸಿದರು. ನೇತ್ರ ವಿಭಾಗದ ಮುಖ್ಯಸ್ಥರಾದ ಡಾ. ಮಹೇಶ್ವರ್ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳು ಪಿ.ಪಿ.ಟಿ ಮೂಲಕ ನೇತ್ರದಾನದ ಮಹತ್ವ, ದೇಶದಲ್ಲಿರುವ ಅಂಧರ ಅಂಕಿ ಅಂಶಗಳು ಮತ್ತು ನೇತ್ರದಾನ ನೊಂದಣಿ ಮಾಡಿರುವವರ ವಿವರ, ನೇತ್ರದಾನದ ಬಗ್ಗೆ ಇರುವ ತಪ್ಪು ನಂಬಿಕೆಗಳ ಬಗ್ಗೆ ಮಾಹಿತಿ ನೀಡಿದರು. ಚಾಮರಾಜನಗರ ವೈದ್ಯಕೀಯ ಕಾಲೇಜಿನ ಅಧೀಕ್ಷಕರಾದ ಡಾ. ಮಾರುತಿ, ಪ್ರಾಂಶುಪಾಲರಾದ ಡಾ. ಗಿರೀಶ್ ವಿ. ಪಾಟೀಲ್, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು

ಇಂದು ದೇಶಭಕ್ತಿ ಗೀತೆಗಳ ಗಾಯನ

ಮೈಸೂರು: ಜನ ಚೈತನ್ಯ ಸಂಸ್ಥೆ ವತಿಯಿಂದ ಸ್ವಾತಂತ್ರ್ಯ ದಿನಾಚರಣೆ ಪ್ರಯುಕ್ತ ಆ. 28 ರ ಸಂಜೆ 4.30ಕ್ಕೆ ಕಲಾ ಮಂದಿರದಲ್ಲಿ ನಾವು ಭಾರತೀಯರು ಶೀರ್ಷಿಕೆ ಅಡಿಯಲ್ಲಿ ಭಾವಗೀತೆ, ದೇಶಭಕ್ತಿಗೀತೆ ಹಾಗೂ ನಾಡಗೀತೆ ಗಾಯನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಅಧ್ಯಕ್ಷ ಆರ್. ಲಕ್ಷ ?ಮಣ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಇದು ನೈಜ ಸಂಗೀತ ಕಾರ್ಯಕ್ರಮವಾಗಿದೆ. ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್ ಉದ್ಘಾಟಿಸುವರು, ನಾಗರಾಜ್ ಎ. ಬೈರಿ ಅಧ್ಯಕ್ಷತೆ ವಹಿಸುವರು, ಕೆ. ರಘುರಾಂ ವಾಜಪೇಯಿ, ಅಂಶಿ ಪ್ರಸನ್ನಕುಮಾರ್, ನಿರ್ಮಲ ಮಠಪತಿ, ಎಂ. ಮಹದೇವಸ್ವಾಮಿ, ಡಾ.ಎಂ.ಡಿ. ಸುದರ್ಶನ್, ಡಾ.ಸಿ. ಸುಭಾಷ್, ಆನಂದ್‌ಶೆಟ್ಟಿ, ಎಂ. ಓಂಪ್ರಕಾಶ್ ಅತಿಥಿಗಳಾಗಿರುವರು ಎಂದರು.

ತಾವು, ಡಾ.ಎ.ಎಸ್. ಪೂರ್ಣಿಮಾ, ಪುಷ್ಪಲತಾ ಶಿವಕುಮಾರ್, ಜಾಯ್ಸ್ ವೈಶಾಕ್, ಚೇತನ್, ಬಿ.ಎಸ್. ವಿಜಯ್ ಆನಂದ್, ಆಬ್ದುಲ್ ಖಯ್ಯೂಂ, ಬಸವರಾಜು ಎಸ್. ಬೆಳ್ಳಿಕಟ್ಟಿಗೆ, ರೇಖಾ ಗೌತಮ್, ಮೀರಾ ಶಂಭು ಮೊದಲಾದವರು ಹಾಡಲಿದ್ದಾರೆಂದರು. ಜಾಯ್ಸ್ ವೈಶಾಕ್, ಬಿ.ಎಸ್. ವಿಜಯ್‌ಆನಂದ್, ರೇಖಾ ಗೌತಮ್, ಆಬ್ದುಲ್ ಖಯ್ಯೂಂ, ಎಸ್. ಬಸವರಾಜು ಬೆಳ್ಳಿಕಟ್ಟಿಗೆ ಹಾಜರಿದ್ದರು.

ರೇಷ್ಮೆ ಕೃಷಿಯನ್ನು ವೈಜ್ಞಾನಿಕ ಪದ್ಧತಿಯನ್ನು ಅಳವಡಿಸಿಕೊಂಡರೆ ಊಜಿ ನಿಯಂತ್ರಣ ಸಾಧ್ಯ

▸▸ ಡಾ. ರಂಜಿನಿ ಹೇಳಿಕೆ

ಚಾಮರಾಜನಗರ: ರೈತರು ಹಾಗೂ ರೇಷ್ಮೆ ಕೃಷಿಕರು ರೇಷ್ಮೆ ಹುಳು ಸಾಕಾಣಿಕೆ ಮಾಡುವಾಗ ಊಜಿಯನ್ನು ನಿಯಂತ್ರಣ ಮಾಡಲು ಮೈಸೂರು ರೇಷ್ಮೆ ಕೃಷಿ ಕೇಂದ್ರದಲ್ಲಿ ಅಭಿವೃದ್ಧಿಪಡಿಸಿದ ತಂತ್ರಜ್ಞಾನಗಳಾದ ಊಜಿ ಮಾತ್ರೆಗಳು, ಊಜಿ ಬಲೆಗಳು ಮತ್ತು ಎನ್‌ಟಿ (ಓವಿ) ವಿಧಾನಗಳನ್ನು ಬಳಸುವ ಮೂಲಕ ಈ ಸಮಸ್ಯೆಯನ್ನು ನಿವಾರಿಸಿಕೊಳ್ಳಬೇಕು ಎಂದು ರೇಷ್ಮೆ ಕೃಷಿ ವಿಜ್ಞಾನಿ ಡಾ.ರಂಜಿನಿ ಎ.ಎಸ್ ಸಲಹೆ ನೀಡಿದರು.

ಜಿಲ್ಲೆಯ ಹೊರೆಯಾಲ ಗ್ರಾಮದಲ್ಲಿ ರೇಷ್ಮೆ ಇಲಾಖೆ ಹಾಗೂ ಮೈಸೂರು ರೇಷ್ಮೆ ಮತ್ತು ಸಂಶೋಧನಾ ಕೇಂದ್ರ ಸಹಯೋಗದಲ್ಲಿ ರೇಷ್ಮೆ ಕೃಷಿ ಊಜಿ ನೊಣದ ನಿಯಂತ್ರಣ ಕುರಿತ ರೈತರಿಗೆ ತರಬೇತಿ ಕಾರ್ಯಾಗಾರದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಚಾಮರಾಜನಗರ ಜಿಲ್ಲೆ, ಕರ್ನಾಟಕ ರೇಷ್ಮೆ ಹುಳು ಸಾಕಣೆ ನಿರ್ವಹಣೆ, ರೇಷ್ಮೆ ಹುಳು ತಳಿಗಳು (ಹೈಬ್ರಿಡ್‌ಗಳು), ರೋಗಗಳ ನಿರ್ವಹಣೆ ಮತ್ತು ಊಜಿ ನೊಣದ ನಿಯಂತ್ರಣದ ಕುರಿತು ರೈತರಿಗೆ ತರಬೇತಿ ನೀಡಿದ ಅವರು, ಗುಂಡ್ಲುಪೇಟೆ ವ್ಯಾಪ್ತಿಯಲ್ಲಿ ಊಜಿ ನೊಣದ ಸಮಸ್ಯೆ ಪ್ರಮುಖವಾಗಿ ಪರಿಣಾಮ ಬೀರುತ್ತಿರುವುದು ಕಂಡುಬಂದಿದೆ. ಈ ಹಿನ್ನೆಲೆಯಲ್ಲಿ, ಸಿಎಸ್‌ಬಿ–ಸಿಎಸ್‌ಆರ್‌ಟಿಐ (CSB-CSRTI) ಮೈಸೂರು ಅಭಿವೃದ್ಧಿಪಡಿಸಿದ ತಂತ್ರಜ್ಞಾನಗಳಾದ ಊಜಿ ಮಾತ್ರೆಗಳು, ಊಜಿ ಬಲೆಗಳು ಮತ್ತು ಎನ್‌ಟಿ (NT) ವಿಧಾನಗಳನ್ನು ಬಳಸುವ ಮೂಲಕ ಈ ಸಮಸ್ಯೆಯನ್ನು ನಿವಾರಿಸಲು ಸಲಹೆ ನೀಡಲಾಯಿತು.

ಇದೇ ವೇಳೆ, ಗ್ರಾಸರಿ (Grasserie) ರೋಗವನ್ನು ನಿಯಂತ್ರಿಸುವ ಕ್ರಮಗಳ ಬಗ್ಗೆಯೂ ವಿವರಿಸಲಾಯಿತು. ಪ್ರಮುಖ ಸವಾಲುಗಳ ಕುರಿತು ಚರ್ಚಿಸಲಾಯಿತು ಮತ್ತು ರೈತರು ಹೆಚ್ಚಿನ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸುವಂತೆ ಕೋರಿದರು. ಹೊಸ ರೇ??ಮ ಹುಳು ತಳಿಗಳು ಮತ್ತು ಹಿಪ್ಪುನೇರಳೆ ತಳಿಗಳ ಬಗ್ಗೆ ಮಾಹಿತಿ ನೀಡಲಾಯಿತು. ಕಾರ್ಯಾಗೃಆದ ರೇಷ್ಮೆ ಇಲಾಖೆಯ ಉಪ ನಿರ್ದೇಶಕ ರೇಣುಕೇಶ್ ಮಾದರಿ ಬಿತ್ತನೆ ಕೋಠಿಯ ಉಪ ನಿರ್ದೇಶಕಿ ಡಾ. ಸರಿತಾ ಕುಮಾರಿ ರೇಷ್ಮೆ ಸಹಾಯಕ ನಿರ್ದೇಶಕಿ ಶ್ವೇತಾ ಕೆ.ಎನ್. ಎಸ್‌ಇಟಿ ಶಶಿ ಅವರು ರೈತರೊಂದಿಗೆ ಸಂವಾದ ನಡೆಸಿ, ಮಣ ?ಣನ ಫಲವತ್ತತೆ, ಗ್ರೇನೇಜ್ ಕಾರ್ಯಚಟುವಟಿಕೆಗಳು ಮತ್ತು ಹಿಪ್ಪುನೇರಳೆ ಕೃಷಿಯ ಕುರಿತು ಮಾಹಿತಿ ನೀಡಿದರು.

ಸೆ.23ರವರೆಗೆ ಮತದಾರರ ಪಟ್ಟಿ ಆಕ್ಷೇಪಣೆಗೆ ಅವಕಾಶ

ಗುಂಡ್ಲುಪೇಟೆ: ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ–2026ರ ಅಂಗವಾಗಿ ಆ.24ರಂದು ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರದ ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಸೆ.23ರವರೆಗೆ ಸಾರ್ವಜನಿಕರಿಂದ ಹಕ್ಕು, ಆಕ್ಷೇಪಣೆ ಹಾಗೂ ತಿದ್ದುಪಡಿಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಮತದಾರರ ನೋಂದಣಾ ಧಿಕಾರಿ ಎನ್ ವಿಶ್ವನಾಥ್ ತಿಳಿಸಿದರು.

ಪಟ್ಟಣದ ತಾಲೂಕು ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು , ಪರಿಷ್ಕರಣೆ ಪೂರ್ವದಲ್ಲಿ ಕ್ಷೇತ್ರದ 249 ಮತಗಟ್ಟೆಗಳಲ್ಲಿ ಒಟ್ಟು 2,16,605 ಮತದಾರರು ಇದ್ದರು. ಗಣತಿ ನಮೂನೆಗಳ ಸ್ವೀಕೃತಿ ಹಾಗೂ ಡಿಜಿಟಲೀಕರಣದ ಬಳಿಕ ಮ್ಯಾಪ್ ಆಗದಿರುವ 61, 2002ರ ಮಾಹಿತಿಯಲ್ಲಿ ವ್ಯತ್ಯಾಸ ಕಂಡುಬಂದಿರುವ 4,134 ಹಾಗೂ ಗೈರು, ಸ್ಥಳಾಂತರ, ಮರಣ, ನಕಲು ಮತ್ತು ಇತರೆ ಕಾರಣಗಳಿಂದ ಒಟ್ಟು 18,145 ಮತದಾರರ ಹೆಸರುಗಳನ್ನು ಕೈಬಿಡಲಾಗಿದೆ ಎಂದು ಮಾಹಿತಿ ನೀಡಿದರು. ಪ್ರಸ್ತುತ ಪ್ರಕಟಿಸಿರುವ ಕರಡು ಮತದಾರರ ಪಟ್ಟಿಯಲ್ಲಿ 96,725 ಪುರುಷರು, 1,01,728 ಮಹಿಳೆಯರು ಹಾಗೂ 9 ಇತರೆ ಮತದಾರರು ಸೇರಿದಂತೆ ಒಟ್ಟು 1,98,462 ಮತದಾರರು ಇದ್ದಾರೆ. ಮತಗಟ್ಟೆಗಳ ಪುನರ್‌ವಿಂಗಡಣೆ ಹಿನ್ನೆಲೆಯಲ್ಲಿ ಹಿಂದಿನ 249 ಮತಗಟ್ಟೆಗಳಿಗೆ ಹೆಚ್ಚುವರಿಯಾಗಿ 8 ಮತಗಟ್ಟೆಗಳನ್ನು ಸೇರ್ಪಡೆಗೊಳಿಸಲಾಗಿದ್ದು, ಕ್ಷೇತ್ರದಲ್ಲಿ ಒಟ್ಟು 257 ಮತಗಟ್ಟೆಗಳನ್ನು ನಿಗದಿಪಡಿಸಲಾಗಿದೆ ಎಂದರು.

ನಂತರ ತಹಸೀಲ್ದಾರ್ ಎಂ ಎಸ್ ತನ್ಮಯ್ ಮಾತನಾಡಿದ ಹೊಸ ಮತದಾರರ ಸೇರ್ಪಡೆಗೆ ನಮೂನೆ–6, ಸಾಗರೋತ್ತರ (ಎನ್‌ಆರ್‌ಐ) ಮತದಾರರ ನೋಂದಣಿಗೆ ನಮೂನೆ–6ಎ, ಮತದಾರರ ಹೆಸರು ತೆಗೆದುಹಾಕಲು ಅಥವಾ ಆಕ್ಷೇಪಣೆ ಸಲ್ಲಿಸಲು ನಮೂನೆ–7, ಹೆಸರು ಹಾಗೂ ಇತರೆ ವಿವರಗಳ ತಿದ್ದುಪಡಿ, ಸ್ಥಳಾಂತರ, ಪಿಡಬ್ಲ್ಯುಡಿ ಗುರುತು ಹಾಗೂ ಎಪಿಕ್ ಕಾರ್ಡ್ ಬದಲಾವಣೆಗೆ ನಮೂನೆ–8ರಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ತಿಳಿಸಿದರು. ನ2002ರ ಮತದಾರರ ಪಟ್ಟಿಯಲ್ಲಿ ಮ್ಯಾಪಿಂಗ್ ಆಗದಿರುವ ಹಾಗೂ ಮಾಹಿತಿಯಲ್ಲಿ ವ್ಯತ್ಯಾಸ ಕಂಡುಬಂದಿರುವ ಮತದಾರರಿಗೆ ನೋಟಿಸ್ ಜಾರಿ ಮಾಡಿ, ಬಿಎಲ್‌ಒಗಳ ಮೂಲಕ ತಲುಪಿಸಿ ಸ್ವೀಕೃತಿ ಪಡೆಯಲಾಗುವುದು. ವಿಚಾರಣೆ ಸಂದರ್ಭದಲ್ಲಿ ಸಂಬಂಧಪಟ್ಟ ಮತದಾರರು ಜನನ ಪ್ರಮಾಣಪತ್ರ, ಜಾತಿ ಪ್ರಮಾಣಪತ್ರ, ಪಾಸ್‌ಪೋರ್ಟ್ ಸೇರಿದಂತೆ 12 ಮಾನ್ಯ ದಾಖಲೆಗಳನ್ನು ಸಲ್ಲಿಸಲು ಅವಕಾಶವಿದೆ ಎಂದು ಹೇಳಿದರು. ಮತದಾರರು ಕರಡು ಪಟ್ಟಿಯನ್ನು ಪರಿಶೀಲಿಸಿ, ಹೆಸರು ಸೇರ್ಪಡೆ, ತೆಗೆದುಹಾಕುವಿಕೆ, ತಿದ್ದುಪಡಿ ಅಥವಾ ಆಕ್ಷೇಪಣೆಗಳಿದ್ದಲ್ಲಿ ನಿಗದಿತ ಅವಧಿಯೊಳಗೆ ಅರ್ಜಿ ಸಲ್ಲಿಸುವಂತೆ ಮನವಿ ಮಾಡಿದರು.

ಗ್ರಾಪಂನಲ್ಲೂ ಗ್ಯಾರಂಟಿ ಅರಿವು ಮೂಡಿಸಿ

ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಎಸ್.ಅರುಣಕುಮಾರ್ ಸೂಚನೆ

ಮೈಸೂರು: ಗ್ರಾಮ ಪಂಚಾಯಿತಿ ಮಟ್ಟದಲ್ಲಿಯೂ ಗ್ಯಾರಂಟಿ ಯೋಜನೆ ವಿಸ್ತರಿಸುವ ಕೆಲಸ ತ್ವರಿತವಾಗಿ ಆಗಬೇಕಿದೆ. ಗ್ಯಾರಂಟಿ ಯೋಜನೆಗಳ ಕುರಿತು ಅರಿವು ಮೂಡಿಸುವ ಕೆಲಸ ತ್ವರಿತವಾಗಿ ಆಗಲಿ ಎಂದು ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಎಸ್.ಅರುಣಕುಮಾರ್ ತಿಳಿಸಿದರು.

ನಗರದ ಜಿಲ್ಲಾ ಪಂಚಾಯಿತಿ ಡಿ.ದೇವರಾಜ ಅರಸು ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದರು. ಗ್ರಾಮ ಪಂಚಾಯಿತಿ ಮಟ್ಟದಲ್ಲಿಯೂ ಸಮಿತಿ ರಚನೆಗೆ ಸೂಚನೆ ಬಂದಿದೆ. ಈ ನಿಟ್ಟಿನಲ್ಲಿ ಶಾಸಕ ಸಮೇತ ಗ್ರಾಮ ಪಂಚಾಯಿತಿ ಮಟ್ಟದಲ್ಲಿಯೂ ಸಮಿತಿ ರಚಿಸುವ ಕೆಲಸ ಮಾಡಬೇಕು. ಈ ಬಗ್ಗೆ ಶೀಘ್ರ ಪಟ್ಟಿ ನೀಡುವಂತೆ ಹೇಳಿದರು.

ಮೂರು ವರ್ಷದಿಂದಲೂ ದಸರೆಯ ವೇಳೆ ಗ್ಯಾರಂಟಿ ಯೋಜನೆ ಪ್ರಚಾರ ಮಾಡುತ್ತಾ ಬಂದಿದ್ದೇವೆ. ಈ ಬಾರಿಯೂ ಸಹ ಎಲ್ಲಾ ಯೋಜನೆಗಳನ್ನು ಹೆಚ್ಚಿಚ್ಚು ಪ್ರಚಾರ ಮಾಡುವ ಬಗ್ಗೆಯೂ ದಸರಾ ಉನ್ನತ ಸಮಿತಿಗೆ ತಿಳಿಸಲಾಗುವುದು. ಇನ್ನೂ ಪಂಚ ಗ್ಯಾರಂಟಿಗಳು ಜಿಲ್ಲೆಯಲ್ಲಿ ಸಮರ್ಪಕ ಅನುಷ್ಠಾನ ಸಂಬಂಧ ಪ್ರತಿ ತಿಂಗಳಿಗೊಮ್ಮೆ ಸಭೆ ನಡೆಸಲಾಗುತ್ತಿದೆ. ಜಿಲ್ಲೆಯಲ್ಲಿ 15724 ಗೃಹಲಕ್ಷ್ಮಿ ಫಲಾನುಭವಿಗಳು ಮೃತವಾಗಿದ್ದು, ಅವರ ನಂತರ ಸದರಿ ಕುಟುಂಬಗಳಲ್ಲಿ ಅರ್ಹ ಫಲಾನುಭವಿಗಳಿದ್ದಲ್ಲಿ ಅವರಿಗೆ ಸೌಲಭ್ಯ ದೊರಕುವಂತೆ ಸಹಕರಿಸಬೇಕು ಇಲ್ಲವಾದಲ್ಲಿ ಸೌಲಭ್ಯ ತಡೆಹಿಡಿಯುವ ಕೆಲಸವಾಗಬೇಕು. ಗೃಹಲಕ್ಷ್ಮಿ ಯೋಜನೆಯಲ್ಲಿ ಮರಣ ಹೊಂದಿದ ಫಲಾನುಭವಿಗಳ ಕುಟುಂಬದಲ್ಲೇ ಸೂಕ್ತ ಅರ್ಹ ಮಹಿಳೆಯರಿದ್ದರೆ ಅದೇ ಪಡಿತರ ಚೀಟಿಯಲ್ಲಿ ಅವರನ್ನು ತಕ್ಷಣ ಗೃಹಲಕ್ಷ್ಮಿ ಯೋಜನೆಗೆ ನೋಂದಾಯಿಸಬೇಕು. ಒಂದು ವೇಳೆ ಅರ್ಹ ಮಹಿಳೆಯರಿಲ್ಲದಿದ್ದರೆ, ಅಂತಹ ಕುಟುಂಬಗಳ ಸ್ಪಷ್ಟ ಮಾಹಿತಿಯನ್ನು ಸಿದ್ಧಪಡಿಸಿ ಸಲ್ಲಿಸಬೇಕು ಎಂದರು.

ಪಡಿತರ ಗೊಂದಲ ಕುರಿತು ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ ಜಂಟಿ ಆಯುಕ್ತ ಮಂಟೇಸ್ವಾಮಿ ಮಾತನಾಡಿ, ಜಿಲ್ಲೆಯಲ್ಲಿ 26ಸಾವಿರ ಅನರ್ಹ ಎಪಿಎಲ್ ಕಾರ್ಡ್ ರದ್ದು ಮಾಡಿದ್ದು, 11ಸಾವಿರ ಪಡಿತರ ಚೀಟಿಗಳನ್ನುಸಹ ರದ್ದು ಮಾಡಲಾಗಿದೆ. ಈ ಪೈಕಿ ಇನ್ನಾ 7500 ಮಂದಿ ಮರಣ ಹೊಂದಿದ್ದರಿಂದ ಅವರನ್ನು ಕಾರ್ಡ್ ರದ್ದುಗೊಳಿಸಲಾಗಿದೆ. ಜಿಲ್ಲೆಯಲ್ಲಿ 1853ಮಂದಿಯನ್ನು ಅನ್ನ ಸುವಿಧ ಯೋಜನೆಯಡಿ ಗುರುತಿಸಿದ್ದು, 587ಮಂದಿಗೆ ನೇರವಾಗಿ ನಾವೇ ಪಡಿತರ ವಿತರಿಸುತ್ತಿದ್ದೇವೆ. ಮಾರ್ಚ್ 31ರಿಂದಲೇ ಹೊಸ ಕಾರ್ಡ್ ನೊಂದಣಿ ನಿಲ್ಲಿಲಸಾಗಿದೆ. ಎಪಿಎಲ್ ಕಾರ್ಡ್ ಬದಲಾವಣೆ ಆಗಿದ್ದಲ್ಲಿ ತುರ್ತು ಅವಶ್ಯಕತೆಗೆ ಅನುಗುಣವಾಗಿ ಅವರಿಗೆ ಮರಳಿ ಕಾರ್ಡ್ ನೀಡಲು ಕ್ರಮವಹಿಸಲಾಗುತ್ತಿದೆ ಎಂದರು.

ಗ್ಯಾರೆಂಟಿ ಯೋಜನೆಗಳ ಪ್ರಾಧಿಕಾರದ ಸದಸ್ಯ ಸಾ.ಮಾ.ಯೋಗೇಶ್ 80 ವರ್ಷ ಮೇಲ್ಪಟ್ಟ ವಯೋವೃದ್ಧರಿಗೆ ಅನ್ನ ಸುವಿದದಡಿಯಲ್ಲಿ ಮನೆ ಮನೆಗೆ ವಿತರಿಸಬೇಕಿದೆ. ಆದರೆ, ಕೆಲವು ಪಡಿತರ ಅಂಗಡಿಯವರು ಎರಡು ತಿಂಗಳ ಬಳಿಕ ವಿತರಿಸುತ್ತಿದ್ದು, ಅಂತಹವರ ವಿರುದ್ಧ ಕ್ರಮಜರುಗಿಸಬೇಕೆಂದರು. ಅಲ್ಲದೆ, ಸ್ವತಃ ತಮ್ಮ ಊರಿನ ಪಡಿತರ ಅಂಗಡಿಯಲ್ಲೇ ಇಂತಹದೊಂದು ಪ್ರಕರಣ ನಡೆಯುತ್ತಿದ್ದು, ಕ್ರಮಜರುಗಿಸುವಂತೆ ಹೇಳಿದರು. ಇದಕ್ಕೆ ದನಿಗೂಡಿಸಿದ ಜಿಲ್ಲಾ ಗ್ಯಾರಂಟಿ ಯೋಜನೆ ಉಪಾಧ್ಯಕ್ಷ ಪ್ರೊ.ಶಿವಕುಮಾರ್ ಮಾತನಾಡಿ, ಹೂಟಗಳ್ಳಿಯಲ್ಲೂ ಪಡಿತರ ಅಂಗಡಿಯವರು ರಾತ್ರಿ 10ಗಂಟೆ ಬಳಿಕ ಪಡಿತರ ವಿತರಿಸುತ್ತಿದ್ದು, ಇದನ್ನು ಪ್ರಶ್ನಿಸಿದವರ ಮೇಲೆ ಹರಿಹಾಯ್ದಿರುವ ಬಗ್ಗೆ ವಿಡಿಯೋವನ್ನು ಜನರು ತಿಳಿಸಿರುವ ಬಗ್ಗೆ ಗಮನಕ್ಕೆ ತಂದರು. ಇದಕ್ಕೆ ಸಂಬಂಧಿಸಿದವರಿಗೆ ನೋಟಿಸ್ ನೀಡುವುದಾಗಿ ಆಹಾರ ನಾಗರೀಕ ಸರಬರಾಜು ಜಂಟಿ ಆಯುಕ್ತ ಮಂಟೇಸ್ವಾಮಿ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆ ಉಪಾಧ್ಯಕ್ಷ ಬಿ.ಕರಿಗೌಡ ಮಾತನಾಡಿ, ಅಂತ್ಯೋದಯ ಕಾರ್ಡಿನಲ್ಲಿ ಒಬ್ಬರೇ ಸದಸ್ಯರಿಗೆ 35ಕೆಜಿ ಅಕ್ಕಿ ನೀಡುತ್ತಿದ್ದು, ಅವರಿಗೆ ಹೆಚ್ಚುವರಿ ಆಗುವುದರಿಂದ ಅವರು ಕಾಳಸಂತೆ ಕೋರರಿಗೆ ಮಾರಾಟ ಮಾಡುತ್ತಿರುವುದಾಗಿ ತಿಳಿಸುತ್ತಿದ್ದಾರೆ. ಹೀಗಾಗಿ ಎಕ ಸದಸ್ಯರಿರುವ ಅಂತ್ಯೋದಯ ಕಾರ್ಡುದಾರರ ಪುನರ್ ಪರಿಶೀಲನೆ ನಡೆಸಿ ಎಂದರು. ಸಮಿತಿ ಸದಸ್ಯರಾದ ಲಲಿತ, ಶಿವಣ್ಣ, ಅಬ್ದುಲ್ ಖಾದರ್, ಚೆಲುವರಾಜು, ರಾಘು, ಕೆ. ಮಾರುತಿ, ಚಾಮರಾಜು, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಸವಿತಾ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ನಾಗರಾಜು ಸೇರಿ ಇನ್ನಿತರರು ಉಪಸ್ಥಿತರಿದ್ದರು.

ಗೃಹಲಕ್ಷ್ಮಿಗೂ ಎಸ್‌ಐಆರ್‌ಗೂ ಸಂಬಂಧವಿಲ್ಲ: ಅರುಣಕುಮಾರ್

ಮೈಸೂರು: ಎಸ್ ಐಆರ್ ಪ್ರಕ್ರಿಯೆಗೂ ಹಣ ವಿತರಣೆಗೂ ಯಾವುದೇ ಸಂಬಂಧವಿಲ್ಲ. ಈವರೆಗೂ 33ಕಂತಿನ ಹ

ಆ. 29 ರಂದು ರಾಷ್ಟ್ರೀಯ ಕ್ರೀಡಾ ದಿನಾಚರಣೆ ಕಾರ್ಯಕ್ರಮ

ಮಂಡ್ಯ: ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಮಂಡ್ಯ ಮೈ ಭಾರತ್ ಇವರ ಸಹಯೋಗದಲ್ಲಿ ಹಾಕಿ ಮಾಂತ್ರಿಕ ಮೇಜರ್ ಧ್ಯಾನ್ ಚಂದ್ ರವರ ಹುಟ್ಟು ಹಬ್ಬದ ಪ್ರಯುಕ್ತ ರಾಷ್ಟ್ರೀಯ ಕ್ರೀಡಾ ದಿನಾಚರಣೆ ಕಾರ್ಯಕ್ರಮವನ್ನು ಆಗಸ್ಟ್ 29 ರಂದು ಬೆಳಿಗ್ಗೆ 7:00ಗೆ ಮಂಡ್ಯ ನಗರದ ಸರ್. ಎಂ. ವಿಶ್ವೇಶ್ವರಯ್ಯ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ

ಕೇಂದ್ರ ಸರ್ಕಾರದ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ .ಕುಮಾರಸ್ವಾಮಿ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ಬೃಹತ್ ಮತ್ತು ಮಧ್ಯಮ ನೀರಾವರಿ ಸಚಿವರು ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರಾದ ಎನ್. ಚಲುವರಾಯಸ್ವಾಮಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಕೃಷಿ ಸಚಿವರಾದ ಪಿ. ಎಂ. ನರೇಂದ್ರಸ್ವಾಮಿ ರವರು,ಶ್ರೀ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ ಅಧ್ಯಕ್ಷರು ಹಾಗೂ ಶ್ರೀರಂಗಪಟ್ಟಣ ವಿಧಾನಸಭಾ ಶಾಸಕ ಎ.ಬಿ ರಮೇಶ ಬಂಡಿಸಿದ್ದೇಗೌಡ, ರಾಜ್ಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಆಯೋಗದ ಅಧ್ಯಕ್ಷರಾದ ಡಾ. ಮೂರ್ತಿ ರವರು ಕಾರ್ಯಕ್ರಮದಲ್ಲಿ ಗೌರವ ಉಪಸ್ಥಿತಿ ವಹಿಸಲಿದ್ದಾರೆ.

ಮಂಡ್ಯ ವಿಧಾನಸಭಾ ಶಾಸಕರಾದ ಪಿ.ರವಿಕುಮಾರ್ ಅವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರು ಹಾಗೂ ವಿಧಾನಪರಿಷತ್ ಸದಸ್ಯರಾದ ದಿನೇಶ್ ಗೂಳಿಗೌಡ,ರಾಜ್ಯ ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ.ಎಸ್ ಆತ್ಮಾನಂದ,ಮೈಸೂರು ಸಕ್ಕರೆ ಕಂಪನಿ ನಿಯಮಿತ ಅಧ್ಯಕ್ಷರಾದ ಸಿ.ಡಿ ಗಂಗಾಧರ,ಕೈಮಗ್ಗ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಬಿ. ನಾಗೇಂದ್ರ ಕುಮಾರ್,ವಿಧಾನ ಪರಿಷತ್ ಶಾಸಕರುಗಳಾದ ಮಧು ಜಿ. ಮಾದೇಗೌಡ, ಕೆ. ವಿವೇಕಾನಂದ, ಬಿ.ಎಸ್. ಶಿವಣ್ಣ, ವಿಧಾನ ಸಭಾ ಶಾಸಕರುಗಳಾದ ದರ್ಶನ್ ಪುಟ್ಟಣ್ಣಯ್ಯ, ಹೆಚ್.ಟಿ ಮಂಜು, ಕೆ.ಎಂ ಉದಯ,ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷರಾದ ಡಾ.ಹೆಚ್. ಕೃಷ್ಣ,ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಪಿ ಪ್ರಕಾಶ್, ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಉಪಾಧ್ಯಕ್ಷರಾದ ವಿಜಯಲಕ್ಷ್ಮಿ ರಘುನಂದನ್ ರವರು ಆಗಮಿಸಲಿದ್ದಾರೆ.

ಹೈಟೆಕ್ ಶೌಚಾಲಯ ಸೇರಿ ವಿವಿಧ ಕಾಮಗಾರಿಗಳಿಗೆ ಭೂಮಿ ಪೂಜೆ

ಚಾಮರಾಜನಗರ ತಾಲೂಕಿನ ಕಾಗಲವಾಡಿ ಟಿ.ಎಸ್. ಸುಬ್ಬಣ್ಣ ಪ್ರೌಢಶಾಲೆಯ ಅವರಣದಲ್ಲಿ ಹೈಟೆಕ್ ಶೌಚಾಲಯ ನಿರ್ಮಾಣಕ್ಕೆ ನಾರಿ ಟ್ರಸ್ಟ್ನ ಅಧ್ಯಕ್ಷ ಸಿ.ಎಸ್. ಮುರಳೀಧರ್ ಗುದ್ದಲಿಪೂಜೆ ನೆರವೇರಿಸಿದರು.

ಚಾಮರಾಜನಗರ: ಗಿರಿಜನ, ಹರಿಜನ ಹಾಗು ಹಿಂದುಳಿದ ವರ್ಗಗಳ ಮಕ್ಕಳ ಶೈಕ್ಷಣ ಕ ಪ್ರಗತಿಗಾಗಿ ನಮ್ಮ ನಾರಿ ಟ್ರಸ್ಟ್ ಶ್ರಮಿಸುತ್ತಿದ್ದು, ಕಾಗಲವಾಡಿ ಟಿ.ಎಸ್. ಸುಬ್ಬಣ್ಣ ಸರ್ಕಾರಿ ಪ್ರೌಢಶಾಲೆಯ ಅಭಿವೃದ್ಧಿಗೆ 22 ಲಕ್ಷ ರೂ. ವೆಚ್ಚದಲ್ಲಿ ವಿವಿಧ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ಎಂದು ನಾರಿಟ್ರಸ್ಟ್ನ ಸಂಸ್ಥಾಪಕ ಅಧ್ಯಕ್ಷ ಸಿ.ಎಸ್. ಮುರಳೀಧರ್ ತಿಳಿಸಿದರು.

ತಾಲೂಕಿನ ಕಾಗಲವಾಡಿ ಟಿ.ಎಸ್. ಸುಬ್ಬಣ್ಣ ಪ್ರೌಢಶಾಲೆಯ ಅವರಣದಲ್ಲಿ ಹೈಟೆಕ್ ಶೌಚಾಲಯ ನಿರ್ಮಾಣಕ್ಕೆ ಗುದ್ದಲಿಪೂಜೆ ನೆರವೇರಿಸಿ ಅವರು ಮಾತನಾಡಿದರು. ಶಾಲೆಯ ಮುಖ್ಯಶಿಕ್ಷಕರಾದ ಲಿಂಗರಾಜು ಅವರ ನಮ್ಮ ಟ್ರಸ್ಟ್ ಅನ್ನು ಸಂಪರ್ಕ ಮಾಡಿ, ಶಾಲೆಯ ಸ್ಥಿತಿಗತಿಗಳ ಬಗ್ಗೆ ವಿವರಿಸಿದರು. ಬಳಿಕ ಶಾಲೆಗೆ ಭೇಟಿ ನೀಡಿದಾಗ ಮತ್ತು ಇಲ್ಲಿನ ಮಕ್ಕಳ ಕಲಿಕೆ ಅಸಕ್ತಿ ಅವರ ಆರ್ಥಿಕ ಮಟ್ಟವನ್ನು ನೋಡಿ, ಈ ಶಾಲೆಯನ್ನು ಅಭಿವೃದ್ಧಿ ಪಡಿಸಬೇಕೆಂಬ ಸಂಕಲ್ಪ ಮಾಡಿ, ಇಂದು ಗುದ್ದಲಿಪೂಜೆ ನೆರವೇರಿಸುತ್ತಿದ್ದೇವೆ. ಈಗಾಗಲೇ ಇಲ್ಲಿನ ವಿದ್ಯಾರ್ಥಿಗಳಿಗೆ ಸಮವಸ್ತ್ರ, ನೋಟ್ಬುಕ್, ಶಾಲೆಗೆ ಕ್ರೀಡಾ ಸಾಮಗ್ರಿಗಳನ್ನು ಕೊಡುಗೆಯಾಗಿ ನೀಡಿದ್ದೇವೆ ಎಂದರು.

ಟಿ.ಎಸ್. ಸುಬ್ಬಣ್ಣ ಶಾಲೆಯ ಆವರಣದಲ್ಲಿ ಬಾಲಕ, ಬಾಲಕಿಯರರಿಗೆ ಪ್ರತ್ಯೇಕ ಹೈಟೆಕ್ ಶೌಚಾಲಯ ನಿರ್ಮಾಣ, ವಿಜ್ಞಾನ ಲ್ಯಾಬ್, ಶಾಲೆ ಮಕ್ಕಳಿಗೆ ಡೆಸ್ಕ್ಗಳು, ಕಂಪ್ಯೂಟರ್ ಲ್ಯಾಬ್ ಹಾಗೂ ಶಾಲೆಯ ಮೇಲ್ಛಾವಣಿ ದುರಸ್ತಿ ಸೇರಿದಂತೆ ವಿವಿಧ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತದೆ ಎಂದರು.

ಮೈಸೂರಿನಲ್ಲಿರುವ ನಮ್ಮ ನಾರಿ ಟ್ರಸ್ಟ್ ವಿವಿಧ ಕಂಪನಿಗಳು ಹಾಗೂ ದಾನಿಗಳ ನೆರವಿನಿಂದ ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿದ್ದರು. ಈಗಾಗಲೇ ಮೈಸೂರು ಜಿಲ್ಲೆಯ ಅನೇಕ ಶಾಲೆಗಳನ್ನು ನವೀಕರಣ, ಅಲ್ಲಿನ ಮಕ್ಕಳಿಗೆ ನೋಟ್ಬುಕ್, ಕಲಿಕಾ ಸಲಕರಣೆ, ಆಟೋಪಕರಣಗಳನ್ನು ನೀಡಿದ್ದೇವೆ. ಚಾ.ನಗರ ತಾಲೂಕಿನ ಅನೇಕ ಅನೇಕ ಶಾಲೆಗಳನ್ನು ಗುರುತಿಸಲಾಗಿದೆ. ಮುಂದಿನ ದಿನಗಳಲ್ಲಿ ಹಂತ ಹಂತವಾಗಿ ಶಾಲೆಗಳಿಗೆ ಅಗತ್ಯ ಪಿಠೋಪಕರಣಗಳನ್ನು ನೀಡಲಾಗುತ್ತದೆ ಎಂದು ಸಿ.ಎಸ್. ಮುರುಳೀಧರ್ ತಿಳಿಸಿದರು. ಶಾಲೆಯ ಎಸ್ಡಿಎಂಸಿ ಉಪಾಧ್ಯಕ್ಷರಾದ ತಾ.ಪಂ. ಮಾಜಿ ಸದಸ್ಯ ಕಾಗಲವಾಡಿ ಶಿವಸ್ವಾಮಿ ಮಾತನಾಡಿ, ನಮ್ಮ ಗ್ರಾಮದ ಶಾಲೆಯನ್ನು ಅಭಿವೃದ್ಧಿ ಪಡಿಸಿ, ಗುಣಮಟ್ಟದ ಶಿಕ್ಷಣಕ್ಕೆ ನಾರಿ ಟ್ರಸ್ಟ್ ಅಧ್ಯಕ್ಷರು ಮುಂದಾಗಿರುವುದು ಸಂತಸ ತಂದಿದೆ. ನಾವು ಓದಿದ ಶಾಲೆ ಇದಾಗಿದ್ದು, ಶಾಲೆಯ ಅಭಿವೃದ್ಧಿಗೆ ಎಸ್ಡಿಎಂಸಿ ಹಾಗೂ ಗ್ರಾಮಸ್ಥರ ಸಂಪೂರ್ಣ ಸಹಕಾರ ಇದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಗ್ರಾಮದ ಮುಖಂಡರಾದ ಗ್ರಾ.ಪಂ. ಮಾಜಿ ಉಪಾಧ್ಯಕ್ಷ ನಟಶೇಖರಮೂರ್ತಿ, ಯ. ಜಯಶಂಕರಮೂರ್ತಿ, ಸರ್ಕಾರಿ ಐಟಿಐ ಪ್ರಾಂಶುಪಾಲ ರಂಗಸ್ವಾಮಿ, ಮುಖ್ಯ ಶಿಕ್ಷಕ ಲಿಂಗರಾಜು, ಸಹ ಶಿಕ್ಷಕರಾದ ಮಲ್ಲೇಶಗೌಡ, ಮಂಜು, ಕುಮಾರ್, ಮಮತ, ವಿರೂಪಾಕ್ಷ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಬೊಮ್ಮಲಾಪುರದಲ್ಲಿ 8–10 ದಿನಗಳ ಹಿಂದೆ ಹುಲಿ ಸಾವು

ಗುಂಡ್ಲುಪೇಟೆ: ಬಂಡೀಪುರ ಹುಲಿ ಯೋಜನೆಯ ಗುಂಡ್ಲುಪೇಟೆ ಬಫರ್ ವಲಯ ವ್ಯಾಪ್ತಿಯ ಹಂಗಳ ಹೋಬಳಿಯ ಬೊಮ್ಮಲಾಪುರ ಗ್ರಾಮದ ಸರ್ವೆ ನಂ. 78ರಲ್ಲಿ ಸುಮಾರು 3–4 ವರ್ಷದ ಗಂಡು ಹುಲಿಯೊಂದು ಮೃತಪಟ್ಟಿರುವುದು ಪತ್ತೆಯಾಗಿದೆ.

ಆಗಸ್ಟ್ 27ರಂದು ಹುಲಿ ಮೃತಪಟ್ಟಿರುವುದು ಕಂಡುಬಂದಿದ್ದು, ಅರಣ್ಯ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಿದ್ದಾರೆ. ಹುಲಿ ಸುಮಾರು 8?10 ದಿನಗಳ ಹಿಂದೆ ಮೃತಪಟ್ಟಿರಬಹುದು ಎಂದು ಅಂದಾಜಿಸಲಾಗಿದೆ.

ಇಲಾಖೆಯ ಪಶುವೈದ್ಯಾಧಿಕಾರಿಗಳಿಂದ ನಿಯಮಾನುಸಾರ ಮರಣೋತ್ತರ ಪರೀಕ್ಷೆ ನಡೆಸಲಾಗಿದ್ದು, ಹುಲಿಯ ಸಾವಿಗೆ ನಿಖರ ಕಾರಣ ಇನ್ನೂ ತಿಳಿದುಬಂದಿಲ್ಲ. ಸಾವಿನ ಕಾರಣ ಪತ್ತೆಹಚ್ಚಲು ಮೃತ ಹುಲಿಯ ವಿವಿಧ ಅಂಗಾಂಗಗಳ ಮಾದರಿಗಳನ್ನು ಸಂಗ್ರಹಿಸಿ ವಿಧಿವಿಜ್ಞಾನ ಪ್ರಯೋಗಾಲಯಕ್ಕೆ ಕಳುಹಿಸಲು ಕ್ರಮ ಕೈಗೊಳ್ಳಲಾಗಿದೆ. ಹುಲಿಯ ಮೃತದೇಹವನ್ನು ವಿಲೇವಾರಿ ಮಾಡಲು ಎನ್.ಟಿ.ಸಿ.ಎ. ಮಾರ್ಗಸೂಚಿಯಂತೆ ಮುಂದಿನ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಗುಂಡ್ಲುಪೇಟೆ ಉಪ ವಿಭಾಗದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಕೆ. ಸುರೇಶ್ ತಿಳಿಸಿದ್ದಾರೆ.

ಬಂಡೀಪುರ ಹುಲಿ ಯೋಜನೆ ನಿರ್ದೇಶಕ ಶುಭಂ ಸಿಂಗ್ ತನ್ವರ್, ವಲಯ ಅರಣ್ಯಾಧಿಕಾರಿ ಶಿವಕುಮಾರ್ ಆರ್., ಪಶುವೈದ್ಯಾಧಿಕಾರಿಗಳಾದ ಡಾ. ವಾಸೀಂ ಮಿರ್ಜಾ, ನಂಜುಂಡರಾಜೇ ಅರಸ್, ವನ್ಯಜೀವಿ ಪರಿಪಾಲಕ ರಘುರಾಮ್, ಎನ್.ಟಿ.ಸಿ.ಎ. ಪ್ರತಿನಿಧಿ, ಸ್ಥಳೀಯ ಗ್ರಾಮ ಪಂಚಾಯಿತಿ ಸದಸ್ಯ ಶಿವಬಸಪ್ಪ ಸೇರಿದಂತೆ ಅರಣ್ಯ ಇಲಾಖೆ ಸಿಬ್ಬಂದಿ ಸ್ಥಳದಲ್ಲಿದ್ದರು

ಕಾವೇರಿ ವನ್ಯಜೀವಿಧಾಮದ ಶಾಗ್ಯ ವಲಯದ ಕರಡಿಕಲ್ಲು ಗುಡ್ಡದಲ್ಲಿ ನಡೆದ ಶೂಟೌಟ್ ಪ್ರಕರಣ:

ಸಿಐಡಿಗೆ ವಹಿಸಲು ಸರ್ಕಾರ ಕ್ರಮ

ಚಾಮರಾಜನಗರ: ಕಾವೇರಿ ವನ್ಯಜೀವಿಧಾಮದ ಶಾಗ್ಯ ವಲಯದ ಕರಡಿಕಲ್ಲು ಗುಡ್ಡದಲ್ಲಿ ನಡೆದ ಶೂಟೌಟ್ ಪ್ರಕರಣವನ್ನು ಸಿಐಡಿಗೆ ವಹಿಸಲು ಸರ್ಕಾರ ಕ್ರಮ ಕೈಗೊಂಡಿದೆ. ಈ ಸಂಬಂಧ, ಪ್ರಕರಣದ ಸಂಪೂರ್ಣ ಕಡತಗಳನ್ನು ಸಿಐಡಿ ತನಿಖಾಧಿಕಾರಿಗೆ ವೈಯಕ್ತಿಕವಾಗಿ ಹಸ್ತಾಂತರಿಸುವಂತೆ ಪೊಲೀಸ್ ಮಹಾ ನಿರ್ದೇಶಕ ಹಾಗೂ ಮಹಾ ನಿರೀಕ್ಷಕ ಡಾ.ಎಂ.ಎ.ಸಲೀಂ ಸೂಚಿಸಿದ್ದಾರೆ.

ಚಾಮರಾಜನಗರ ಪೊಲೀಸ್ ವರಿಷ್ಠಾಧಿಕಾರಿ ಎಂ.ಮುತ್ತುರಾಜ್ ಅವರಿಗೆ ಫ್ಯಾಕ್ಸ್ ಸಂದೇಶ ರವಾನೆಯಾಗಿದ್ದು, ಜಿಲ್ಲೆಯ ರಾಮಾಪುರ, ಹನೂರು ಮತ್ತು ಕೊಳ್ಳೇಗಾಲ ಗ್ರಾಮಾಂತರ ಪೊಲೀಸ್ ಠಾಣೆಗಳಲ್ಲಿ ದಾಖಲಾಗಿರುವ ಶೂಟೌಟ್ ಪ್ರಕರಣ, ಕಳ್ಳಬೇಟೆ ಶಿಬಿರಗಳ ಧ್ವಂಸ, ಜೀಪ್ ಜಖಂ, ಕಾಡಿಗೆ ಬೆಂಕಿ ಪ್ರಕರಣಗಳನ್ನು ಹೆಚ್ಚಿನ ತನಿಖೆಗಾಗಿ ತಕ್ಷಣದಿಂದ ಜಾರಿಗೆ ಬರುವಂತೆ ಸಿಐಡಿಗೆ ವರ್ಗಾಯಿಸಲಾಗಿದೆ. ಪ್ರಕರಣಗಳ ಕಡತಗಳನ್ನು ಹೆಚ್ಚಿನ ತನಿಖೆಗಾಗಿ ಕೂಡಲೇ ಸಿಐಡಿಗೆ ವೈಯಕ್ತಿಕವಾಗಿ ಹಸ್ತಾಂತರಿಸಬೇಕು ಎಂದು ಆದೇಶದಲ್ಲಿ ತಿಳಿಸಿದ್ದಾರೆ.

ಸಿಐಡಿ, ವಿಶೇಷ ಘಟಕಗಳು ಮತ್ತು ಆರ್ಥಿಕ ಅಪರಾಧಗಳ ಪೊಲೀಸ್ ಮಹಾನಿರ್ದೇಶಕರು, ಮೇಲ್ಕಂಡ ಪ್ರಕರಣಗಳ ಮುಂದಿನ ತನಿಖೆಯನ್ನು ಕೈಗೊಳ್ಳಲು ಅಗತ್ಯಕ್ರಮ ಕೈಗೊಳ್ಳಬೇಕು. ಪ್ರಕರಣಗಳ ತನಿಖೆ ಪೂರ್ಣಗೊಂಡ ನಂತರ ವಿವರವಾದ ವರದಿಯನ್ನು ಈ ಕಚೇರಿಗೆ ಸಲ್ಲಿಸಬೇಕು ಎಂದು ಡಾ.ಎಂ.ಎ. ಸಲೀಂ ಸೂಚಿಸಿದ್ದಾರೆ.

ಕಾವೇರಿ ವನ್ಯಜೀವಿಧಾಮದ ಹೊಳೆಮೂರ್ದಟ್ಟಿ ಅರಣ್ಯದಲ್ಲಿ ಆ.15ರ ಮುಂಜಾನೆ ಬೇಟೆಗೆ ತೆರಳಿದ್ದರು ಎನ್ನಲಾದ ಮೂವರ ಮೇಲೆ ಅರಣ್ಯ ಇಲಾಖೆ ಅಧಿಕಾರಿಗಳು ಗುಂಡಿನ ದಾಳಿ ನಡೆಸಿದ್ದರು. ದಾಳಿಯಲ್ಲಿ ಮರಿಯಮಂಗಲ ಗ್ರಾಮದ ಅಂತೋಣಿ ಸ್ವಾಮಿ, ಜಗನಾಥ್ ದೊಡ್ಡಿ ಗ್ರಾಮದ ಜಾನ್ ರೋಸ್ ಪೀಟರ್, ಲಾಜರ್ ದೊಡ್ಡಿ ಗ್ರಾಮದ ಡೇವಿಡ್ ಕುಮಾರ್ ಮೃತಪಟ್ಟಿದ್ದರು. ಘಟನೆ ಖಂಡಿಸಿ ಮೃತರ ಕುಟುಂಬಸ್ಥರು, ಮಾರ್ಟಳ್ಳಿ–ಸಂದನಪಾಳ್ಯ, ಜಾಗೇರಿ ಭಾಗದ ಗ್ರಾಮಸ್ಥರು, ವಿವಿಧ ಕನ್ನಡಪರ ಸಂಘಟನೆಗಳು ಮತ್ತು ಕರ್ನಾಟಕ ರಾಜ್ಯ ರೈತ ಸಂಘದ ಪದಾಧಿಕಾರಿಗಳು ಆ.15 ಮತ್ತು 16ರಂದು ಹನೂರು ಪಟ್ಟಣದಲ್ಲಿ ಎರಡು ದಿನಗಳ ಕಾಲ ಬೃಹತ್ ಪ್ರತಿಭಟನೆ ನಡೆಸಿ, ಪ್ರಕರಣವನ್ನು ಸಿಐಐ ತನಿಖೆಗೆ ವಹಿಸಬೇಕೆಂದು ಆಗ್ರಹಿಸಿದ್ದರು.

ಪ್ರತಿಭಟನೆಯ ಬೆನ್ನಲ್ಲೇ ರಾಜ್ಯ ಸರ್ಕಾರದ ಸೂಚನೆಯಂತೆ ಜಿಲ್ಲಾಧಿಕಾರಿ ಶ್ರೀರೂಪಾ ಅವರು ಕೊಳ್ಳೇಗಾಲ ಉಪವಿಭಾಗಾಧಿಕಾರಿ ದಿನೇಶ್ ಕುಮಾರ್ ಮೀನಾ ಅವರ ನೇತೃತ್ವದಲ್ಲಿ ಮ್ಯಾಜಿಸ್ಟೇಟ್ ತನಿಖೆಗೆ ಆದೇಶಿಸಿದ್ದರು. ಏಳು ದಿನಗಳಲ್ಲಿ ವರದಿ ಸಲ್ಲಿಸುವಂತೆ ಸೂಚಿಸಲಾಗಿತ್ತು. ಅದರಂತೆ ದಿನೇಶ್ ಕುಮಾರ್ ಮೀನಾ ಅವರು ಶೂಟ್ಔಟ್ ನಡೆದ ಸ್ಥಳಕ್ಕೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಿದ್ದರು. ಬಳಿಕ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಸೋಕೋ ತಂಡ, ನಕ್ಸಲ್ ನಿಗ್ರಹ ದಳ, ಬಾಂಬ್ ನಿಷ್ಕ್ರಿಯ ದಳ ಮತ್ತು ಶ್ವಾನದಳ ಸೇರಿದಂತೆ ನುರಿತ ತಜ್ಞರ ತಂಡಗಳು ಸ್ಥಳ ಪರಿಶೀಲನೆ ನಡೆಸಿದ್ದವು.

ನಿಗದಿತ ಏಳು ದಿನಗಳಲ್ಲಿ ಸಂಪೂರ್ಣ ಮಾಹಿತಿ ಸಂಗ್ರಹಿಸಲು ಸಾಧ್ಯವಾಗದ ಹಿನ್ನೆಲೆ, ತನಿಖಾಧಿಕಾರಿ ದಿನೇಶ್ ಕುಮಾರ್ ಮೀನಾ ಅವರು ಜಿಲ್ಲಾಧಿಕಾರಿ ಶ್ರೀರೂಪಾ ಅವರಿಗೆ ಪತ್ರ ಬರೆದು ಮೂರು ದಿನಗಳ ಹೆಚ್ಚುವರಿ ಕಾಲಾವಕಾಶ ಕೋರಿದ್ದರು. ಅದಕ್ಕೆ ಜಿಲ್ಲಾಧಿಕಾರಿಗಳು ಅನುಮತಿ ನೀಡಿದ್ದರು.

ಆ.29 ರಂದು ಮಂಡ್ಯದಲ್ಲಿ ಚಿಗುರು ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮ

ಮಂಡ್ಯ: ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾ ಬಾಲ ಭವನ ಇವರ ಸಂಯೋಗದಲ್ಲಿ 2026–27 ನೇ ಸಾಲಿನ ಚಿಗುರು ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮ ವನ್ನು ಆಗಸ್ಟ್ 29 ರಂದು ಸಂಜೆ 5.00 ಗಂಟೆಗೆ ನಗರದ ಬಾಲ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಕೇಂದ್ರ ಸರ್ಕಾರದ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ .ಕುಮಾರಸ್ವಾಮಿ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ಬೃಹತ್ ಮತ್ತು ಮಧ್ಯಮ ನೀರಾವರಿ ಸಚಿವರು ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಕೃಷಿ ಸಚಿವ ಪಿ. ಎಂ. ನರೇಂದ್ರಸ್ವಾಮಿ ರವರು,ಶ್ರೀ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ ಅಧ್ಯಕ್ಷರು ಹಾಗೂ ಶ್ರೀರಂಗಪಟ್ಟಣ ವಿಧಾನಸಭಾ ಶಾಸಕ ಎ.ಬಿ ರಮೇಶ ಬಂಡಿಸಿದ್ದೇಗೌಡ, ರಾಜ್ಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಆಯೋಗದ ಅಧ್ಯಕ್ಷರಾದ ಡಾ. ಮೂರ್ತಿ ರವರು ಕಾರ್ಯಕ್ರಮದಲ್ಲಿ ಗೌರವ ಉಪಸ್ಥಿತಿ ವಹಿಸಲಿದ್ದಾರೆ.

ಮಂಡ್ಯ ವಿಧಾನಸಭಾ ಶಾಸಕ ಪಿ.ರವಿಕುಮಾರ್ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರು ಹಾಗೂ ವಿಧಾನಪರಿಷತ್ ಸದಸ್ಯರಾದ ದಿನೇಶ್ ಗೂಳಿಗೌಡ,ರಾಜ್ಯ ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ.ಎಸ್ ಆತ್ಮಾನಂದ,ಮೈಸೂರು ಸಕ್ಕರೆ ಕಂಪನಿ ನಿಯಮಿತ ಅಧ್ಯಕ್ಷರಾದ ಸಿ.ಡಿ ಗಂಗಾಧರ,ಕೈಮಗ್ಗ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಬಿ. ನಾಗೇಂದ್ರ ಕುಮಾರ್,ವಿಧಾನ ಪರಿಷತ್ ಶಾಸಕರುಗಳಾದ ಮಧು ಜಿ. ಮಾದೇಗೌಡ, ಕೆ. ವಿವೇಕಾನಂದ, ಬಿ.ಎಸ್. ಶಿವಣ್ಣ, ವಿಧಾನ ಸಭಾ ಶಾಸಕರುಗಳಾದ ದರ್ಶನ್ ಪುಟ್ಟಣ್ಣಯ್ಯ, ಹೆಚ್.ಟಿ ಮಂಜು, ಕೆ.ಎಂ ಉದಯ,ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷರಾದ ಡಾ.ಹೆಚ್.ಕೃಷ್ಣ,ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಪಿ ಪ್ರಕಾಶ್, ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಉಪಾಧ್ಯಕ್ಷರಾದ ವಿಜಯಲಕ್ಷ್ಮಿ ರಘುನಂದನ್,ಮಂಡ್ಯ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಮನೋಜ್ ಕುಮಾರ್ ಮೀನಾ ರವರು ಆಗಮಿಸಲಿದ್ದಾರೆ. ವಿಶೇಷ ಆಹ್ವಾನಿತರಾಗಿ ಜಿಲ್ಲಾಧಿಕಾರಿಗಳಾದ ಡಾ. ಕುಮಾರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳಾದ ಕೆ. ಆರ್. ನಂದಿನಿ, ಪೊಲೀಸ್ ಅಧೀಕ್ಷಕರಾದ ಡಾ. ಶೋಭಾರಾಣಿ ವಿ.ಜೆ, ಮೈಸೂರು ವಿಭಾಗದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕರಾದ ನಿರ್ಮಲಾ ಮಠಪತಿ ರವರು ಆಗಮಿಸಲಿದ್ದ

ಸಿನಿಮಾ ವರದಿ: ಬಿ.ಜೆ.ರವಿಕುಮಾರ್

ವರಮಹಾಲಕ್ಷ್ಮಿ ಹಬ್ಬದ ಸಂಭ್ರಮದಲ್ಲಿ ಸುಧಾರಾಣಿ ಹಾಗೂ ಗೋವರ್ಧನ್ ದಂಪತಿ

ವರಮಹಾಲಕ್ಷ್ಮಿ ಹಬ್ಬದ ಸಂಭ್ರಮದಲ್ಲಿ ಉಪೇಂದ್ರ ಹಾಗೂ ಪ್ರಿಯಾಂಕಾ ಉಪೇಂದ್ರ ದಂಪತಿ

ವರಮಹಾಲಕ್ಷ್ಮಿ ಹಬ್ಬದ ಸಂಭ್ರಮದಲ್ಲಿ ನಟಿ ಭಾವನಾ

ವರಮಹಾಲಕ್ಷ್ಮಿ ಹಬ್ಬದ ಸಂಭ್ರಮದಲ್ಲಿ ನಟಿ ಭಾವನಾ

ಅನಿರೀಕ್ಷಿತ ಹಾಡುಗಳೊಂದಿಗೆ ಅತಿಥಿಗಳ ಆಗಮನ!

ಅನಿರೀಕ್ಷಿತ ಅತಿಥಿಗಳು ಎನ್ನುವುದು ಸಿನಿಮಾದ ಹೆಸರು. ಚಿತ್ರದ ಹೆಸರಿಗೂ ಕ್ರೈಮ್ ಜಾನ್ರಾಗೂ ಸಂಬಂಧವೇ ಇಲ್ಲ ಎಂದುಕೊಂಡಿರುವಾಗಲೇ ಹಾಡುಗಳು ಇನ್ನಷ್ಟು ಕುತೂಹಲ ಸೃಷ್ಟಿಸುವ ರೀತಿಯಲ್ಲಿ ಮೂಡಿ ಬಂದಿವೆ. ಹಾಡುಗಳ ಬಿಡುಗಡೆಯ ಸುದ್ದಿಗೋಷ್ಠಿಯಲ್ಲಿ ಚಿತ್ರ ಮುಂದಿನ ತಿಂಗಳು ಅಂದರೆ ಸಪ್ಟೆಂಬರ್ 18ಕ್ಕೆ ರಿಲೀಸ್ ಆಗಲಿರುವುದಾಗಿಯೂ ಮಾಹಿತಿ ಹಂಚಿಕೊಂಡರು.

ಆರು ಪ್ರಮುಖ ಪಾತ್ರಗಳನ್ನು ಕೇಂದ್ರವಾಗಿಸಿರುವ ಈ ಚಿತ್ರವನ್ನು ನವ ನಿರ್ದೇಶಕ ಮನೋಜ್ ಅಣ್ಣಯ್ಯ ನಿರ್ದೇಶಿಸಿದ್ದಾರೆ. ಬಿ ವಿನೋದ್ ಕುಮಾರ್ ನಿರ್ಮಾಣದ ಈ ಚಿತ್ರದಲ್ಲಿ 4 ಪ್ರಮುಖ ಹಾಡುಗಳಿವೆ.

ಸ್ವಾಮಿನಾಥನ್ ಆರ್. ಕೆ ಸಂಗೀತದಲ್ಲಿ ಒಂದು ಲಿರಿಕಲ್ ಹಾಡು ಬಿಡುಗಡೆಯಾಗಿ ಈಗಾಗಲೇ ಸದ್ದು ಮಾಡುತ್ತಿದೆ. ಅದರ ವಿಡಿಯೋವನ್ನು ಪರದೆ ಮೇಲೆ ಪ್ರದರ್ಶಿಸಲಾಯಿತು. ಇನ್ನೊಂದು ಪಾಪ್ ಗೀತೆಯನ್ನು ಗಾಯಕಿ ಸಿರಿಕಟ್ಟೆಯವರು ಅದ್ಭುತವಾಗಿ ಹಾಡಿದ್ದಾರೆ. ಹಾಡು ಪೂರ್ತಿಯಾಗಿ ಆಂಗ್ಲದಲ್ಲಿದೆ. ಆದರೆ ಇದು ಸಂದರ್ಭಕ್ಕೆ ಹೊಂದುವಂತೆ ಗೀತೆ ಎಂದು ನಿರ್ದೇಶಕ ಮನೋಜ್ ಅಣ್ಣಯ್ಯ ಹೇಳಿದ್ದಾರೆ.

ಒಂದು ದಿನದಲ್ಲಿ ಗೆಸ್ಟ್ ಹೌಸ್ ನಲ್ಲಿ ನಡೆಯುವ ಕಥೆ. ಇದೊಂದು ಕ್ರೈಮ್ ಥ್ರಿಲ್ಲರ್. ಗಾಯಕಿ ಸಿರಿಕಟ್ಟೆ ಮಾತನಾಡಿ, ಈ ಚಿತ್ರದಲ್ಲಿ ನಾನು ಎರಡು ಹಾಡುಗಳನ್ನು ಹಾಡಿದ್ದೇನೆ. ಈ ಹಿಂದೆ ಹೆಜ್ಜಾರು, ಮಾಂಗ್ ದ ಯಂಗ್ ಎನ್ನುವ ಚಿತ್ರಗಳಲ್ಲಿ ಹಾಡಿದ್ದೇನೆ ಎಂದರು. ಮತ್ತೊಂದು ಹಾಡಿಗೆ ಧ್ವನಿಯಾದ ಹರ್ಷಿತಾ ದೇವನಾಥ್ ಮತ್ತು ರಜತ್ ಹೆಗ್ಡೆ ಗೀತೆಯ ಪಲ್ಲವಿಯನ್ನು ವೇದಿಕೆ ಮೇಲೆ ಆಲಾಪಿಸಿದರು.

ನಿರ್ಮಾಪಕ ಬಿ.ವಿನೋದ್ ಕುಮಾರ್ ಮಾತನಾಡಿ, ನಾನು ಸಹಾಯಕ ಛಾಯಾಗ್ರಾಹಕನಾಗಿ ತುಂಬ ಕೆಲಸ ಮಾಡಿ ಎಂಟ್ರಿ ಕೊಟ್ಟಿದ್ದೆ. ಜಗ್ಗಿಯವರ ಮೂಲಕ ನಿರ್ದೇಶಕ ಪರಿಚಯವಾದರು. ಒಂದೊಳ್ಳೆಯ ಎನರ್ಜಿ ಸಿಕ್ಕಿತು ಎಂದರು. ಯುವನಟ ವಿವೇಕ್ ಸಿಂಹ ಮಾತನಾಡಿ, ನಿರ್ದೇಶಕರೊಂದಿಗೆ ಹದಿನೈದು ವರ್ಷಗಳ ಸ್ನೇಹ. ನಾವೆಲ್ಲ ರಂಗಭೂಮಿಯಿಂದ ಬಂದವರು. ಇದು ಅನಿರೀಕ್ಷಿತವಾಗಿ ಆಗಿರುವ ಚಿತ್ರ ಎಂದರು.

ಚಿತ್ರದಲ್ಲಿ ನಾಯಕನ ಸ್ಥಾನದಲ್ಲಿರುವ ಮೈತ್ರಿ ಖ್ಯಾತಿಯ ನಟ ಜಗ್ಗಿ ಮಾತನಾಡಿ, ನಾನು 'ರಾಜರು ಚಿತ್ರದಲ್ಲಿ ನಟಿಸುವಾಗ ಅಸೋಸಿಯೇಟ್ ಕ್ಯಾಮರಾಮ್ಯಾನ್ ಆಗಿದ್ದವರೇ ಈ ಚಿತ್ರವನ್ನು ನಿರ್ಮಿಸಿದ್ದಾರೆ. ನಿರ್ದೇಶಕರು ಪ್ರತಿ ಪಾತ್ರವನ್ನು ಕೆತ್ತಿದ್ದಾರೆ ಎಂದರು.

ಚಿತ್ರದ ನಾಯಕಿ ಸಂಪ್ರತಿ ಆಳ್ವ ತಮ್ಮ ಹಾಡಿಗೆ ಕಂಠ ನೀಡಿರುವ ಗಾಯಕಿ ಸಿರಿಕಟ್ಟೆ ಬಗ್ಗೆ ಪ್ರಶಂಸೆ ವ್ಯಕ್ತಪಡಿಸಿದರು. ಈ ಹಿಂದೆ ಇದೇ ಗಾಯಕಿಯ ತಾಯಿಯ ಸಂಗೀತದಲ್ಲೂ ನಟಿಸಿದ್ದೆ. ಇದೀಗ ಸಿರಿಕಟ್ಟೆಯವರೇ ನನಗಾಗಿ ಹಾಡಿದ್ದಾರೆ ಎಂದು ಸಂಭ್ರಮಿಸಿದರು. ನಟ ಶ್ರೀದತ್ತ ಈ ಹಿಂದೆ ತಾವು ಮ್ಯಾನ್ ಆಫ್ ದಿ ಮ್ಯಾಚ್ ಸಿನಿಮಾ, ಹಾಗೂ ಒಂದು ಧಾರಾವಾಹಿಯಲ್ಲಿಯೂ ನಟಿಸಿದ್ದೆ ಎಂದರು.

ದೈವೀಕ್ ನಾಗ್ ತಾವು ರಾಬಿ ಎನ್ನುವ ಪಾತ್ರ ಮಾಡಿದ್ದಾಗಿ ತಿಳಿಸಿದರು. ಚಿತ್ರದ ಯಾಗ್ರಾಹಕ ಎರಿಕ್ ತುಂಬಾ ಶ್ರಮಜೀವಿ. ಅವರೇ ಡಿ.ಐ ಕೂಡ ಮಾಡಿದ್ದಾರೆ ಎಂದು ತಂಡದ ಮಂದಿ ನೆನಪಿಸಿಕೊಂಡರು.

ನವ ನಟಿ ಹರಿತಾ ಷಾ ಮಾತನಾಡಿ, ಪ್ರತಿ ಕಲಾವಿದರೂ ಸಿನಿಮಾದಲ್ಲಿ ಏನಾದರೂ ಕಲಿಯಬೇಕುಎಂದು ಳಳ ಎಂದುಕೊಳ್ಳುತ್ತಾರೆ. ನಾನು ಈ ಚಿತ್ರದ ಮೂಲಕ ತುಂಬ ಒಳ್ಳೆಯದನ್ನು ಕಲಿತಿದ್ದೇನೆ ಎಂದರು. ನಿರ್ದೇಶಕ ಮನೋಜ್ ಅಣ್ಣಯ್ಯ ಮಾತನಾಡುತ್ತಾ ನಾನು ಫನೀನಾಸಂ ವಿದ್ಯಾರ್ಥಿ. ಧಾರಾವಾಹಿ, ಸಿನಿಮಾಗಳಲ್ಲಿ ನಟಿಸಿದ್ದೇನೆ. ಅವಕಾಶಕ್ಕಾಗಿ ಖಿದ್ದಾಗಿ ಎರಡು ಕಿರುಚಿತ್ರಗಳನ್ನು ಮಾಡಿದೆ. ಆಗಲೂ ಜೊತೆಗಿದ್ದ ಛಾಯಾಗ್ರಾಹಕ ಮತ್ತು ಸಂಗೀತ ನಿರ್ದೇಶಕರೇ ಈ ಚಿತ್ರಕ್ಕೂ ಬಲವಾಗಿ ಜೊತೆಗಿದ್ದಾರೆ ಎಂದರು. ಈ ಹಿಂದೆ

1964 ಬ್ಯಾಕ್ ಡ್ರಾಪ್ ನಲ್ಲಿ ಒಂದು ಕಿರುಚಿತ್ರ ಮಾಡಿದ್ದೆ. ಅದನ್ನು ನೋಡಿಯೇ ವಿನೋದ್ ಅವರು ಚಿತ್ರ ನಿರ್ಮಿಸಲು ಮುಂದೆ ಬಂದರು.

ಟ್ರೇಲರ್ ನೋಡಿನೆ ಸುದ್ದಿಗೋಷ್ಠಿ ಮಾಡಬೇಕಿತ್ತು. ಆದರೆ ಹಾಡುಗಳೊಂದಿಗೆ ಬಂದಿದ್ದೇವೆ. ಒಂದು ಗೆಸ್ಟ್ ಹೌಸ್ ಗೆ ಅನಿರೀಕ್ಷಿತವಾಗಿ ಕಾಲಿಡುವ ಆರು ಮಂದಿ ಅತಿಥಿಗಳು, ಸೋಶಿಯಲ್ ಇಶ್ಯೂ ಕೂಡ ಸೇರಿದಂಥ ಒಂದು ಕ್ರೈಮ್ ಥ್ರಿಲ್ಲರ್ ಆಗಿ ಚಿತ್ರ ಇರಲಿದೆ ಎಂದರು.

ಇಡೀ ತಂಡ 25 ದಿನ ಬೇಲೂರಲ್ಲಿ ಚಿತ್ರೀಕರಣದಲ್ಲಿ ಭಾಗಿಯಾಗಿದ್ದೇ ಅತಿಥ್ಯ ಎಂದು ನಾಚಿಕೆಯ ನಗುವಲ್ಲೇ ತಿಸಿದರು. ಲಸಾಹಸ ನಿರ್ದೇಶಕ ಶ್ರೀರಾಮ್ ಚಿತ್ರದಲ್ಲಿ 4 ಫೈಟ್ಸ್ ಇರುವುದಾಗಿ ತಿಳಿಸಿದರು.ಗೋಕುಲ್ ಚಕ್ರವರ್ತಿ ಸೇರಿದಂತೆ ಚಿತ್ರದ ಪೋಷಕ ಕಲಾವಿದರು ಕೂಡ. ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

20 ವರ್ಷಗಳ ನಂತರ ರಂಗಭೂಮಿ ಅಖಾಡಕ್ಕಿಳಿದ ರಾಜೇಶ್



ರಂಗಭೂಮಿಯಲ್ಲಿ ಹೊಸಾ ಸಾಧ್ಯತೆಗಳ ಅನ್ವೇಷಣೆಯ ತುಡಿತದೊಂದಿಗೆ ಜೀವ ಪಡೆದಿರುವ ತಂಡ 'ಕಲಾದ್ಯುತಿ ಪ್ರೊಡಕ್ಷನ್ಸ್'. ಒಂದು ಕಾಲದಲ್ಲಿ ಜನ ನೋಡಿ ರೋಮಾಂಚಿತರಾಗಿದ್ದ ನಾಟಕಗಳನ್ನು ಮತ್ತೆ ಪ್ರೇಕ್ಷಕರ ಮುಂದೆ ಪ್ರಸುತಪಡಿಸುತ್ತಲೇ, ಒಂದಷ್ಟು ಪ್ರಯೋಗಾತ್ಮಕ ಪ್ರಯತ್ನಗಳ ಉದ್ದೇಶ ಹೊಂದಿರುವ ಕಲಾದ್ಯುತಿ ಪ್ರೊಡಕ್ಷನ್ಸ್ ವತಿಯಿಂದ ಪ್ರದರ್ಶನಗೊಂಡಿದ್ದ 'ಉಂಡಾಡಿ ಗುಂಡ' ನಾಟಕ ಯಶಸ್ವಿಯಾಗಿತ್ತು. ಇದೀಗ ಎರಡನೇ ಹೆಜ್ಜೆಯಾಗಿ 'ಮಳೆ ನಿಲ್ಲುವವರೆಗೆ' ಎಂಬ ನಾಟಕ ಇದೇ ಸೆಪ್ಟೆಂಬರ್ 17ನೇ ತಾರೀಕಿನಂದು ಸಂಜೆ 7.30ಕ್ಕೆ ಬೆಂಗಳೂರಿನ ಚೌಡಯ್ಯ ಮೆಮೋರಿಯಲ್ ಹಾಲ್ನಲ್ಲಿ ಪ್ರದರ್ಶನಗೊಳ್ಳಲಿದೆ.

ವಿಶೇಷವೆಂದರೆ, ಪ್ರಸಿದ್ಧ ನಟ, ಲೇಖಕ ಎಲ್.ಎಸ್ ಸುಧೀಂದ್ರ ಜರ್ಮನ್ ಕಥೆಯನ್ನು ಆಧರಿಸಿ ಕನ್ನಡಕ್ಕೆ ರೂಪಾಂತರಿಸಿರುವ 'ಮಳೆ ನಿಲ್ಲುವವರೆಗೆ' ನಾಟಕದ ಮೂಲಕ ನಟ ರಾಜೇಶ್ ನಟರಂಗ ರಂಗಭೂಮಿಗೆ ಮರಳಿದ್ದಾರೆ. ನಟನಾಗಿ ತಮ್ಮದೇ ಛಾಪು ಮೂಡಿಸಿರುವ ರಾಜೇಶ್ ನಟರಂಗ ರಂಗಭೂಮಿಯೊಂದಿಗೆ ಆಪ್ತವಾದ ನಂಟು ಹೊಂದಿರುವವರು. ಭರ್ತಿ ಇಪ್ಪತ್ತು ವರ್ಷಗಳ ನಂತರ ಈ ನಾಟಕದ ಮೂಲಕ ರಾಜೇಶ್ ಅವರು ನಾಟಕಕ್ಕೆ ಬಣ್ಣ ಹಚ್ಚುತ್ತಿದ್ದಾರೆ. ಅವರ ಅಭಿಮಾನಿಗಳಿಗೆಲ್ಲ ತಮ್ಮಿಷ್ಟದ ನಟನ ನಟನಾ ಕೌಶಲ್ಯವನ್ನು ನೇರವಾಗಿ ಕಣ್ಣು ತುಂಬಿಕೊಳ್ಳುವ ಅವಕಾಶ ಈ ಮೂಲಕ ಕೂಡಿ ಬಂದಿದೆ.

ಈ ನಾಟಕವನ್ನು ಶರತ್ ಪರ್ವತವಾಣಿ ನಿರ್ದೇಶನ ಮಾಡಲಿದ್ದಾರೆ. ರೋಚಕ ಥ್ರಿಲ್ಲರ್ ಶೈಲಿಯ 'ಮಳೆ ನಿಲ್ಲುವವರೆಗೆ' ನಾಟಕ ಒಂದು ಆಟದಂತೆ ಪ್ರಾರಂಭವಾಗಿ ಬೆರಗು ಮೂಡಿಸುವ ತಿರುವುಗಳನ್ನು ಪಡೆದು, ವಿಶಿಷ್ಟ ಪಾತ್ರಗಳ ನಡುವೆ ನಡೆಯುವ ಸಸ್ಪೆನ್ಸ್ ಕಥಾ ಹಂದರವನ್ನೊಳಗೊಂಡಿದೆ. ಪ್ರತೀ ಕ್ಷಣವೂ ಉಸಿರು ಬಿಗಿಹಿಡಿದು ನೋಡುವಂತೆ ಮಾಡೋ ಗುಣ ಹೊಂದಿರೋ ಈ ನಾಟಕ ಹೊಸಾ ತಲೆಮಾರಿಗೂ ಕೂಡಾ ಅದ್ಭುತ ಅನುಭೂತಿ ತುಂಬುವಂತೆ ಮೂಡಿ ಬರಲಿದೆ. ಹಾಗೆ ಹೊಸಾ ತಲೆಮಾರಿನ ಯುವ ಸಮುದಾಯ ನೋಡಿ ಆನಂದಿಸಿದರೆ ಕಲಾದ್ಯುತಿ ಪ್ರೊಡಕ್ಷನ್ಸ್ ಸಂಸ್ಥೆಯ ಮೂಲ ಆಶಯ ಕೈಗೂಡಿದಂತಾಗುತ್ತದೆ.

ಈ ನಾಟಕವನ್ನು ರಚಿಸಿರುವ ಎಲ್. ಎಸ್ ಸುಧೀಂದ್ರ ಕ್ಲಾಸ್1 ಕೆಎಎಸ್ ಅಧಿಕಾರಿಯಾಗಿದ್ದವರು.

ಸರ್ಕಾರಿ ಅಧಿಕಾರಿಯಾಗಿದ್ದರೂ ಅತೀವ ಕಲಾಪ್ರೇಮ ಹೊಂದಿದ್ದ ಸುಧೀಂದ್ರ ಅವರು ರಂಗಭೂಮಿಗೆ ಅನುಕೂಲವಾಗುವಂಥಾ ಅನೇಕ ಕೆಲಸ ಕಾರ್ಯಗಳನ್ನು ತಮ್ಮ ಸೇವಾವಧಿಯಲ್ಲಿ ಮಾಡಿದ್ದರು. ಈಗ ನಮ್ಮೊಂದಿಗಿರದ ಸುಧೀಂದ್ರ ಅವರ ಪರಿವಾರವನ್ನು ಕಲಾದ್ಯುತಿ ತಂಡ ರಿಚರ್ಡ್ ಲೂಯಿಸ್ ಅವರ ಸಹಕಾರದಿಂದ ಸಂಪರ್ಕಿಸಿದೆ. ಬಹಳಷ್ಟು ಪ್ರಯತ್ನ ನಡೆಸಿ ಈ ನಾಟಕದ ಪ್ರತಿಯನ್ನು ಕಲೆ ಹಾಕಿ ಅದಕ್ಕೆ ನವ ಸ್ಪರ್ಶ ನೀಡಿ ಪ್ರೇಕ್ಷಕರ ಮುಂದೆ ತರುತ್ತಿದೆ. ಜಾಹೀರಾತು ನಿರ್ಮಾಣ ಲೋಕದಲ್ಲಿ ದೊಡ್ಡ ಹೆಸರು ಮಾಡಿರುವ ಪ್ರದೀಪ್ ಬೆಳವಾಡಿ ಅವರು ಈ ನಾಟಕದ ಸೆಟ್ ರೂಪಿಸಲಿದ್ದಾರೆ. ಒಟ್ಟಾರೆಯಾಗಿ 'ಮಳೆ ನಿಲ್ಲುವವರೆಗೆ' ನಾಟಕದ ಮೂಲಕ ರಂಗಭೂಮಿಯಲ್ಲಿ ನವ ಸಂಚನವೊಂದು ಮೂಡಿಕೊಳ್ಳುವ ಘಳಿಗೆ ಸಮೀಪಿಸುತ್ತಿದೆ.

ತಮ್ಮ ಸುಖಾಗಮನ ಬಯಸುವ ಚಿತ್ರ: ಗಣೇಶ್‌ಗೆ -ಸಂಜನಾ ಜೋಡಿ

ಗಣೇಶ್ ನಟನೆಯ 'ತಮ್ಮ ಸುಖಾಗಮನ ಬಯಸುವ' ಚಿತ್ರಕ್ಕೆ ನಾಯಕಿಯಾಗಿ ಸಂಜನಾ ಆನಂದ್ ಆಯ್ಕೆಯಾಗಿದ್ದಾರೆ.

ಈ ಮೂಲಕ ಇಬ್ಬರು ಕಲಾವಿದರು ಇದೇ ಮೊದಲ ಬಾರಿಗೆ ತೆರೆಹಂಚಿಕೊಳ್ಳುತ್ತಿದ್ದಾರೆ. ರಾಮೇನಹಳ್ಳಿ ಜಗನ್ನಾಥ್ ನಿರ್ದೇಶಿಸುತ್ತಿರುವ ಈ ಕೌಟುಂಬಿಕ ಕಥಾಹಂದರದ ಚಿತ್ರವು ಸದ್ಯ ಭರದಿಂದ ಚಿತ್ರೀಕರಣಗೊಳ್ಳುತ್ತಿದ್ದು, ಬೆಂಗಳೂರಿನಲ್ಲಿ ತನ್ನ ಮೊದಲ ಹಂತದ ಚಿತ್ರೀಕರಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದೆ.

'ಹೊಂದಿಸಿ ಬರೆಯಿರಿ' ಚಿತ್ರದ ಮೂಲಕ ಗಮನಸೆಳೆದಿದ್ದ ರಾಮೇನಹಳ್ಳಿ ಜಗನ್ನಾಥ್, ಈ ಬಾರಿಯೂ ಭಾವನೆಗಳಿಗೆ ಒತ್ತು ನೀಡುವ ಕಥೆಯನ್ನು ಆಯ್ದುಕೊಂಡಿದ್ದಾರೆ. ಗಣೇಶ್ ಅವರ ನಟನಾ ಶೈಲಿಯನ್ನು ಮನಸ್ಸಿನಲ್ಲಿಟ್ಟುಕೊಂಡೇ ಜಗನ್ನಾಥ್ ಈ ಚಿತ್ರದ ಕಥೆಯನ್ನು ಸಿದ್ಧಪಡಿಸಿದ್ದಾರೆ. ಗಣೇಶ್ ಅವರ ಐಕಾನಿಕ್ ಚಿತ್ರ 'ಮುಂಗಾರು ಮಳೆ'ಯಿಂದ ಪ್ರೇರಿತರಾಗಿ ಅವರೊಂದಿಗೆ ಕೆಲಸ ಮಾಡುವ ಇಚ್ಛೆ ಹೊಂದಿದ್ದ ನಿರ್ದೇಶಕರಿಗೆ, ಈ ಸಿನಿಮಾ ಅತ್ಯಂತ ವಿಶೇಷ.

ಗೋಲ್ಡನ್ ಸ್ಟಾರ್ ಗಣೇಶ್ ಅವರ ಸ್ಯಾಂಡಲ್‌ವುಡ್‌ನಲ್ಲಿ 20 ವರ್ಷಗಳ ಯಶಸ್ವಿ ಪಯಣವನ್ನು ಸಂಭ್ರಮಿಸುವ ವಿಶೇಷ ಚಿತ್ರವಾಗಿ ಇದು ಹೊರಹೊಮ್ಮುತ್ತಿದೆ. ಗಣೇಶ್ ಅವರ ದಶಕಗಳ ಕೊಡುಗೆಗೆ ಗೌರವ ಸೂಚಿಸುವಂತೆ ಈ ಚಿತ್ರವನ್ನು ರೂಪಿಸಲಾಗುತ್ತಿದೆ. ವೈಷ್ಣವಿ ಫಿಲ್ಮ್ಸ್ ಲಾಂಛನದಲ್ಲಿ ಅಶ್ವಿನಿ ವಿಜಯ ಲೋಹಿತ್ ಅವರು ಈ ಚಿತ್ರವನ್ನು ನಿರ್ಮಿಸುತ್ತಿದ್ದು, ಸತೀಶ್ ಹೆಚ್. ಗೌಡ ಸಹ-ನಿರ್ಮಾಪಕರಾಗಿ ಸಾಥ್ ನೀಡಿದ್ದಾರೆ.

ಈ ಕೌಟುಂಬಿಕ ಚಿತ್ರಕ್ಕೆ ದೊಡ್ಡ ತಾರಾಬಳಗದ ಬಲವಿದೆ. ಅನುಭವಿ ನಟರಾದ ರಂಗಾಯಣ ರಘು, ಅಚ್ಯುತ್ ಕುಮಾರ್ ಮತ್ತು ಸಾಧು ಕೋಕಿಲ ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಪ್ರಸಿದ್ಧ ಸಂಗೀತ ನಿರ್ದೇಶಕ ಅರ್ಜುನ್ ಜನ್ಯ ಸಂಗೀತ ಸಂಯೋಜನೆ ಮಾಡುತ್ತಿದ್ದರೆ, ನವೀನ್‌ಕುಮಾರ್ ಐ ಅವರ ಛಾಯಾಗ್ರಹಣ ಚಿತ್ರಕ್ಕಿರಲಿದೆ. ಹೊಸ ಜೋಡಿಯಾದ ಗಣೇಶ್ ಹಾಗೂ ಸಂಜನಾ ಆನಂದ್ ಅವರ ಕೆಮಿಸ್ಟ್ರಿ ಚಿತ್ರದ ಪ್ರಮುಖ ಆಕರ್ಷಣೆಯಾಗಲಿದೆ ಎಂದು ನಿರೀಕ್ಷಿಸಲಾಗಿದೆ.

ಸದ್ಯಕ್ಕೆ ಚಿತ್ರದ ಮುಖ್ಯ ಕಥಾವಸ್ತು ಹಾಗೂ ಪಾತ್ರಗಳ ವಿವರಗಳನ್ನು ಚಿತ್ರತಂಡ ಗುಟ್ಟಾಗಿಟ್ಟಿದೆ. ಇತ್ತೀಚಿನ ದಿನಗಳಲ್ಲಿ ಸಾಲು ಸಾಲು ಸಿನಿಮಾಗಳಲ್ಲಿ ಬ್ಯುಸಿಯಾಗಿರುವ ಸಂಜನಾ ಆನಂದ್ ಅವರಿಗೆ ಈ ಸಿನಿಮಾ ದೊಡ್ಡ ಮೈಲಿಗಲ್ಲಾಗುವ ಸಾಧ್ಯತೆಯಿದೆ. ಮುಂದಿನ ದಿನಗಳಲ್ಲಿ ಚಿತ್ರದ ಉಳಿದ ತಾರಾಗಣ ಹಾಗೂ ಪಾತ್ರಗಳ ಕುರಿತು ಹೆಚ್ಚಿನ ಮಾಹಿತಿಗಳನ್ನು ಹಂಚಿಕೊಳ್ಳುವುದಾಗಿ ಚಿತ್ರತಂಡ ತಿಳಿಸಿದೆ.

'ಕೂರ್ಮಾವತಾರ್' ಟೈಟಲ್ ಟೀಸರ್

ಶ್ರೀಮಹಾವಿಷ್ಣುವಿನ ಎರಡನೇ ಅವತಾರವಾದ 'ಕೂರ್ಮಾವತಾರ'ದ ಕಥಾಹಂದರವನ್ನು ಆಧರಿಸಿ ಸಿದ್ಧವಾಗುತ್ತಿರುವ ಮಹತ್ವಾಕಾಂಕ್ಷೆಯ ಚಿತ್ರಕ್ಕೆ 'ಕೂರ್ಮಾವತಾರ್' ಎಂದು ನಾಮಕರಣ ಮಾಡಲಾಗಿದ್ದು, ಚಿತ್ರತಂಡ ಅಧಿಕೃತ ಟೈಟಲ್ ರಿವೀಲ್ ಟೀಸರ್ ಬಿಡುಗಡೆ ಮಾಡಿದೆ. ಈಗಾಗಲೇ ಟೀಸರ್ ಅಭಿಮಾನಿಗಳಲ್ಲಿ ಭಾರಿ ಕುತೂಹಲ ಮೂಡಿಸಿದೆ.

ಹರ್ಷ ವರ್ಧನ್ ಕಡಿಯಾಲ ನಿರ್ದೇಶಿಸುತ್ತಿದ್ದು, ಪಂಚವಕ್ತ ಪಿಕ್ಚರ್ಸ್ ಹಾಗೂ ರುಕ್ವಿನಾ ಸ್ಟುಡಿಯೋಸ್ ಜಂಟಿ ಬ್ಯಾನರ್‌ಗಳ ಅಡಿಯಲ್ಲಿ ಪೂಜಿತ ಕಡಿಯಾಲ ಮತ್ತು ನರೇಂದ್ರ ಕೊಂಡ ಬೃಹತ್ ಬಜೆಟ್‌ನಲ್ಲಿ ನಿರ್ಮಿಸುತ್ತಿದ್ದಾರೆ. ಈ ಚಿತ್ರದಲ್ಲಿ ಭಾರತೀಯ ಚಿತ್ರರಂಗದ ಖ್ಯಾತ ನಟ-ನಟಿಯರ ದಂಡೇ ಇದೆ.ಶಿವರಾಜ್‌ಕುಮಾರ್ ಅವರೊಂದಿಗೆ ತೆಲುಗು ನಟ ರಾಜ್ ತರುಣ್, ಶಿವಾಜಿ, ವರಲಕ್ಷ್ಮಿ ಶರತ್‌ಕುಮಾರ್, ಸಾಯಿ ಕುಮಾರ್, ರಾಜಾ ರವೀಂದ್ರ, ವಿಟಿವಿ ಗಣೇಶ್, ಸಪ್ತಗಿರಿ, ಗೆಟಪ್ ಶ್ರೀನು, ಶತ್ರು, ಮಹೇಶ್ ವಿಟ್ಟ ಮತ್ತು ಅತಿರಾ ರಾಜ್ ಮುಂತಾದ ಕಲಾವಿದರು ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಳ್ಳಲಿದ್ದಾರೆ.

'ಕೂರ್ಮಾವತಾರ್', ಭಾರತದ ಪ್ರಮುಖ ಭಾಷೆಗಳಲ್ಲಿ ಏಕಕಾಲದಲ್ಲಿ ತೆರೆಗೆ ಬರಲು ಸಜ್ಜಾಗುತ್ತಿದೆ.

"NH66"ನಲ್ಲಿ ಶೃತಿ ಹರಿಹರನ್ ಫಸ್ಟ್ ಲುಕ್ ಬಂತು

ರಾಯ ಫಿಲಂಸ್ ಲಾಂಛನದಲ್ಲಿ ಮಂಜುನಾಥ್ ಟಿ.ಆರ್ ನಿರ್ಮಿಸಿ, ನಿರ್ದೇಶಿಸಿರುವ "ಓಊ 66" ಚಿತ್ರದಲ್ಲಿ ಪ್ರಮೋದ್ ಶೆಟ್ಟಿ, ಶೃತಿ ಹರಿಹರನ್, ರಾಜೇಶ್ ನಟರಂಗ ನಟಿಸಿದ್ದಾರೆ. ಇತ್ತೀಚೆಗಷ್ಟೇ ಪ್ರಮೋದ್ ಶೆಟ್ಟಿ ಅವರ ಫಸ್ಟ್ ಲಕ್ ಬಿಡುಗಡೆ ಮಾಡಿದ್ದ ಚಿತ್ರತಂಡ ಈಗ ಶೃತಿ ಹರಿಹರನ್ ಅವರ ಫಸ್ಟ್ ಲುಕ್ ಅನಾವರಣ ಮಾಡಿದೆ. "ಓಊ 66", ಹೆಸರೇ ಹೇಳುವಂತೆ ಒಂದು ಸಂಚಾರಿ ಕಥೆಯಾಗಿದೆ. "ಔಟಿಜ ಘಝ್ಯತಿಚಿಥಿ ಟಚಿಟಿಥಿ ಜಭಿಡಿಜಿಣ್" ಎಂಬ ಅಡಿಬರಹ ಈ ಚಿತ್ರಕ್ಕಿದೆ. ಮೂರು ಮುಖ್ಯಪಾತ್ರಗಳ ಸುತ್ತ ನಿರ್ದೇಶಕರು ರೋಮಾಂಚನಕಾರಿ ಕಥೆ ಹೆಣೆದಿದ್ದಾರೆ. ಇದು ಮಂಗಳೂರಿನಿಂದ ಮುಂಬೈಗೆ ಸಾಗುವ ಮಾರ್ಗದಲ್ಲಿ ನಡೆಯುವ ಕಥೆಯಾಗಿರಲಿದೆ. ಈ ಚಿತ್ರದಲ್ಲಿ ಪ್ರಮೋದ್ ಶೆಟ್ಟಿ ಕ್ಯಾಬ್ ಚಾಲಕನಾಗಿ ಅಭಿನಯಿಸುತ್ತಿದ್ದಾರೆ. ಶೃತಿ ಹರಿಹರನ್ ಅವರದು ಪಯಣಿಗರ ಪಾತ್ರ. ಕನ್ನಡ ಸೇರಿದಂತೆ ಅನೇಕ ಭಾಷೆಗಳಲ್ಲಿ ತಮ್ಮದೇ ಆದ ಛಾಪು ಮೂಡಿಸಿರುವ ಶೃತಿ ಹರಿಹರನ್, "ಓಊ 66" ಚಿತ್ರದಲ್ಲಿ ಈವರೆಗೂ ಮಾಡಿರದ ಪಾತ್ರ ಮಾಡಿದ್ದಾರೆ. ಇತ್ತೀಚೆಗಷ್ಟೇ ಶೃತಿ ಹರಿಹರನ್ ಅವರ ಫಸ್ಟ್ ಲುಕ್ ಅನಾವರಣವಾಗಿದ್ದು, ಫಸ್ಟ್ ಲುಕ್‌ಗೆ ಮೆಚ್ಚುಗೆ ವ್ಯಕ್ತವಾಗಿದೆ. ಚಿತ್ರದ ಕುರಿತು ಕೂಡ ನಿರೀಕ್ಷೆ ಹೆಚ್ಚಾಗಿದೆ. ಈಗಾಗಲೇ ಚಿತ್ರೀಕರಣ ಹಾಗೂ ಪೋಸ್ಟ್ ಪ್ರೊಡಕ್ಷನ್ ವರ್ಕ್ ಪೂ